ಸಂಪುಟ: 06 ಸಂಚಿಕೆ: 48 ಪುಟಗಳು: 08 ಶನಿವಾರ 02 ಮೇ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5
ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ದೊಡ್ಡ ಗುರಿ, ಜ್ಞಾನದ ಸಂಪಾದನೆ, ಕಠಿಣ ಪರಿಶ್ರಮ ಮತ್ತು ದೃಢ ಹಾಗೂ ಸತತ ಪ್ರಯತ್ನ ಎಂಬ ನಾಲ್ಕು ವಿಷಯಗಳನ್ನು ಅನುಸರಿಸಿದರೆ ಏನು ಬೇಕಾದರೂ ಸಾಧಿಸಬಹುದು.

## ಸಿಲಿಂಡರ್ ದುಬಾರಿ ಅಭಾವದ ನಡುವೆ ಇದ್ಯಾಕ್ರೀ

### ವಾಣಿಜ್ಯ ಸಿಲಿಂಡರ್‌ಗಳ ಬೆಲೆ 993 ರೂ. ಏರಿಕೆ




ಗಗನಕ್ಕೇರಿದ LPG ಸಿಲಿಂಡರ್

1. ಮೇ 1 ಜಾರಿಗೆ ಬರುವಂತೆ 19 ಕೆಜಿ ತೂಕದ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆ ಏರಿಕೆ.
2. 19 ಕೆಜಿ ವಾಣಿಜ್ಯ ಸಿಲಿಂಡರ್ ಬೆಲೆ ದೆಹಲಿಯಲ್ಲಿ 3,071 ರೂ., ಬೆಂಗಳೂರಿನಲ್ಲಿ 3154 ರೂ. ತಲುಪಿದೆ.
3. 14.2 ಕೆಜಿ ಸಿಲಿಂಡರ್ ದರ ಯಥಾಸ್ಥಿತಿ; ಗೃಹಬಳಕೆದಾರರಿಗೆ ಸದ್ಯಕ್ಕೆ ಯಾವುದೇ ಹೊರೆಯಾಗಿಲ್ಲ.
4. 5 ಕೆಜಿ ಫ್ರೀ ಟ್ರೇಡ್ ಎಲ್‌ಪಿಜಿ (ಎಫ್‌ಟಿಎಲ್) ಸಿಲಿಂಡರ್‌ಗಳ ಬೆಲೆಯನ್ನು 261 ರೂ. ಏರಿಕೆ.

• ಉದಯವಾಹಿನಿ, ನವದೆಹಲಿ

ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧದ ಹಿನ್ನೆಲೆಯಲ್ಲಿ ಜಾಗತಿಕ ಇಂಧನ ಪೂರೈಕೆ ಬಿಕ್ಕಟ್ಟಿನ ನಡುವೆ, ದೇಶಾದ್ಯಂತ 19 ಕೆಜಿ ವಾಣಿಜ್ಯ ಸಿಲಿಂಡರ್‌ಗಳ ಬೆಲೆಯನ್ನು ಶುಕ್ರವಾರರಿಂದ ಜಾರಿಗೆ ಬರುವಂತೆ 993 ರೂ. ಹೆಚ್ಚಿಸಲಾಗಿದೆ. ಆದರೆ, ಪೆಟ್ರೋಲ್, ಡೀಸೆಲ್ ಮತ್ತು ಗೃಹಬಳಕೆ ಎಲ್‌ಪಿಜಿ ದರಗಳಲ್ಲಿ ಯಾವುದೇ ಏರಿಕೆ ಕಂಡುಬಂದಿಲ್ಲ. ಮೂಲಗಳನ್ನು ಉಲ್ಲೇಖಿಸಿ, ಎಎನ್‌ಐ ವರದಿ ಮಾಡಿದ್ದು, ಇಂದಿನಿಂದ 19 ಕೆಜಿ ವಾಣಿಜ್ಯ ಸಿಲಿಂಡರ್‌ನ ಬೆಲೆ 993 ರೂ. ಹೆಚ್ಚಿಸಲಾಗಿದೆ. ಗೃಹಬಳಕೆ ಗ್ಯಾಸ್ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ತಿಳಿಸಿದೆ.

ಫೆಬ್ರವರಿ 28ರಂದು ಸಂಘರ್ಷ ಭುಗಿಲೆದ್ದ ನಂತರ ಈಗ ಮೂರನೇ ಬಾರಿಗೆ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆಯನ್ನು ಹೆಚ್ಚಳವಾಗಿದೆ.

ಮಾರ್ಚ್ 1ರಂದು 144 ರೂ.ಗಳಷ್ಟು ಏರಿಕೆ ಮಾಡಲಾಗಿದ್ದು, ಬಳಿಕ ಮತ್ತೆ ಏಪ್ರಿಲ್ 1 ರಂದು 19 ಕೆಜಿ ಸಿಲಿಂಡರ್ ದರವು ಸುಮಾರು 200 ರೂ. ಹೆಚ್ಚಳವಾಗಿತ್ತು.

ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ, ಇಂದಿನಿಂದ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆ 993 ರೂ.ಗಳಷ್ಟು ಏರಿಕೆಯಾಗಿದೆ. ಇಂದಿನಿಂದ, ಈ ಸಿಲಿಂಡರ್ ಬೆಲೆ 3,071 ರೂ. ಆಗಿದ್ದು, ಈ ಹಿಂದಿನ ಬೆಲೆ 2,078ರಷ್ಟಿತ್ತು. ಮುಂಬೈ ಮಹಾನಗರದಲ್ಲಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆಯೂ ಏರಿಕೆಯಾಗಿದೆ. ಇಲ್ಲಿ, ಸಿಲಿಂಡರ್ ಬೆಲೆ 3,024 ರೂ.ಗೆ ಏರಿಕೆಯಾಗಿದೆ. ಹಿಂದೆ, 2,031 ರೂ. ಆಗಿತ್ತು.

**ಮೂರನೇ ಬಾರಿಗೆ ದರ ಹೆಚ್ಚಳ**

ಫೆಬ್ರವರಿ 28ರಂದು ಸಂಘರ್ಷ ಭುಗಿಲೆದ್ದ ನಂತರ ಈಗ ಮೂರನೇ ಬಾರಿಗೆ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆ ಹೆಚ್ಚಳವಾಗಿದೆ. ಮಾರ್ಚ್ 1ರಂದು 144 ರೂ.ಗಳಷ್ಟು ಏರಿಕೆ ಮಾಡಲಾಗಿದ್ದು, ಬಳಿಕ ಮತ್ತೆ ಏಪ್ರಿಲ್ 1 ರಂದು 19 ಕೆಜಿ ಸಿಲಿಂಡರ್ ದರವು ಸುಮಾರು 200 ರೂ. ಹೆಚ್ಚಳವಾಗಿತ್ತು. ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ, ಇಂದಿನಿಂದ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆ 993 ರೂ.ಗಳಷ್ಟು ಏರಿಕೆಯಾಗಿದೆ. ಇಂದಿನಿಂದ, ಈ ಸಿಲಿಂಡರ್ ಬೆಲೆ 3,071 ರೂ. ಆಗಿದ್ದು, ಈ ಹಿಂದಿನ ಬೆಲೆ 2,078ರಷ್ಟಿತ್ತು. ಮುಂಬೈ ಮಹಾನಗರದಲ್ಲಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆಯೂ ಏರಿಕೆಯಾಗಿದೆ. ಇಲ್ಲಿ, ಸಿಲಿಂಡರ್ ಬೆಲೆ 3,024 ರೂ.ಗೆ ಏರಿಕೆಯಾಗಿದೆ. ಹಿಂದೆ, 2,031 ರೂ. ಆಗಿತ್ತು.

ಕೋಲ್ಕತ್ತಾದಲ್ಲಿ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆಯನ್ನು 994 ರೂ.ಗಳಷ್ಟು ಹೆಚ್ಚಿಸಲಾಗಿದೆ. ಬೆಲೆ ಏರಿಕೆ ತಕ್ಷಣದಿಂದ ಜಾರಿಗೆ ಬಂದಿದ್ದು, ಸಿಲಿಂಡರ್ 3,202 ರೂ.ಗೆ ದೊರೆಯುತ್ತಿದೆ. ಹಿಂದೆ, ಇದರ ಬೆಲೆ 2,208 ರೂ. ಇತ್ತು. ಚೆನ್ನೈಗೆ ಸಂಬಂಧಿಸಿದಂತೆ, ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆ 3,237 ರೂ.ಗೆ ಏರಿಕೆಯಾಗಿದೆ. ಚೆನ್ನೈನಲ್ಲಿ ಹಿಂದೆ, ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳು ರೂ. 2,246.50ಕ್ಕೆ ಮಾರಾಟ ಮಾಡಲಾಗುತ್ತಿತ್ತು.

**ಇಂದಿನಿಂದ ಹೊಸ ನಿಯಮಗಳು ಜಾರಿಗೆ:** ಮೇ 1ರಿಂದ ಜಾರಿಗೆ ಬರುವಂತೆ, ಕೇಂದ್ರ ಸರ್ಕಾರ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ವಿತರಣೆಗೆ ಹೊಸ ನಿಯಮಗಳನ್ನು ಜಾರಿಗೆ ತಂದಿದೆ. ಗ್ರಾಹಕರ ಅನುಕೂಲ ಹಾಗೂ ಪೂರೈಕೆ ವ್ಯವಸ್ಥೆಯ ಪಾರದರ್ಶಕತೆ ಹೆಚ್ಚಿಸಲು ಮೇ 1ರಿಂದ ಹೊಸ ನಿಯಮಗಳನ್ನು ಜಾರಿಗೆ ತರುವುದಾಗಿ ಘೋಷಿಸಿದೆ.

ಭದ್ರತಾ ಕ್ರಮವಾಗಿ, ವಿತರಣಾ ದೃಢೀಕರಣ ಕೋಡ್ ವ್ಯವಸ್ಥೆಯನ್ನು ಕಡ್ಡಾಯಗೊಳಿಸಲಾಗಿದೆ.

ಗ್ಯಾಸ್ ವಿತರಣೆ ವೇಳೆ ಗ್ರಾಹಕರ ಮೊಬೈಲ್‌ಗೆ ಒಟಿಪಿ ಕಳುಹಿಸಲಾಗುತ್ತದೆ. ಈ ಒಟಿಪಿಯನ್ನು ವಿತರಣಾ ಸಿಬ್ಬಂದಿಗೆ ನೀಡಿದ ನಂತರವೇ ಸಿಲಿಂಡರ್ ಹಸ್ತಾಂತರವಾಗುತ್ತದೆ. ಇದರಿಂದ ವಿತರಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಮತ್ತು ಭದ್ರತೆ ಹೆಚ್ಚಲಿದೆ. ಇನ್ನೊಂದು ಪ್ರಮುಖ ಬದಲಾವಣೆ ಎಂದರೆ, ಸಿಲಿಂಡರ್ ಬುಕ್ಕಿಂಗ್ ನಡುವಿನ ಅವಧಿ. ನಗರ ಪ್ರದೇಶಗಳಲ್ಲಿ ಕನಿಷ್ಠ 25 ದಿನಗಳ ಅಂತರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ 45 ದಿನಗಳ ಅಂತರವನ್ನು ನಿಗದಿಪಡಿಸಲಾಗಿದೆ. ಕಾಳಸಂತೆಯಲ್ಲಿ ಮಾರಾಟವನ್ನು ತಡೆಯುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಅದೇ ರೀತಿ, ಒಂದೇ ಮನೆಯಲ್ಲಿ ಪೈಪ್ಡ್ ಗ್ಯಾಸ್ (PNG) ಮತ್ತು ಎಲ್‌ಪಿಜಿ ಎರಡನ್ನೂ ಒಂದೇ ಸಮಯದಲ್ಲಿ ಬಳಸಲು ಅವಕಾಶ ಇರುವುದಿಲ್ಲ. ಈಗಾಗಲೇ ಎರಡೂ ಸಂಪರ್ಕ ಹೊಂದಿರುವವರು ಒಂದನ್ನು ತ್ಯಜಿಸಬೇಕಾಗುತ್ತದೆ. ಇ-ಕೆವೈಸಿ ಪ್ರಕ್ರಿಯೆಯನ್ನು ಕಡ್ಡಾಯಗೊಳಿಸಲಾಗಿದ್ದು, ಇದನ್ನು ಪೂರ್ಣಗೊಳಿಸದ ಗ್ರಾಹಕರು ಸಬ್ಸಿಡಿ ಸೌಲಭ್ಯ ಕಳೆದುಕೊಳ್ಳುವ ಸಾಧ್ಯತೆ ಇದೆ. ಈ ನಿಯಮಗಳು ಗ್ರಾಹಕರ ಸುರಕ್ಷತೆ ಮತ್ತು ಸರಬರಾಜು ವ್ಯವಸ್ಥೆಯ ಸುಧಾರಣೆಗೆ ನೆರವಾಗಲಿವೆ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ.

**ತಿಂಡಿ-ತಿನಿಸುಗಳ ಬೆಲೆ ಏರಿಸುವ ಅನಿವಾರ್ಯ:** ಈ ಬೆಳವಣಿಗೆಗಳಿಂದ ಹೋಟೆಲ್ ಉದ್ಯಮವು ಈಗಾಗಲೇ ಸಂಕಷ್ಟದಲ್ಲಿದ್ದು, ತಿಂಡಿ-ತಿನಿಸುಗಳ ಬೆಲೆಗಳನ್ನು ಏರಿಸುವ ಅನಿವಾರ್ಯತೆ ಎದುರಾಗಿದೆ. ಆದರೂ, ಇತ್ತೀಚೆಗಷ್ಟೇ ಟೀ, ಕಾಫಿ ಮತ್ತು ತಿಂಡಿಗಳ ಬೆಲೆಯಲ್ಲಿ 1ರಿಂದ 2 ರೂಪಾಯಿ ಮಟ್ಟದಲ್ಲಿ ಏರಿಕೆ ಮಾಡಿರುವುದರಿಂದ, ತಕ್ಷಣವೇ ಮತ್ತೊಮ್ಮೆ ದರ ಹೆಚ್ಚಳ ಮಾಡುವುದಿಲ್ಲ ಎಂದು ಸಂಘ ಸ್ಪಷ್ಟಪಡಿಸಿದೆ.ಇದಾದರೂ, ದೀರ್ಘಾವಧಿಯಲ್ಲಿ ಈ ದರ ಏರಿಕೆಯ ಪರಿಣಾಮವಾಗಿ ಹೋಟೆಲ್‌ಗಳಲ್ಲಿ ಊಟ ಮತ್ತು ಇತರ ಪದಾರ್ಥಗಳ ಬೆಲೆ ಏರಿಕೆ ಅನಿವಾರ್ಯವಾಗಬಹುದು ಎಂಬ ಆತಂಕ ವ್ಯಕ್ತವಾಗುತ್ತಿದೆ. ಗ್ರಾಹಕರ ಮೇಲೆ ಹೆಚ್ಚುವರಿ ಭಾರ ಬೀಳದಂತೆ ತಾತ್ಕಾಲಿಕವಾಗಿ ನಿಯಂತ್ರಣ ಸಾಧಿಸಲು ಪ್ರಯತ್ನಿಸುತ್ತಿದ್ದರೂ, ಪರಿಸ್ಥಿತಿ ಹೀಗೆಯೇ ಮುಂದುವರಿದರೆ ಬೆಲೆ ಏರಿಕೆ ತಪ್ಪಿಸಲಾಗದು ಎಂಬುದು ಉದ್ಯಮಿಗಳ ಅಭಿಪ್ರಾಯ. ಈ ಹಿನ್ನೆಲೆಯಲ್ಲಿ, ಹೋಟೆಲ್ ಮಾಲೀಕರ ಸಂಘವು ಸರ್ಕಾರಕ್ಕೆ ಸ್ಪಷ್ಟ ಬೇಡಿಕೆ ಸಲ್ಲಿಸಿದ್ದು, ವಾಣಿಜ್ಯ ಗ್ಯಾಸ್ ಸಿಲಿಂಡರ್ ದರವನ್ನು ಕೂಡಲೇ ಇಳಿಸಬೇಕು ಹಾಗೂ ಪ್ರಸ್ತುತ ಇರುವ 18% ಜಿಎಸ್‌ಟಿ ದರವನ್ನು ಕಡಿಮೆ ಮಾಡಬೇಕು ಎಂದು ಒತ್ತಾಯಿಸಿದೆ. ಸರ್ಕಾರವು ತಕ್ಷಣ ಕ್ರಮ ಕೈಗೊಂಡು ಉದ್ಯಮವನ್ನು ಸಂಕಷ್ಟದಿಂದ ಹೊರತರುವಂತೆ ಮನವಿ ಮಾಡಲಾಗಿದೆ.

**ಬೆಲೆ ಏರಿಕೆಗೆ ಕಾರಣವೇನು:** ಪಶ್ಚಿಮ ಏಷ್ಯಾದಲ್ಲಿ ತೀವ್ರಗೊಂಡಿರುವ ಯುದ್ಧ ಮತ್ತು ಸಂಘರ್ಷವೇ ಈ ಬೆಲೆ ಏರಿಕೆಗೆ ನೇರ ಕಾರಣ ಎಂದು ವಿಶ್ಲೇಷಿಸಲಾಗುತ್ತಿದೆ. ಯುದ್ಧದ ಹಿನ್ನೆಲೆಯಲ್ಲಿ ಜಾಗತಿಕ ಇಂಧನ ಪೂರೈಕೆ ಸರಪಳಿಯಲ್ಲಿ ವ್ಯತ್ಯಯ ಉಂಟಾಗಿದೆ. ಪ್ರಮುಖ ಇಂಧನ ಕಾರಿಡಾರ್ ಆಗಿರುವ 'ಹಾರ್ಮುಜ್ ಜಲಸಂಧಿ' ಮುಚ್ಚಲ್ಪಟ್ಟಿರುವುದರಿಂದ ಜಾಗತಿಕ ತೈಲ ಬೆಲೆ ಶೇ. 50 ರಷ್ಟು ಹೆಚ್ಚಾಗಿದೆ. ಇದರಿಂದಾಗಿ ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ವಾಣಿಜ್ಯ ಸಿಲಿಂಡರ್ ದರವನ್ನು ಪರಿಷ್ಕರಿಸುವುದು ಅನಿವಾರ್ಯವಾಗಿದೆ.

**ಹೋಟೆಲ್ ಮಾಲೀಕರ ಆಕ್ರೋಶ**

**ಹೋಟೆಲ್ ಉದ್ಯಮಕ್ಕೆ ಹೊಡೆತ**

ದರ ಏರಿಕೆ ಹೋಟೆಲ್, ರೆಸ್ಟೋರೆಂಟ್ ಉದ್ಯಮದ ಮೇಲೆ ನೇರ ಪರಿಣಾಮ ಬೀರುವ ಸಾಧ್ಯತೆ ಇದೆ. ತಿಂಡಿ-ತಿನಿಸು ಕಾಫೀ, ಟೀ ದರ ಏರಿಕೆಯಾಗಲಿವೆ. ಬೆಂಗಳೂರಿನಲ್ಲಿ ವಾಣಿಜ್ಯ ಗ್ಯಾಸ್ ಸಿಲಿಂಡರ್ ದರದಲ್ಲಿ ಭಾರೀ ಏರಿಕೆಯಾಗಿದ್ದು, ಹೋಟೆಲ್ ಉದ್ಯಮ ಸಂಕಷ್ಟಕ್ಕೆ ಸಿಲುಕಿದೆ. ಈ ದರ ಏರಿಕೆಯಿಂದ ತಿಂಡಿ-ತಿನಿಸುಗಳ ಬೆಲೆ ಹೆಚ್ಚಿಸುವ ಅನಿವಾರ್ಯತೆ ಎದುರಾಗಿದ್ದರೂ, ಸದ್ಯಕ್ಕೆ ದರ ಹೆಚ್ಚಳ ಮಾಡದಿರಲು ಹೋಟೆಲ್ ಮಾಲೀಕರ ಸಂಘ ನಿರ್ಧರಿಸಿದೆ. ಸರ್ಕಾರವು ಗ್ಯಾಸ್ ದರ ಮತ್ತು ಜಿಎಸ್‌ಟಿ ಇಳಿಸಬೇಕೆಂದು ಸಂಘವು ಒತ್ತಾಯಿಸಿದೆ.

### ಪೆಟ್ರೋಲ್, ಡೀಸೆಲ್ ಬೆಲೆ ಸ್ಥಿರ

ಒಂದೆಡೆ ಎಲ್‌ಪಿಜಿ ಬೆಲೆ ಏರಿಕೆಯಾಗುತ್ತಿದ್ದರೆ, ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಬೆಂಗಳೂರಿನಲ್ಲಿ ಸಾಮಾನ್ಯ ಪೆಟ್ರೋಲ್ ಬೆಲೆ ಪ್ರತಿ ಲೀಟರ್‌ಗೆ 102.92 ರೂ. ಮತ್ತು ಡೀಸೆಲ್ ಬೆಲೆ 90.99 ರೂ. ರಷ್ಟಿದೆ. ಕಳೆದ ವರ್ಷದ ಮಾರ್ಚ್‌ನಲ್ಲಿ ಲೀಟರ್‌ಗೆ 2 ರೂಪಾಯಿ ಕಡಿತಗೊಳಿಸಿದ ನಂತರ ಇಂಧನ ದರಗಳು ಸ್ಥಿರವಾಗಿವೆ.



**ಪ್ರಮುಖ ನಗರಗಳಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆ**

- ರೂ. 3,024 • ರೂ. 3,152
- ರೂ. 3,071.50

**ಅಹಮದಾಬಾದ್**

- ರೂ. 3,091 • ರೂ. 3,202
- ರೂ. 13,237 • ರೂ. 3,084

## ನ್ಯಾಯಮೂರ್ತಿಗಳಿಗೆ ಸರಿಯಾದ ಸಂದೇಶ ರವಾನಿಸಿ

• ಉದಯವಾಹಿನಿ, ಬೆಂಗಳೂರು

'ಕರ್ನಾಟಕ ಹೈಕೋರ್ಟ್‌ಗೆ ಹೊರರಾಜ್ಯದಿಂದ ವರ್ಗಾವಣೆಯಾಗಿ ಬಂದಿರುವ ಯಾವ ನ್ಯಾಯಮೂರ್ತಿಗಳು ನಿಮ್ಮನ್ನು ಸರಿಯಾಗಿ ನಡೆಸಿಕೊಳ್ಳುತ್ತಿಲ್ಲವೋ ಅಂತಹ ನ್ಯಾಯಮೂರ್ತಿಗಳಿಗೆ ನೀವು ಸರಿಯಾದ ಸಂದೇಶ ರವಾನಿಸಬೇಕು' ಎಂದು ಒಡಿಶಾ ಹೈಕೋರ್ಟ್ ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ 'ಬೆಂಗಳೂರು ವಕೀಲರ ಸಂಘ'ಕ್ಕೆ ಕರೆ ನೀಡಿದರು. ಸಿಟಿ ಸಿವಿಲ್ ಕೋರ್ಟ್ ಆವರಣದಲ್ಲಿ ಗುರುವಾರ (ಏ.30) 'ಬೆಂಗಳೂರು ವಕೀಲರ ಸಂಘ' (ಎಎಬಿ) ಹಮ್ಮಿಕೊಂಡಿದ್ದ ವಾರ್ಷಿಕ ದಿನಾಚರಣೆಯಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, 'ಬೇರೆ ರಾಜ್ಯಗಳಿಂದ ಕರ್ನಾಟಕ ಹೈಕೋರ್ಟ್‌ಗೆ ಬಂದಿರುವ ಕೆಲವು ನ್ಯಾಯಮೂರ್ತಿಗಳು ಕೋರ್ಟ್ ಕಲಾಪದಲ್ಲಿ ವಕೀಲರ ಜೊತೆ ಅನುಚಿತವಾಗಿ ನಡೆದುಕೊಳ್ಳುತ್ತಿದ್ದಾರೆ ಮತ್ತು ಈ ನ್ಯಾಯಮೂರ್ತಿಗಳ ಮುಂದೆ ಹೋಗಿ ನಾವು ಹೇಗೆ ವಾದ ಮಾಡಬೇಕು ಎಂದು ರಾಜ್ಯದ ವಕೀಲರು ಅಳಕುತ್ತಿದ್ದಾರೆ ಎಂಬ ಮಾತು ನನ್ನ ಕಿವಿಗೆ ಬಿದ್ದಿದೆ. ಇದು ತರವಲ್ಲ' ಎಂದು ಹೇಳಿದರು.

## ಮುಖ್ಯಮಂತ್ರಿ ಬದಲಾವಣೆ ಇನ್ನೂ ತೀರ್ಮಾನವಾಗಿಲ್ಲ: ಖರ್ಗೆ

• ಉದಯವಾಹಿನಿ, ಕಲಬುರಗಿ

ಮುಖ್ಯಮಂತ್ರಿ ಬದಲಾವಣೆ ಮಾಡುವ ಕುರಿತು ಇನ್ನೂ ತೀರ್ಮಾನವಾಗಿಲ್ಲ. ಹೀಗಾಗಿ ಮುಖ್ಯಮಂತ್ರಿ ಬದಲಾವಣೆ ಆಗುತ್ತದೊ ಇಲ್ಲವೋ ಎಂಬುದನ್ನು ಹೇಗೆ ಹೇಳಲಿ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಹೇಳಿದರು. ನಗರದಲ್ಲಿ ಶುಕ್ರವಾರ ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ ಬದಲಾವಣೆ ಕುರಿತು ಚರ್ಚಿಸಲು ಇನ್ನೂ ದಿನಾಂಕ ನಿಗದಿಯಾಗಿಲ್ಲ. ಸಮಯ ನಿಗದಿಯಾದ ಮೇಲೆ ನಾವು ಏನು ನಿರ್ಧಾರ ತೆಗೆದುಕೊಳ್ಳಬೇಕೋ ಅದನ್ನ ತೆಗೆದುಕೊಳ್ಳುತ್ತೇವೆ. ಸಿಎಂ ಬದಲಾವಣೆ ಕುರಿತು ಸುಮ್ಮನೆ ತಪ್ಪು ಸಂದೇಶ ಕೊಡಬೇಡಿ. ಏನು ನಿರ್ಣಯ ತೆಗೆದುಕೊಂಡರೆ ಪಕ್ಷಕ್ಕೆ ಏನು ಪರಿಣಾಮ ಆಗುತ್ತದೆ ಎನ್ನುವುದನ್ನು ಚರ್ಚಿಸಿ ನಿರ್ಧರಿಸುತ್ತೇವೆ. ಮತ್ತು ರಾಜ್ಯದ ಹಿತದೃಷ್ಟಿಯಿಂದ ನಿರ್ಣಯ ತೆಗೆದುಕೊಳ್ಳುತ್ತೇವೆ. ಅದನ್ನ ಎಲ್ಲರೂ ಬೆಂಬಲಿಸಬೇಕು ಎಂದರು. ವಾಣಿಜ್ಯ ಬಳಕೆಯ ಎಲ್ ಪಿಜಿ ಸಿಲಿಂಡರ್ ದರವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಏಕಾಏಕಿ 993 ಹೆಚ್ಚಳ ಮಾಡಿದ್ದಾರೆ. ಸಿಲಿಂಡರ್ ದರ ಹೆಚ್ಚಳ ಮಾಡುವುದಿಲ್ಲ ಎಂದು ಹೇಳಿಕೆ ನೀಡಿದ್ದರು. ಈಗ ರಾತ್ರೋರಾತ್ರಿ ದರ ಹೆಚ್ಚಳ ಮಾಡುವ ಮೂಲಕ ಜನರಿಗೆ ಆಘಾತ ನೀಡಿದ್ದಾರೆ. ಇಷ್ಟಾಗಿಯೂ ಜನರು ಅವರನ್ನು ಬೆಂಬಲಿಸುತ್ತಿರುವುದು ಅಚ್ಚರಿ ತಂದಿದೆ ಎಂದು ಖರ್ಗೆ ಹೇಳಿದರು.

## ಕಾರ್ಮಿಕ ದಿನ: ಉರಿಬಿಸಿಲಿಗೆ ಸಡ್ಡು ಹೊಡೆದ ಅಸಂಘಟಿತರು...

• ಉದಯವಾಹಿನಿ, ಸಿಂಧನೂರು

ತಾಪಮಾನ ಹೆಚ್ಚಳದಿಂದಾಗಿ ಜನಸಾಮಾನ್ಯರು ಮಧ್ಯಾಹ್ನ ಹೊರಗೆ ಬರಲು ಹಿಂಜರಿಯುತ್ತಿದ್ದರೆ, ಅಸಂಘಟಿತ ವಲಯದ ಕಾರ್ಮಿಕರು ಹೊಟ್ಟೆಪಾಡಿಗಾಗಿ ಉರಿಬಿಸಿಲು ಲೆಕ್ಕಿಸದೇ ದುಡಿಮೆಯಲ್ಲಿ ತೊಡಗಿದ್ದಾರೆ. ಅಸಂಘಟಿತ ವಲಯದ ಕಾರ್ಮಿಕರು ಕಾರ್ಮಿಕ ಸಂಹಿತೆಗಳಿರಲಿ, ಅಂತರರಾಷ್ಟ್ರೀಯ ಕಾರ್ಮಿಕ ದಿನಾಚರಣೆಯ ಬಗ್ಗೆ ಪರಿವೇ ಇಲ್ಲದೆ ತಮ್ಮ ಕಾಯಕದಲ್ಲಿ ನಿರತರಾಗಿದ್ದಾರೆ.

ನಗರದ ಎಪಿಎಂಸಿಯಲ್ಲಿ ಹಮಾಲಿ ಕೆಲಸ, ಬೀದಿ ಬದಿಗಳಲ್ಲಿ ಹಣ್ಣಿನ ವ್ಯಾಪಾರ, ಚಪ್ಪಲಿ ವ್ಯಾಪಾರ, ತಳ್ಳುಬಂಡಿ ಹೋಟೆಲ್, ಎಳನೀರು ವ್ಯಾಪಾರ, ಬಿದಿರು ಪುಟ್ಟಿ, ಗಾದಿ ವ್ಯಾಪಾರ ಹಾಗೂ ಅಕ್ಕಿ ಮಿಲ್‌ಗಳಲ್ಲಿ ಕೆಲಸ ಮಾಡುವ ಮೂಲಕ ಜೀವನ ನಿರ್ವಹಣೆ ಮಾಡುತ್ತಿರುವ ಈ ಕಾರ್ಮಿಕರಿಗೆ ಆರ್ಥಿಕ ಸೌಲಭ್ಯಗಳಾಗಲಿ, ಸಾಮಾಜಿಕ ಭದ್ರತೆಯಾಗಲಿ ಗಗನ ಕುಸುಮವಾಗಿದೆ.

## ನಿಮ್ಮ ಮೊಬೈಲ್ ಸೈರನ್ ಮೊಳಗಿಸಿದರೆ ಭಯಪಡಬೇಡಿ..

• ಉದಯವಾಹಿನಿ, ಬೆಂಗಳೂರು

ದೇಶದಾದ್ಯಂತ ವಿಪತ್ತು ನಿರ್ವಹಣಾ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮೇ 2ರಂದು ಬೆಂಗಳೂರು ಸೇರಿದಂತೆ ದೇಶದ ಪ್ರಮುಖ ನಗರಗಳಲ್ಲಿ 'ತುರ್ತು ಎಚ್ಚರಿಕೆ' ವ್ಯವಸ್ಥೆಯನ್ನು ಪರೀಕ್ಷಿಸಲಿದೆ. ಕಳೆದ ಎರಡು ದಿನಗಳಿಂದ ಎನ್‌ಡಿಎಂಎ ಮತ್ತು ದೂರಸಂಪರ್ಕ ಅಭಿವೃದ್ಧಿ ಕೇಂದ್ರ ಜಂಟಿಯಾಗಿ ಬೆಂಗಳೂರಿನ ನಾಗರಿಕರಿಗೆ ಎಸ್‌ಎಂಎಸ್ ಕಳುಹಿಸುತ್ತಿವೆ. ಪರೀಕ್ಷಾರ್ಥ ಪ್ರಯೋಗದ ವೇಳೆ ಮೊಬೈಲ್‌ಗಳಿಗೆ ಎಚ್ಚರಿಕೆಯ ಸಂದೇಶ ಬಂದಾಗ ಜನರು ಆತಂಕಕ್ಕೊಳಗಾಗಬಾರದು ಎಂದು ಅಧಿಕಾರಿಗಳು ಮನವಿ ಮಾಡಿದ್ದಾರೆ. ಇದು ಪರೀಕ್ಷಾರ್ಥ ಎಚ್ಚರಿಕೆಯಾಗಿರುವುದರಿಂದ, ನಿಮ್ಮ ಮೊಬೈಲ್‌ನಲ್ಲಿ ಜೋರು ಶಬ್ದದೊಂದಿಗೆ ಸಂದೇಶ ಬಂದರೆ ಸಾರ್ವಜನಿಕರು ಗಾಬರಿಯಾಗುವ ಅಗತ್ಯವಿಲ್ಲ ಅಥವಾ ಯಾವುದೇ ಪ್ರತಿಕ್ರಿಯೆ ನೀಡಬೇಕಿಲ್ಲ. 2023ರಲ್ಲೂ ಇಂತಹದೇ ತುರ್ತು ಎಚ್ಚರಿಕೆ ಸಂದೇಶವನ್ನು ಬೆಂಗಳೂರಿನಲ್ಲಿ ನಡೆಸಲಾಗಿತ್ತು. ರಾಜ್ಯದ ವಿಪತ್ತು ಸಿದ್ಧತಾ ಕ್ರಮಗಳನ್ನು ಸುಧಾರಿಸಲು ಮತ್ತು ಈ ತಂತ್ರಜ್ಞಾನದ ದಕ್ಷತೆಯನ್ನು ಅಳೆಯಲು ಪ್ರಾಧಿಕಾರ ಈ ಕ್ರಮ ಕೈಗೊಂಡಿದೆ.

## ಮತಬ್ಯಾಂಕ್ ಭದ್ರಕ್ಕೆ ಅಲ್ಪಸಂಖ್ಯಾತರಿಗೆ 600 ಕೋಟಿ ಅಸ್ತ್ರ

### ರಾಜ್ಯ ಸರ್ಕಾರದ ವಿರುದ್ಧ ಕಮಲ ಪಡೆ ಕೆಂಡಾಮಂಡಲ | ಕಿಡಿಕಾರಿದ ಛಲವಾದಿ ನಾರಾಯಣ ಸ್ವಾಮಿ

• ಉದಯವಾಹಿನಿ, ಬೆಂಗಳೂರು

ಮತಬ್ಯಾಂಕ್ ಭದ್ರ ಮಾಡಲು ಅಲ್ಪಸಂಖ್ಯಾತರಿಗೆ 600 ಕೋಟಿ ನೀಡಿದೆ ಎಂದು ಬಿಜೆಪಿ ಆರೋಪ ಮಾಡಿದೆ. ಈ ಕುರಿತಾಗಿ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಜನಸಾಮಾನ್ಯರ ಸರ್ಕಾರವಲ್ಲ, ಕೇವಲ ಮತಗಳ ಮೇಲೆ ಕಣ್ಣಿಟ್ಟಿರುವ ಸ್ವಾರ್ಥಿಗಳ ಕೂಟ ಎಂದು ಕಿಡಿಕಾರಿದ್ದಾರೆ.

**ಸಿದ್ದರಾಮಯ್ಯರನ್ನು ಕಟ್ಟಿಹಾಕಿದ್ರಾ ಡಿಕೆಶಿ?**

ಜಿಬಿಎ ಚುನಾವಣೆ ನಡೆಸಲು ಹಣದ ಕೊರತೆ ಎಂಬ ಕಾರಣವನ್ನು ಸುಪ್ರೀಂ ಕೋರ್ಟ್ ಮುಂದೆ ಮಂಡಿಸಿ ಪ್ರಜಾಪ್ರಭುತ್ವವನ್ನು ಅಣಕಿಸುವ ಕಾಂಗ್ರೆಸ್ ಸರ್ಕಾರ, ಇನ್ನೊಂದೆಡೆ ಮತಬ್ಯಾಂಕ್ ಭದ್ರಪಡಿಸಿಕೊಳ್ಳಲು ರೂ. 600 ಕೋಟಿ ರೂಪಾಯಿಗಳ ಬಜೆಟ್ ಅನ್ನು ಓಲೈಕೆಯ ರಾಜಕಾರಣದ ದೃಷ್ಟಿಯಿಂದ ಘೋಷಿಸಿರುವುದು ನಾಡಿನ ಜನತೆಗೆ ಮಾಡುತ್ತಿರುವ ದ್ರೋಹವಲ್ಲವೇ? ನಾಡಿನ ಹಿತಕ್ಕಿಂತ ಮತಬ್ಯಾಂಕ್ ಓಲೈಕೆಯೇ ಕಾಂಗ್ರೆಸ್ ಸರ್ಕಾರಕ್ಕೆ ಮುಖ್ಯವಾಯಿತೇ? ಎಂದು ಪ್ರಶ್ನಿಸಿದ್ದಾರೆ.

600 ಕೋಟಿ ವೆಚ್ಚದ ಈ ಯೋಜನೆ ಅಭಿವೃದ್ಧಿಗಿಂತ ಹೆಚ್ಚಾಗಿ ಮುಂಬರುವ ಚುನಾವಣಾ ಲಾಭಕ್ಕಾಗಿ ಹೂಡಿಕೆಯಂತೆ ಕಾಣುತ್ತದೆ. ಜನರ ತೆರಿಗೆ ಹಣವನ್ನು ಸಮಾನವಾಗಿ ಹಂಚುವ ಬದಲು, ಓಲೈಕೆಯ ರಾಜಕಾರಣಕ್ಕೆ ಬಳಸುವುದು ಆಡಳಿತದ ಅಟ್ಟಹಾಸವಾದಂತಿದೆ. ರಾಜ್ಯದ ಆರ್ಥಿಕತೆಯನ್ನು ದುರ್ಬಲಗೊಳಿಸಿ, ಅರ್ಹ ಫಲಾನುಭವಿಗಳನ್ನು ವಂಚಿಸುತ್ತಿರುವ ಈ ಕಾಂಗ್ರೆಸ್ ಸರ್ಕಾರದ ನಡೆ ಖಂಡನೀಯವಾದುದು. ರಾಜ್ಯದ ಹಿತಾಸಕ್ತಿಯನ್ನು ಬಲಿಕೊಟ್ಟು ನಡೆಯುತ್ತಿರುವ ಈ ಓಲೈಕೆ ರಾಜಕಾರಣಕ್ಕೆ ನಾಡಿನ ಜನತೆ ತಕ್ಕ ಉತ್ತರ ನೀಡುವ ಸಮಯ ದೂರದಲ್ಲಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.



**ಖಜಾನೆ ಖಾಲಿ ಎಂಬ ನಾಟಕ**

ಆಸ್ಪತ್ರೆಗಳಲ್ಲಿ ಔಷಧವಿಲ್ಲ, ಸ್ಕ್ಯಾನಿಂಗ್ ಸೌಕರ್ಯವಿಲ್ಲ, ಸಾರಿಗೆ ನಿಗಮಗಳಲ್ಲಿ ಸಮರ್ಪಕ ಬಸ್ಸುಗಳಿಲ್ಲ, ಗ್ರಾಮೀಣ ರಸ್ತೆಗಳು ದುಸ್ಥಿತಿಯಲ್ಲಿವೆ. ಬಡವರ ಬದುಕಿಗೆ ಆಧಾರವಾಗಿರುವ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರಿಗೆ ತಿಂಗಳುಗಳಿಂದ ಗೌರವಧನ ಬಾಕಿ. ಗ್ರಂಥಾಲಯ ಹಾಗೂ ನರೇಗಾ ಸಿಬ್ಬಂದಿಗಳು ವೇತನವಿಲ್ಲದೆ ಸಂಕಷ್ಟದಲ್ಲಿದ್ದಾರೆ. ಆದರೆ ಒಂದು ವರ್ಗದ ಓಲೈಕೆಗೆ ಮಾತ್ರ ನೂರಾರು ಕೋಟಿ ರೂಪಾಯಿಗಳು ಕ್ಷಣಾರ್ಧದಲ್ಲಿ ಲಭ್ಯ ಇದೆ ಎಂದು ಕಿಡಿಕಾರಿದ್ದಾರೆ.

## ಸಿದ್ದರಾಮಯ್ಯ ವಾಚ್‌ನಲ್ಲಿ ಟೈಂ ಮಿಸ್: ಸರಿಪಡಿಸಿಕೊಟ್ಟ ಜಿ.ಸಿ ಚಂದ್ರಶೇಖರ್

### ■ ಕೆಪಿಸಿಸಿ ಕಚೇರಿಯಲ್ಲಿ ನಡೆದ ಕಾರ್ಮಿಕ ದಿನಾಚರಣೆ ಕಾರ್ಯಕ್ರಮದಲ್ಲಿ ನಡೆದ ಪ್ರಸಂಗ

• ಉದಯವಾಹಿನಿ, ಬೆಂಗಳೂರು

ಕೈಯಲ್ಲಿ ಕಟ್ಟಿಕೊಂಡ ವಾಚ್‌ನಲ್ಲಿ ಸಮಯ ಸರಿಯಾಗಿರಬೇಕು. ಆದರೆ ಸಿಎಂ ಸಿದ್ದರಾಮಯ್ಯ ಅವರು ಕಟ್ಟಿಕೊಂಡ ವಾಚ್‌ನಲ್ಲಿ ಸಮಯ ನಿಂತು ಹೋಗಿತ್ತು. ಕೆಪಿಸಿಸಿ ಕಾರ್ಮಿಕ ವಿಭಾಗದಿಂದ ಕಾರ್ಮಿಕರ ದಿನಾಚರಣೆ ಹಿನ್ನೆಲೆಯಲ್ಲಿ ನಡೆದ ಕಾರ್ಯಕ್ರಮಕ್ಕೆ ಸಿಎಂ ಸಿದ್ದರಾಮಯ್ಯ ಅಗಮಿಸಿದ್ದರು.

ಬೆಳಗ್ಗೆ 11 ಗಂಟೆಯ ಕಾರ್ಯಕ್ರಮಕ್ಕೆ ಸಿಎಂ, ಡಿಸಿಎಂ ಆಗಮಿಸಬೇಕಿತ್ತು. ಆದರೆ, ಇಬ್ಬರು ತಡವಾಗಿ ಬಂದರು. ಅಂದ್ರೆ ಮಧ್ಯಾಹ್ನ 1 ಗಂಟೆಗೆ ಬಂದ ಸಿಎಂ, ಡಿಸಿಎಂ ಕಾರ್ಯಕ್ರಮಕ್ಕೆ ಆಗಮಿಸಿದ್ದರು. ಈ ನಡುವೆ ಕಾಕತಾಳಿಯವೋ ಎಂಬಂತೆ ಸಿದ್ದರಾಮಯ್ಯ ಅವರ ವಾಚ್ ಟೈಂ ಕೆಟ್ಟಿತ್ತು.



ಕೆಪಿಸಿಸಿ ಕಚೇರಿಗೆ ಆಗಮಿಸಿದ್ದ ಸಿದ್ದರಾಮಯ್ಯ ವೇದಿಕೆಯಲ್ಲಿ ಕುಳಿತುಕೊಂಡಿದ್ದರು. ವೇದಿಕೆಯಲ್ಲಿ ರಾಜ್ಯಸಭಾ ಸದಸ್ಯ ಜಿಸಿ ಚಂದ್ರಶೇಖರ್ ಕೂಡಾ ಇದ್ದರು. ಸಿಎಂ ಕೈಗೆ ಕಟ್ಟಿಕೊಂಡಿದ್ದ ವಾಚನ್ನು ಎಚ್ ಎಂ ರೇವಣ್ಣ ಅವರು ಗಮನಿಸಿ ಸಮಯ ನಿಂತಿದೆ ಎಂದು ತಿಳಿದುಕೊಂಡರು. ಬಳಿಕ ಸಿದ್ದರಾಮಯ್ಯ ಅವರಿಂದ ವಾಚ್ ಪಡೆದುಕೊಂಡು ಜಿಸಿ ಚಂದ್ರಶೇಖರ್ ಅವರಿಗೆ ನೀಡಿದರು. ಜಿಸಿಸಿ ಅವರು ಸಿಎಂ ವಾಚ್ ಟೈಮ್ ಸರಿ ಮಾಡಿ ಕೊಟ್ಟರು.

ಸಿಎಂ ಬಳಿ ವಾಚ್ ಪಡೆದು ತಮ್ಮ ವಾಚ್ ನ ಟೈಮ್ ನೋಡಿ ರೀಸೆಟ್ ಮಾಡಿಕೊಟ್ಟ ಜಿಸಿ ಚಂದ್ರಶೇಖರ್ ನೀಡಿದರು. ಬಳಿಕ ಮತ್ತೆ ಸಿದ್ದರಾಮಯ್ಯ ವಾಚ್ ಕಟ್ಟಿಕೊಂಡರು. ಇದರಲ್ಲಿ ವಿಶೇಷ ಏನೂ ಇಲ್ಲ. ಆದರೆ ಸದ್ಯದ ರಾಜಕೀಯ ಬೆಳವಣಿಗೆ ಹಾಗೂ ನಾಯಕತ್ವ ಬದಲಾವಣೆ ಚರ್ಚೆ ಹಿನ್ನೆಲೆಯಲ್ಲಿ ಈ ಪ್ರಸಂಗ ಗಮನ ಸೆಳೆಯುತ್ತಿದೆ. ಸಿದ್ದರಾಮಯ್ಯ ಕೈಗೆ ಕಟ್ಟಿಕೊಂಡಿದ್ದ ವಾಚ್ ಕೆಟ್ಟು ಸಮಯ ನಿಂತ ಹಾಗೆ ಅವರ ರಾಜಕೀಯದ ಉತ್ತಮ ಸಮಯಕ್ಕೆ ಏನಾದರೂ ಸಮಸ್ಯೆ ಆಗಬಹುದಾ ಎಂಬ ಕುತೂಹಲವೂ ಇದೆ.



**ಶ್ರಮಿಕರ ಮಕ್ಕಳಿಗೆ ಶಿಕ್ಷಣ ಸಿಗಬೇಕು ಎಂಬುವುದು ನಮ್ಮ ಉದ್ದೇಶ**

ಕಾರ್ಮಿಕರ ಮಕ್ಕಳಿಗೆ 104 ವಸತಿ ಶಾಲೆಗಳನ್ನ ತೆರೆದಿದ್ದೇವೆ, ಶ್ರಮಿಕರ ಮಕ್ಕಳಿಗೆ ಶಿಕ್ಷಣ ಸಿಗಬೇಕು ಎಂಬುವುದು ನಮ್ಮ ಉದ್ದೇಶವಾಗಿದೆ. ವಸತಿ ಶಾಲೆಗಳಲ್ಲಿ ಒಟ್ಟು 99.42%ಮಕ್ಕಳು ಪರೀಕ್ಷೆಯಲ್ಲಿ ತೇರ್ಗಡೆಯಾಗಿದ್ದಾರೆ ಎಂದು ವಿವರಿಸಿದರು. ದೇಶದಲ್ಲಿ ಅಂಬೇಡ್ಕರ್ ಅವರು ಅನೇಕ ಕಾನೂನನ್ನು ಜಾರಿಗೆ ತಂದಿದ್ರು. ಕಾರ್ಮಿಕರ ಹಿತರಕ್ಷಣೆಗೆ ಹೆಚ್ಚಿನ ಸಂಖ್ಯೆಯಲ್ಲಿ ಕಾನೂನು ಜಾರಿಗೆ ತಂದಿರೋದು ಕಾರ್ಮಿಕರಿಗೆ ದೊಡ್ಡ ಶಕ್ತಿ. ಒಟ್ಟಿನಲ್ಲಿ ಕಾಂಗ್ರೆಸ್ ಪಕ್ಷ ಕಾರ್ಮಿಕರ ಪರವಾಗಿ ಇದೆ ಎಂದು ಹೇಳಿದರು.

ಪ್ರಸ್ತುತ ರಾಜಕೀಯ ಸನ್ನಿವೇಶಕ್ಕೆ ಈ ಒಂದು ಪ್ರಸಂಗ ಹೊಂದಾಣಿಕೆ ಆಗುತ್ತಿದೆ. ಸಿದ್ದರಾಮಯ್ಯ ಅವರ ರಾಜಕೀಯ ಸಮಯ ಕೆಟ್ಟಿದೆಯೋ? ಇಲ್ಲವೋ? ಎಂಬುವುದು ಸದ್ಯ ಯಾರಿಗೂ ತಿಳಿದಿಲ್ಲ.

ಮೇ 4ರ ಬಳಿಕ ರಾಜ್ಯದಲ್ಲಿ ರಾಜಕೀಯ ಬೆಳವಣಿಗೆಗಳು ನಡೆಯಲಿದ್ದು, ಆ ಸಂದರ್ಭದಲ್ಲಿ ಸಿದ್ದು ಸಮಯದ ಬಗ್ಗೆ ಸ್ಪಷ್ಟ ಚಿತ್ರಣ ಸಿಗಲಿದೆ. ಇನ್ನು ಇದೇ ಕಾರ್ಯಕ್ರಮದಲ್ಲಿ ಭಾಷಣ ಮಾಡಿದ ಸಿದ್ದರಾಮಯ್ಯ, ''ಇವತ್ತು ವಿಶ್ವಕಾರ್ಮಿಕ ದಿನಾಚರಣೆ ಆಚರಣೆ ಮಾಡ್ತಿದ್ದೇವೆ. 1886 ಚಿಕಾಗೋನಲ್ಲಿ ಒಂದು ದೊಡ್ಡ ಹೋರಾಟ ನಡೆಯಿತ್ತು ಎಲ್ಲಾ ಕಾರ್ಮಿಕ ಸಂಘಟನೆ ಸೇರಿ ದೊಡ್ಡ ಹೋರಾಟ ಮಾಡಿದ್ರು. ಅವರ ಬೇಡಿಕೆ ಏನಿತ್ತು ಅಂದ್ರೆ, 8 ಗಂಟೆ ಕೆಲಸ 8 ಗಂಟೆ ವಿಶ್ರಾಂತಿ 8 ಗಂಟೆ ಮನರಂಜನೆ ಕಾರ್ಯಕ್ರಮ ಬೇಕು ಎಂಬುದಾಗಿತ್ತು. ಇದನ್ನ ಮುಂದಿಟ್ಟುಕೊಂಡು ದೊಡ್ಡ ಹೋರಾಟ ಮಾಡಿದ್ರು ಇದಕ್ಕೆ ಮುಂಚಿತವಾಗಿ 18 ಗಂಟೆಗಳ ಕಾಲ ಕೆಲಸ ಮಾಡ್ತಿದ್ರು ಎಂದ ವಿವರಿಸಿದರು.

ಈ ಹೋರಾಟ ಆದ ನಂತರ 8 ಗಂಟೆ ಕೆಲಸ ಮಾಡೋ ಪದ್ಧತಿ ಬಂತು, ಈ ಹೋರಾಟ ದಿನವನ್ನೇ ವಿಶ್ವಕಾರ್ಮಿಕ ದಿನಚರಣೆ ಎಂದು ಆಚರಿಸಲಾಗುತ್ತಿದೆ. ಬಸವಣ್ಣ ಅವರು ಕಾಯಕವೇ ಕೈಲಾಸ ಎಂದು ಹೇಳಿದ್ದಾರೆ. ದೇಶದ ಆರ್ಥಿಕ, ಸಾಮಾಜಿಕ ಅಭಿವೃದ್ಧಿಯ ನಿರ್ಮಾಣದಲ್ಲಿ ಕಾರ್ಮಿಕರ ಪಾತ್ರ ದೊಡ್ಡದು ಎಂದರು.

ನಮ್ಮ ದೇಶದಲ್ಲಿ ಒಟ್ಟು 75%ಕ್ಕಿಂತ ಅಸಂಘಟಿತ ಕಾರ್ಮಿಕರಿದ್ದಾರೆ, ಜೊತೆಗೆ ಸಂಘಟಿತ ಕಾರ್ಮಿಕರಿದ್ದಾರೆ. ಕೇಂದ್ರ ಸರ್ಕಾರ ಕಾರ್ಮಿಕರ ವಿರೋಧಿಯಾಗಿದೆ ಹಾಗೂ ಬಂಡವಾಳ ಶಾಹಿಗಳ ಪರವಾಗಿದೆ. ನಮ್ಮ ಕಾಂಗ್ರೆಸ್ ಯಾವಾಗಲೂ ಕಾರ್ಮಿಕರ ಪರವಾಗಿ,ಅವರನ್ನ ಗೌರವಿಸೋ ಕೆಲಸವನ್ನು ಮಾಡುತ್ತೇವೆ ಎಂದರು.

ನಮ್ಮ ಕಾರ್ಮಿಕರು ಕೆಲಸದ ವೇಳೆಯಲ್ಲಿ ಮೃತಪಟ್ಟರೆ ಅವರಿಗೆ ಕೊಡ್ತಿರೋ 5ಲಕ್ಷ ಪರಿಹಾರ ಮೊತ್ತವನ್ನು 8 ಲಕ್ಷಕ್ಕೆ ಏರಿಕೆ ಮಾಡಿದ್ದೇವೆ. ಸಹಜವಾಗಿ ಮರಣ ಹೊಂದಿದ್ದಾಗ 75ಸಾವಿರ ಕೊಡ್ತಿದ್ವಿ, ಅದನ್ನ ಒಂದೂವರೆ ಲಕ್ಷಕ್ಕೆ ಏರಿಕೆ ಮಾಡಲಾಗಿದೆ. ಕರ್ನಾಟಕ ರಾಜ್ಯ ಕಾರ್ಮಿಕರ ವಿಮಾ ಯೋಜನೆದಡಿ 30250 ಕಾರ್ಮಿಕರು ನೋಂದಾವಣೆ ಮಾಡಿಕೊಂಡಿದ್ದಾರೆ ಎಂದು ವಿವರಿಸಿದರು.

**ಈ ದಿನದ ದರ** ಪೆಟ್ರೋಲ್: 102.96 ₹/L | ಡೀಸೆಲ್ : 90.99 ₹/L | ಬಂಗಾರ: ₹15,038/Gram24ct ₹13,785/Gram22ct | ಬೆಳ್ಳಿ: ₹255.00/Gram

# ಸರಕು, ಪ್ರಯಾಣ ಸೇವೆ: ಕೆಐಎ ಪ್ರಗತಿ

• **ಉದಯವಾಹಿನಿ, ಬೆಂಗಳೂರು**

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು (ಕೆಐಎ) 2025–26ರಲ್ಲಿ 44.47 ದಶಲಕ್ಷ ಪ್ರಯಾಣಿಕರ ಸೇವೆ, 5.32 ಟನ್ ಸರಕು ಸರಬರಾಜು ಮೂಲಕ ಎರಡೂ ವಿಭಾಗದಲ್ಲಿ ಪ್ರಗತಿ ಸಾಧಿಸಿದೆ. ಅಂತರರಾಷ್ಟ್ರೀಯ ಪ್ರಯಾಣಿಕರ ಸಂಚಾರ ಶೇ 23.9ರಷ್ಟು ಏರಿಕೆಯಾಗಿ 7.23 ದಶಲಕ್ಷ ತಲುಪಿದರೆ, ದೇಶೀಯ ಸಂಚಾರ ಶೇ 3.3ರಷ್ಟು ಏರಿಕೆಯೊಂದಿಗೆ 37.24 ದಶಲಕ್ಷ ತಲುಪಿದೆ. ಪ್ರಯಾಣಿಕರ ಸಂಚಾರ ಹೆಚ್ಚಳಕ್ಕೆ ಅನುಗುಣವಾಗಿ ವಿಮಾನ ನಿಲ್ದಾಣದ ಕಾರ್ಯಾಚರಣೆ ಸಾಮರ್ಥ್ಯ ವಿಸ್ತರಿಸಿದ್ದು, 2,80,800 ವಿಮಾನ ಸಂಚಾರಗಳು ದಾಖಲಾಗಿವೆ. ದಿನಕ್ಕೆ ಸರಾಸರಿ 769 ವಿಮಾನ ಸಂಚಾರ ದಾಖಲಾಗಿದ್ದು, ಒಂದೇ ದಿನದಲ್ಲಿ ಗರಿಷ್ಠ 837 ವಿಮಾನಗಳ ಸಂಚಾರ ಸೇರಿದೆ. ಒಂದೇ ದಿನ 1,39,111 ಪ್ರಯಾಣಿಕರು ಪ್ರಯಾಣಿಸಿದ್ದಾರೆ.

5,32,000 ಮೆಟ್ರಿಕ್ ಟನ್ ಸರಕನ್ನು ಸಾಗಣೆ ಮಾಡಲಾಗಿದೆ. 15 ಸರಕು ವಿಮಾನ ಸಂಸ್ಥೆಗಳು 38 ನಗರಗಳಿಗೆ ಸೇವೆ ನೀಡುತ್ತಿವೆ. ಸತತ ಐದನೇ ವರ್ಷವೂ ಭಾರತದ ಪ್ರಮುಖ ರಫ್ತು ಕೇಂದ್ರವಾಗಿ ತನ್ನ ಸ್ಥಾನವನ್ನು ಉಳಿಸಿಕೊಂಡಿದೆ. ಈ ವರ್ಷದಲ್ಲಿ 60 ದಶಲಕ್ಷ ಗುಲಾಬಿ ಹೂ ಸಾಗಣೆ ಮಾಡಿದ್ದು, ಮಾವಿನ ಹಣ್ಣುಗಳ ರಫ್ತು ಶೇ. 12ರಷ್ಟು ಏರಿಕೆಯಾಗಿ 5 ವರ್ಷಗಳ ಗರಿಷ್ಠ ಮಟ್ಟ ತಲುಪಿದೆ ಕೊತ್ತಂಬರಿ ಸೊಪ್ಪಿನ ಸಾಗಣೆಯಲ್ಲಿ ಶೇ 13ರಷ್ಟು ಏರಿಕೆಯಾಗಿದೆ.

# ಹೈಕಮಾಂಡ್ ಬಗ್ಗೆ ಡಿಕೆಶಿ ಮಾತಿನ ಹಿಂದಿನ ಮರ್ಮವೇನು?

## ಖರ್ಗೆ, ಸೋನಿಯಾ, ರಾಹುಲ್ ಏನೇ ಹೇಳಿದ್ರೂ ನಮಗದು ಪ್ರಸಾದ, ರಾಜ್ಯ ಕಾಂಗ್ರೇಸ್‌ನಲ್ಲಿ ನಡೆಯುತ್ತಿದೆ ನಾಯಕತ್ವ ಬದಲಾವಣೆ ಚರ್ಚೆ

• **ಉದಯವಾಹಿನಿ, ಬೆಂಗಳೂರು**

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಏನೇ ಹೇಳಿದರೂ ನಮಗದು ಪ್ರಸಾದ ಇದ್ದಂತೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ರಾಜ್ಯದಲ್ಲಿ ನಾಯಕತ್ವ ಬದಲಾವಣೆಯ ಚರ್ಚೆಯ ಸಂದರ್ಭದಲ್ಲಿ ಡಿಕೆ ಶಿವಕುಮಾರ್ ಆಡಿರುವ ಮಾತು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಬೆಂಗಳೂರಿನಲ್ಲಿ ಶುಕ್ರವಾರ ಮಾತನಾಡಿದ ಅವರು, ಖರ್ಗೆ, ಸೋನಿಯಾ, ರಾಹುಲ್ ಗಾಂಧೀ ಏನೇ ಹೇಳಿದ್ರು ಅದು ನಮಗೆ ಪ್ರಸಾದವಾಗಿದೆ. ಅವರು ಹೇಳಿದಂತೆ ನಾವು ಕೇಳಲೇಬೇಕು ಎಂದರು. ನಾಯಕತ್ವ ಬದಲಾವಣೆಗೆ ಸಂಬಂಧಿಸಿದಂತೆ ಹೈಕಮಾಂಡ್ ಮಾತೇ ಅಂತಿಮ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಇದರ ಬೆನ್ನಲ್ಲೇ ಡಿಕೆ ಶಿವಕುಮಾರ್ ಕೂಡಾ ನಾಯಕತ್ವ ಬದಲಾವಣೆಗೆ ಸಂಬಂಧಿಸಿದಂತೆ ಹೈಕಮಾಂಡ್ ಮಾತಿಗೆ ತಲೆಭಾಗೋದಾಗಿ ತಿಳಿಸಿದ್ದಾರೆ. ಗ್ಯಾಸ್ ಬೆಲೆ ಏರಿಕೆ ವಿಚಾರವಾಗಿ ಇದೇ



ಸಂದರ್ಭದಲ್ಲಿ ಮಾತನಾಡಿದ ಅವರು, ಚುನಾವಣೆ ಮುಗಿಯಲಿ ಅಂತಾನೇ ಬಿಜೆಪಿಗರು ಕಾಯ್ತಾ ಇದ್ರು. ಚುನಾವಣೆ ಮುಗಿದ ಕೂಡಲೇ ಗ್ಯಾಸ್ ಬೆಲೆ ಹೆಚ್ಚಳ ಮಾಡಿದ್ದಾರೆ. ಜನ ಸಾಮಾನ್ಯರು ಹಾಗೂ ಕಾರ್ಮಿಕರ ಬಗ್ಗೆ ಬಿಜೆಪಿಗರಿಗೆ ಕಾಳಜಿ ಇಲ್ಲ. ಈ ಬಗ್ಗೆ ದೊಡ್ಡ ಮಟ್ಟದಲ್ಲಿ ಧ್ವನಿ ಎತ್ತಬೇಕಿದೆ. ಮಾಧ್ಯಮಗಳು ಕೂಡ ಈ ಬಗ್ಗೆ ಧ್ವನಿ ಎತ್ತಬೇಕು ಎಂದರು. ಕೇಂದ್ರ ಸರ್ಕಾರದ ವಿದೇಶಾಂಗ ನೀತಿ ಸರಿಯಿಲ್ಲ. ಅಕ್ಕಪಕ್ಕದ ರಾಷ್ಟ್ರಗಳ ಜೊತೆಗೆ ಸಂಬಂಧ ಸರಿಯಿಲ್ಲ. ಕೇಂದ್ರ ಸರ್ಕಾರ ಜನಸಾಮಾನ್ಯರ ನೋವನ್ನು ಅರ್ಥ ಮಾಡಿಕೊಳ್ಳಬೇಕಿತ್ತು. ಎಲ್ಲಾ ಪದಾರ್ಥಗಳ ಬೆಲೆ ಆಕಾಶಕ್ಕೇರಿದೆ. ಆದಾಯ ಪಾತಳಕ್ಕೆ ಕುಸಿದಿದೆ. ಬೆಲೆ ಹೆಚ್ಚಳಕ್ಕೆ ಹೊಣೆ ಯಾರು? ಎಂದು ಕೇಂದ್ರ ಸರ್ಕಾರವನ್ನು ಪ್ರಶ್ನಿಸಿದರು. ಅಡುಗೆ ಅನಿಲ ಸಿಲಿಂಡರ್ ಬೆಲೆ, ಇತರೆ ಅಗತ್ಯ ಸೇವೆಗಳ ಬೆಲೆ ಏರಿಕೆ ಕುರಿತ ವಾಣಿಜ್ಯ ಸಿಲಿಂಡರ್ ಬೆಲೆ ಹೆಚ್ಚಳದ ಹೊರೆ ಜನಸಾಮಾನ್ಯರ ಮೇಲೆಯೇ ಹೋಗುತ್ತದೆ. ಇದರಿಂದಾಗಿ ಅನೇಕ ಹೋಟೇಲ್‌ಗಳು ಬಂದ್ ಆಗಿವೆ. ಇದರ ಬಗ್ಗೆ ಕೇಂದ್ರ ಸರ್ಕಾರ ಗಮನವಿಡಬೇಕಿತ್ತು. ಸರ್ಕಾರ ಜನರ ಮೇಲಿನ ಹೊರೆ ಇಳಿಸಬೇಕು. ಬೆಲೆ ಏರಿಕೆಯಿಲ್ಲದೇ ಜನಸಾಮಾನ್ಯ ನಿಶ್ಚಿಂತೆಯಿಂದ ಬದುಕುವ ದಾರಿಯನ್ನು ಕೇಂದ್ರ ಸರ್ಕಾರ ಮಾಡಬೇಕಿದೆ ಎಂದರು. ಯುದ್ಧ ನಡೆಯುತ್ತಿರುವ ಹೊತ್ತಿನಲ್ಲಿ ಅಂತರರಾಷ್ಟ್ರೀಯ ಸಂಬಂಧಗಳನ್ನು ಮಿತ್ರ ರಾಷ್ಟ್ರಗಳ ಜೊತೆ ಉಳಿಸಿಕೊಳ್ಳಬೇಕಿರುವುದು ಅತ್ಯವಶ್ಯ. ಅನೇಕ ದೇಶಗಳು ಭಾರತವನ್ನು ಅನೇಕ ರೀತಿಯಲ್ಲಿ ಬೆಂಬಲಿಸಿವೆ. ನಮ್ಮ ವಿದೇಶಾಂಗ ನೀತಿ ವಿಫಲವಾಗದಂತೆ ನೋಡಿಕೊಳ್ಳಬೇಕು ಎಂದರು.

**ಸಚಿವ ಸಂಪುಟ ಸಭೆಯಲ್ಲಿ ಅಲ್ಪಸಂಖ್ಯಾತರ ಪ್ರದೇಶ ಅಭಿವೃದ್ಧಿಗೆ 600 ಕೋಟಿ ಅನುದಾನ ಬಿಡುಗಡೆ ಬಗ್ಗೆ ಕೇಳಿದಾಗ, ಅದನ್ನು ಮಾತ್ರ ಯಾಕೆ ದೊಡ್ಡದಾಗಿ ಬಿಂಬಿಸುತ್ತೀರಿ? ನಿನ್ನೆ ಸಚಿವ ಸಂಪುಟ ಸಭೆಯಲ್ಲಿ 18 ಸಾವಿರ ಕೋಟಿ ವೆಚ್ಚದಲ್ಲಿ ಬಿಡದಿ ಬಳಿ ಸ್ಯಾಟಲೈಟ್ ಟೌನ್ ಶಿಪ್ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. ಈ ವಿಚಾರ ಬಿಟ್ಟು ಅಲ್ಪಸಂಖ್ಯಾತರಿಗೆ ಕೊಟ್ಟಿರುವ ಅನುದಾನ ಬಗ್ಗೆ ಮಾತ್ರ ಮಾತನಾಡುವುದೇಕೆ?.**

**–ಡಿಕೆ ಶಿವಕುಮಾರ್, ಡಿಸಿಎಂ**

### ಮಾರ್ಮಿಕ ಮಾತು ಕುತೂಹಲಕ್ಕೆ ಕಾರಣ

**ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಏನೇ ಹೇಳಿದ್ರೂ ನಮಗದು ಪ್ರಸಾದದಂತೆ ಎಂದು ಡಿಸಿಎಂ ಡಿಕೆ ಶಿಕುಮಾರ್ ಹೇಳಿದರು. ಬೆಂಗಳೂರಿನಲ್ಲಿ ಶುಕ್ರವಾರ ಮಾತನಾಡಿದ ಅವರು, ಹೈಕಮಾಂಡ್ ಮಾತಿಗೆ ಬದ್ಧ ಎಂದು ಪರೋಕ್ಷವಾಗಿ ಸಂದೇಶ ನೀಡಿದರು. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆಯ ಸಂದರ್ಭದಲ್ಲಿ ಡಿಕೆ ಶಿವಕುಮಾರ್ ಆಡಿರುವ ಈ ಮಾರ್ಮಿಕ ಮಾತು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಹಾಗಾದರೆ ಡಿಕೆ ಶಿವಕುಮಾರ್ ಅವರು ಹೈಕಮಾಂಡ್ ಬಗ್ಗೆ ಆಡಿರುವ ಮಾತಿನ ಹಿಂದಿನ ಮರ್ಮವೇನು?**

# ಕಾಂಪೌಂಡ್ ಗೋಡೆ ಕುಸಿದ ಪ್ರಕರಣ ಲೋಕಾಯುಕ್ತ ಪ್ರಕರಣ ದಾಖಲು

• **ಉದಯವಾಹಿನಿ, ಬೆಂಗಳೂರು**

ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ದುರಂತ ನಡೆದ ಸ್ಥಳಕ್ಕೆ ಭೇಟಿ ನೀಡಿದ್ದು, ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಲು ಸೂಚಿಸಿದ್ದಾರೆ. ಕಾಂಪೌಂಡ್ ಕುಸಿದ ಜಾಗವನ್ನು ಪರಿಶೀಲಿಸಿದ ಲೋಕಾಯುಕ್ತರು, 'ಅವೈಜ್ಞಾನಿಕವಾಗಿ ಮಣ್ಣನ್ನು ರಾಶಿ ಮಾಡಲಾಗಿದೆ. ಗೋಡೆ ದುರ್ಬಲವಾಗಿದೆ ಎಂಬುದು ಮೇಲ್ನೋಟಕ್ಕೆ ಕಾಣುತ್ತಿದ್ದರೂ ಅದನ್ನು ಕಡೆಗಣಿಸಿದ್ದು, ದುರಂತಕ್ಕೆ ಕಾರಣ. ಇದಕ್ಕೆ ಕಾರಣರಾದ ಎಲ್ಲಾ ಇಲಾಖೆಗಳ ಮುಖ್ಯಸ್ಥರನ್ನು ವಿಚಾರಣೆಗೆ ಕರೆಸಲು ಸಮನ್ಸ್ ನೀಡಲಾಗುವುದು ಎಂದು ತಿಳಿಸಿದ್ದಾರೆ.

**ಕೆ.ಆರ್ ವೃತ್ತ ಅಂಡರ್‌ಪಾಸ್ ಪರಿಶೀಲನೆ:** ಕೆ.ಆರ್ ವೃತ್ತದಲ್ಲಿರುವ ಅಂಡರ್‌ಪಾಸ್ ಬುಧವಾರ ಸುರಿದ ಭಾರಿ ಮಳೆಯಿಂದ ಸಂಪೂರ್ಣವಾಗಿ ಜಲಾವೃತವಾಗಿತ್ತು. ಗುರುವಾರ ಸಂಜೆವರೆಗೂ ಮಳೆಯ ನೀರು ಹೋಗಿರಲಿಲ್ಲ. ಅಂಡರ್‌ಪಾಸ್ ಅನ್ನು ಪರಿಶೀಲಿಸಿದ ಬಿ.ಎಸ್.ಪಾಟೀಲ ಅವರು, ನೀರು ನಿಲ್ಲದಂತೆ ಕ್ರಮ ತೆಗೆದುಕೊಳ್ಳಲು ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.

# ಮಳೆ ಅಬ್ಬರ: ಸಂಚಾರದ ವೇಳೆ ಈ ಸಲಹೆಗಳನ್ನು ಪಾಲಿಸಿ ಎಂದ ಪೊಲೀಸರು

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ಅಕಾಲಿಕವಾಗಿ ಸುರಿದ ಆಲಿಕಲ್ಲು ಸಹಿತ ಭಾರಿ ಮಳೆಗೆ ಹಲವು ಅವಾಂತರಗಳೇ ಸೃಷ್ಟಿಯಾಗಿವೆ. ವಾಹನ ಸವಾರರು ರಸ್ತೆ ಮಧ್ಯದಲ್ಲಿ ಸಿಲುಕಿ ಪರದಾಡಿದ್ದಾರೆ. ಇನ್ನೂ ಕೆಲವು ದಿನ ಮಳೆಯಾಗುವ ಮುನ್ಸೂಚನೆ ಇರುವುದರಿಂದ ಪೊಲೀಸರು ಸಂಚಾರ ಸಲಹೆಗಳನ್ನು ನೀಡಿದ್ದಾರೆ. ಭಾರಿ ಮಳೆಯಿಂದಾಗಿ ನಗರದ ಹಲವು ಭಾಗಗಳಲ್ಲಿ ರಸ್ತೆಗಳು ಜಲಾವೃತಗೊಂಡಿದ್ದು, ಮಾರ್ಗದಲ್ಲಿ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿದೆ. ಮಳೆಯ ನೀರಿನಿಂದ ಕೆಲವು ಭಾಗಗಳಲ್ಲಿ ರಸ್ತೆಗಳು ಹಾಳಾಗಿವೆ. ಹೀಗಾಗಿ ನಿಧಾನವಾಗಿ ಚಲಿಸಿ ಎಂದು ತಿಳಿಸಿದ್ದಾರೆ.

ಪೊಲೀಸರು ನೀಡಿರುವ ಸಲಹೆಗಳು ಮಳೆ ನೀರು ಸಂಗ್ರಹವಾಗುವ ಸ್ಥಳಗಳಲ್ಲಿ ಎಚ್ಚರಿಕೆಯಿಂದ ವಾಹನಗಳನ್ನು ಚಲಾಯಿಸಿ. ಭಾರಿ ಮಳೆಯ ಸಮಯದಲ್ಲಿ ಅನವಶ್ಯಕ ಪ್ರಯಾಣವನ್ನು ತಪ್ಪಿಸಿ. ಮಳೆಯಿಂದ ರಕ್ಷಣೆಯನ್ನು ಪಡೆಯುವ ಸಲುವಾಗಿ ಮರಗಳ



ಉದಯವಾಹಿನಿ ಚಿತ್ರ

ಆಶ್ರಯ ಪಡೆಯದಿರಿ. ಮಳೆಯಿಂದ ರಕ್ಷಣೆಯನ್ನು ಪಡೆಯಲು ಅಂಡರ್‌ಪಾಸ್‌ಗಳಲ್ಲಿ ಆಶ್ರಯಿಸದಿರಿ. ಇದರಿಂದ ಇತರ ವಾಹನಗಳ ಮತ್ತು ಸಾರ್ವಜನಿಕರ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತದೆ.

ಪ್ರಯಾಣವನ್ನು ಮುಂಚಿತವಾಗಿ ಯೋಚಿಸಿ, ಮುಂಚಿತವಾಗಿ ಹೊರಡಿ. ನಿಧಾನವಾಗಿ ಚಲಿಸಿ, ಇತರ ವಾಹನಗಳ ನಡುವೆ ಸುರಕ್ಷಿತ ಅಂತರವನ್ನು ಕಾಯ್ದುಕೊಳ್ಳಿ. ಒದ್ದೆಯಾದ ರಸ್ತೆಯ ಮೇಲೆ ಚಲಿಸುವಾಗ ಹಠಾತ್ ಬ್ರೇಕ್ ಹಾಕುವುದನ್ನು ತಪ್ಪಿಸಿ. ನೀರು ನಿಲ್ಲುವ ಮಾರ್ಗಗಳನ್ನು ಸಾಧ್ಯವಾದಷ್ಟು ತಪ್ಪಿಸಿ ಸಂಚರಿಸಿ. ಕಡಿಮೆ ಗೋಚರತೆಯ ಸಮಯದಲ್ಲಿ ಹೆಡ್‌ಲೈಟ್‌ಗಳನ್ನು ಆನ್ ಮಾಡಿ ಮತ್ತು ಜಂಕ್ಷನ್‌ಗಳು, ಫ್ಲೈಓವರ್‌ಗಳು ಮತ್ತು ಅಂಡರ್‌ಪಾಸ್‌ಗಳಲ್ಲಿ ಜಾಗರೂಕರಾಗಿರಿ. ಕರ್ತವ್ಯದಲ್ಲಿರುವ ಸಂಚಾರ ಸಿಬ್ಬಂದಿ ನೀಡುವ ತಿರುವು ಚಿಹ್ನೆ ಮತ್ತು ಸೂಚನೆಗಳನ್ನು ತಪ್ಪದೇ ಪಾಲಿಸಿ.

**ಹವಾಮಾನ ಎಚ್ಚರಿಕೆ:** ಬೆಂಗಳೂರಿನಲ್ಲಿ ಮೇ 1ರಿಂದ 48 ಗಂಟೆಯವರೆಗೆ ಭಾಗಶಃ ಮೋಡ ಕವಿದ ವಾತಾವರಣ ಇರಲಿದ್ದು, ಸಂಜೆ ಅಥವಾ ರಾತ್ರಿಯ ವೇಳೆಗೆ ಕೆಲವು ಸ್ಥಳಗಳಲ್ಲಿ ಗಂಟೆಗೆ 30–40 ಕಿ.ಮೀ ವೇಗದಲ್ಲಿ ಗಾಳಿ ಬೀಸಲಿದೆ. ಜತೆಗೆ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಗರಿಷ್ಠ 36 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ 24 ಡಿಗ್ರಿ ಸೆಲ್ಸಿಯಸ್ ತಾಪಮಾನ ಇರುವ ಸಾಧ್ಯತೆಯಿದೆ. ಗರಿಷ್ಠ ತಾಪಮಾನವು ಸಾಮಾನ್ಯಕ್ಕಿಂತ 2 ಎರಡು ಡಿಗ್ರಿ ಹೆಚ್ಚಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

# ಜಲಮಂಡಳಿ; 'ಸರಳ ಕಾವೇರಿ' ಅವಧಿ ವಿಸ್ತರಣೆ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ಜಲಮಂಡಳಿಯು ಸರಳ ಕಾವೇರಿ ಯೋಜನೆಯಡಿ ನೀರಿನ ಸಂಪರ್ಕ ಪಡೆಯುವ ಅವಧಿಯನ್ನು ವಿಸ್ತರಣೆ ಮಾಡಿದೆ. ಕಂತಿನ ಮೂಲಕ ಹಣ ಪಾವತಿ ಮಾಡುವ ವ್ಯವಸ್ಥೆ ಮುಂದುವರಿಸಿದೆ.



ನಾಗರಿಕರಿಗೆ ಆರ್ಥಿಕ ಹೊರೆಯಿಲ್ಲದೇ ಕಾವೇರಿ ನೀರಿನ ಸಂಪರ್ಕ ಕಲ್ಪಿಸಲು ಜಾರಿಗೆ ತಂದಿರುವ ಸರಳ ಕಾವೇರಿ ಯೋಜನೆಯನ್ನು ಮುಂದಿನ ಆದೇಶದವರೆಗೆ ವಿಸ್ತರಿಸಲಾಗಿದೆ' ಎಂದು ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ.ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಕಾವೇರಿ ನೀರಿನ ಸಂಪರ್ಕ ಪಡೆಯುವ ವೇಳೆ ಪಾವತಿಸಬೇಕಾದ ಪ್ರೊರೇಟಾ ಶುಲ್ಕವನ್ನು ಒಮ್ಮೆಲೇ ಪಾವತಿಸಲು ಸಾಧ್ಯವಾಗದವರು ಮತ್ತು ಅಪಾರ್ಟ್‌ಮೆಂಟ್ ಅಸೋಸಿಯೇಷನ್‌ನವರಿಗೆ ಇಎಂಐ ಸೌಲಭ್ಯ ನೀಡಲು ನಿರ್ಧರಿಸಲಾಗಿದೆ ಎಂದು ಹೇಳಿದ್ದಾರೆ.

600 ಅಡಿ ವಿಸ್ತೀರ್ಣದ ನಿವೇಶನದಲ್ಲಿ ಕಟ್ಟಡ ನಿರ್ಮಿಸಿರುವ ಸಣ್ಣ ನಿವೇಶನದಾರರು ಕೇವಲ 1,000 ಆರಂಭಿಕ ಪಾವತಿಸಿ ನೀರಿನ ಸಂಪರ್ಕ ಪಡೆದು ಉಳಿದ ಮೊತ್ತವನ್ನು ಸುಲಭ ಕಂತುಗಳಲ್ಲಿ ಪಾವತಿಸಬಹುದು. ಒಟ್ಟು ಶುಲ್ಕದ ಶೇ 20ರಷ್ಟು ಮೊತ್ತವನ್ನು ಆರಂಭದಲ್ಲಿ ಪಾವತಿಸಿ ಸಂಪರ್ಕ ಪಡೆಯಬಹುದು. ಉಳಿದ ಶೇ 80ರಷ್ಟು ಮೊತ್ತವನ್ನು ಪಾವತಿಸಲು 12 ತಿಂಗಳ ಕಾಲಾವಕಾಶ ಇದೆ. ಒಮ್ಮೆಲೇ ದೊಡ್ಡ ಮೊತ್ತ ಪಾವತಿಸಲು ಕಷ್ಟಪಡುವ ಅಪಾರ್ಟ್‌ಮೆಂಟ್‌ಗಳ ಅಸೋಸಿಯೇಷನ್‌ಗಳಿಗೂ ಇದು ಉಪಯೋಗವಾಗಲಿದೆ. ಕೇವಲ ಮನೆಗಳಿಗೆ ಮಾತ್ರವಲ್ಲದೆ, ವಾಣಿಜ್ಯ ಕಟ್ಟಡಗಳಿಗೂ ಇಎಂಐ ಮೂಲಕ ಸರಳ ಕಾವೇರಿ ಸೌಲಭ್ಯವನ್ನು ವಿಸ್ತರಿಸಲಾಗಿದೆ. ಗ್ರಾಹಕರು ಕೂಡ ಇದರ ಉಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

# ಪೌತಿ ಖಾತೆ ಮಾಡಿಕೊಡಲು 2 ಲಕ್ಷ ಲಂಚ: ಬೇಗೂರು ನಾಡ ಕಚೇರಿಯ ವಿಎ ಬಂಧನ

• **ಉದಯವಾಹಿನಿ, ಬೆಂಗಳೂರು**

ಪೌತಿ ಖಾತೆ ಮಾಡಿಕೊಡಲು 2 ಲಕ್ಷ ಲಂಚ ಪಡೆಯುತ್ತಿದ್ದ ವೇಳೆ, ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ನಾಡ ಕಚೇರಿಯ ಗ್ರಾಮ ಆಡಳಿತಾಧಿಕಾರಿ (ವಿಎ) ಮಂಜುನಾಥ್ ಅವರನ್ನು ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ. ಮಂಗಮ್ಮನಪಾಳ್ಯದ ನಿವಾಸಿ ಚೇತನ್.ಎಸ್ ಅವರು ಪೌತಿ ಖಾತೆಗಾಗಿ ಅರ್ಜಿ ಸಲ್ಲಿಸಿದ್ದರು. ಈ ಕೆಲಸ ಮಾಡಿಕೊಡಲು ಮಂಜುನಾಥ್ ಅವರು 10 ಲಕ್ಷಕ್ಕೆ ಬೇಡಿಕೆ ಇಟ್ಟು, 2 ಲಕ್ಷಕ್ಕೆ ಒಪ್ಪಿಕೊಂಡಿದ್ದರು. ಈ ಬಗ್ಗೆ ಚೇತನ್ ಅವರು ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. ಲೋಕಾಯುಕ್ತ ಎಸ್‌ಪಿ ಶಿವಪ್ರಕಾಶ್ ದೇವರಾಜ್ ಅವರ ಮಾರ್ಗದರ್ಶನದಲ್ಲಿ, ಲೋಕಾಯುಕ್ತ ಪೊಲೀಸರು ಕಾರ್ಯಾಚರಣೆ ರೂಪಿಸಿದ್ದರು. ಅದರಂತೆ ದೂರುದಾರರು ಆರೋಪಿಯ ಕಚೇರಿಗೆ ತೆರಳಿ 2 ಲಕ್ಷ ನೀಡಿದ್ದರು. ಈ ವೇಳೆ ದಾಳಿ ನಡೆಸಿ, ಆರೋಪಿಯನ್ನು ಬಂಧಿಸಲಾಗಿದೆ. ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

# ಬೆಂಗಳೂರು ಆಸ್ತಿ ತೆರಿಗೆ ರಿಯಾಯಿತಿ: ಜಿಬಿಎ ವ್ಯಾಪ್ತಿಯಲ್ಲಿ ಮೇ 31 ರವರೆಗೆ ಶೇ. 5ರಷ್ಟು ಡಿಸ್ಕೌಂಟ್ ವಿಸ್ತರಣೆ – ಸರ್ಕಾರ ಆದೇಶ

• **ಉದಯವಾಹಿನಿ, ಬೆಂಗಳೂರು**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಐದು ನಗರ ಪಾಲಿಕೆಗಳು 2026 – 27ನೇ ಸಾಲಿನ ಆಸ್ತಿ ತೆರಿಗೆಯನ್ನು ಸಂಪೂರ್ಣವಾಗಿ ಪಾವತಿಸುವವರಿಗೆ ಶೇಕಡಾ 5 ರಷ್ಟು ರಿಯಾಯಿತಿ ನೀಡುವ ಅವಧಿಯನ್ನು ಮೇ 31ರವರೆಗೆ ವಿಸ್ತರಿಸಲಾಗಿದೆ. ಪಾಲಿಕೆಗಳ ಅಧಿಕಾರಿ, ಸಿಬ್ಬಂದಿ ಜನಗಣತಿ ಸಮೀಕ್ಷೆಯಲ್ಲಿ ಪಾಲ್ಗೊಂಡಿದ್ದು, ಬಹುತೇಕ ನಾಗರಿಕರು ತೆರಿಗೆ ಪಾವತಿ ಮಾಡಲು ಸಾಧ್ಯವಾಗಿಲ್ಲ. ಹಾಗಾಗಿ, ಶೇಕಡಾ 5 ರಷ್ಟು ರಿಯಾಯಿತಿ ಅವಧಿಯನ್ನು ವಿಸ್ತರಿಸಬೇಕೆಂದು ಜನಪ್ರತಿನಿಧಿಗಳು ಹಾಗೂ ಸಂಘ –ಸಂಸ್ಥೆಗಳ ಪ್ರತಿನಿಧಿಗಳೂ ಮನವಿ ಸಲ್ಲಿಸಿದ್ದರು. ಹೀಗಾಗಿ, ಪೂರ್ಣ ತೆರಿಗೆ ಪಾವತಿಸುವವರಿಗೆ ಶೇಕಡಾ 5ರಷ್ಟು ರಿಯಾಯಿತಿ ನೀಡುವ ಸೌಲಭ್ಯವನ್ನು ಮೇ 31ರವರೆಗೆ ವಿಸ್ತರಿಸಿ ನಗರಾಭಿವೃದ್ಧಿ ಇಲಾಖೆಯು ಆದೇಶ ಹೊರಡಿಸಿದೆ. ಮೈಸೂರಿನಲ್ಲಿ ರಿಯಾಯಿತಿಗೆ ಉತ್ತಮ ಪ್ರತಿಕ್ರಿಯೆ ಮೈಸೂರು ಮಹಾನಗರ ಪಾಲಿಕೆಯಲ್ಲಿ ಆಸ್ತಿ ತೆರಿಗೆ ಪಾವತಿಗೆ ಶೇಕಡಾ 5 ರಷ್ಟು





ಉದಯವಾಹಿನಿ ಚಿತ್ರ

ವಿನಾಯಿತಿ ನೀಡಿದ್ದ ಅಭಿಯಾನಕ್ಕೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಏಪ್ರಿಲ್ ತಿಂಗಳಲ್ಲಿ ತೆರಿಗೆ ಪಾವತಿಯಲ್ಲಿ ಶೇಕಡಾ 5ರಷ್ಟು ವಿನಾಯಿತಿ ನೀಡಿದ್ದರಿಂದ 111.27 ಕೋಟಿ ರೂ. ತೆರಿಗೆ ಸಂಗ್ರಹವಾಗಿದೆ. ಏ.1 ರಿಂದ 28 ರವರೆಗೆ 81,521 ಆಸ್ತಿಗಳ ಮಾಲೀಕರು ತೆರಿಗೆ ಪಾವತಿ ಮಾಡಿರುವುದು ವಿಶೇಷವಾಗಿದೆ. ಪಾಲಿಕೆಯ 9 ವಲಯ ಕಚೇರಿಗಳಲ್ಲೂ ಶೇ.5ರಷ್ಟು ವಿನಾಯಿತಿ ಸೌಲಭ್ಯ ಪಡೆಯಲು ತೆರಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದರಿಂದ ಪಾಲಿಕೆ ವತಿಯಿಂದ ಹೆಚ್ಚುವರಿ ಕೌಂಟರ್ ತೆರೆದು ತೆರಿಗೆ ಸಂಗ್ರಹಿಸಲು ಕ್ರಮ ಕೈಗೊಳ್ಳಲಾಗಿತ್ತು. ಕಳೆದ ವರ್ಷ 240 ಕೋಟಿ ರೂ. ತೆರಿಗೆ ಸಂಗ್ರಹಿಸುವ ಗುರಿ ಹೊಂದಿದ್ದ ಮೈಸೂರು ಮಹಾನಗರ ಪಾಲಿಕೆ ವರ್ಷಾಂತ್ಯದ ವೇಳೆಗೆ 242 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹಿಸಿ, ಗುರಿಗಿಂತ ಎರಡು ಕೋಟಿ ರೂ. ಹೆಚ್ಚಾಗಿ ಸಂಗ್ರಹಿಸಿತ್ತು. ಈ ಸಾಲಿನಲ್ಲಿ 265 ಕೋಟಿ ರೂ. ಆಸ್ತಿ ತೆರಿಗೆ ಸಂಗ್ರಹಿಸುವ ಗುರಿ ಹೊಂದಿದೆ. ಆದರೆ ತೆರಿಗೆ ವಿನಾಯಿತಿ ಅಭಿಯಾನದಲ್ಲೇ ಒಟ್ಟು 111.26 ಕೋಟಿ ರೂ. ತೆರಿಗೆ ಸಂಗ್ರಹವಾಗಿದೆ. 28 ದಿನಗಳಲ್ಲಿ ಸಂಗ್ರಹವಾದ ತೆರಿಗೆಯಲ್ಲಿ 103,50 ಕೋಟಿ ರೂ. ಬ್ಯಾಂಕ್ ಖಾತೆಗೆ ನಗದು ರೂಪದಲ್ಲಿ ತೆರಿಗೆ ಪಾವತಿಸಿದ್ದರೆ, 7.76 ಕೋಟಿ ರೂ. ಚೆಕ್ ರೂಪದಲ್ಲಿ ತೆರಿಗೆ ಪಾವತಿಸಲಾಗಿದೆ. ಒಟ್ಟಾರೆ ಮೈಸೂರು ಮಹಾನಗರ ಪಾಲಿಕೆ 111.26 ಕೋಟಿ ರೂ. ತೆರಿಗೆ ಸಂಗ್ರಹಿಸಿದೆ.

# ಪತ್ರಕರ್ತೆಯರ ಸಂಘಕ್ಕೆ ಪೂರ್ಣಿಮಾ ಅಧ್ಯಕ್ಷೆ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ಪತ್ರಕರ್ತೆಯರ ಸಂಘದ ಅಧ್ಯಕ್ಷರಾಗಿ ಆರ್. ಪೂರ್ಣಿಮಾ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಪ್ರೆಸ್‌ಕ್ಲಬ್‌ನಲ್ಲಿ ನಡೆದ ಸಂಘದ ಸರ್ವ ಸದಸ್ಯೆಯರ ಸಭೆಯಲ್ಲಿ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಎನ್.ವಿ. ಸೌಮ್ಯಾರಾಣಿ (ಉಪಾಧ್ಯಕ್ಷೆ), ಮಾಲತಿ ಭಟ್ (ಪ್ರಧಾನ ಕಾರ್ಯದರ್ಶಿ), ಡಿ. ಯಶೋದಾ (ಜಂಟಿ ಕಾರ್ಯದರ್ಶಿ), ವಾಣಿಶ್ರೀ ಜೆ.ಎನ್.(ಖಜಾಂಚಿ), ಎಂ.ಪಿ. ಸುಶೀಲಾ, ಕೆ.ಎಚ್.ಸಾವಿತ್ರಿ, ಸಿ.ಜಿ. ಮಂಜುಳಾ, ಕಾನ್ಸೆಪ್ಟಾ ಫರ್ನಾಂಡೀಸ್, ಶಮಂತ ಡಿ.ಎಸ್., ಎ.ಬಿ. ರುದ್ರಮ್ಮ (ಕಾರ್ಯಕಾರಿ ಸಮಿತಿ ಸದಸ್ಯರು) ಆಯ್ಕೆಯಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಭಾನುವಾರದಂದು ನೀಟ್ ಪರೀಕ್ಷೆ : ಸಕಲ ಸಿದ್ಧತೆ

• **ಉದಯವಾಹಿನಿ, ಬೆಂಗಳೂರು**

ದೇಶದ ಅತಿದೊಡ್ಡ ವೈದ್ಯಕೀಯ ಪ್ರವೇಶ ಪರೀಕ್ಷೆಯಾದ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ನೀಟ್ ಯುಜಿ 2026 ಮೇ 3ರಂದು ನಡೆಯಲಿದೆ. ಭಾನುವಾರದಂದು ಮಧ್ಯಾಹ್ನ 2ರಿಂದ ಸಂಜೆ 5 ಗಂಟೆವರೆಗೆ ದೇಶದಾದ್ಯಂತ ಒಂದೇ ಹಂತದಲ್ಲಿ ಈ ಪರೀಕ್ಷೆ ನಡೆಯುತ್ತದೆ. ಸುಮಾರು 22 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಎಂಬಿಬಿಎಸ್ , ಬಿಡಿಎಸ್ ಮತ್ತು ಇತರ ವೈದ್ಯಕೀಯ ಕೋರ್ಸ್‌ಗಳಿಗೆ ಪ್ರವೇಶ ಪಡೆಯುವ ಕನಸು ನನಸಾಗಿಸಲು ಈ ಪರೀಕ್ಷೆಗೆ ಸಿದ್ಧರಾಗಿದ್ದಾರೆ. ಕಳೆದ ಕೆಲವು ವರ್ಷಗಳಲ್ಲಿ ನೀಟ್ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ಲೀಕ್, ಅಕ್ರಮ ಮತ್ತು ಅನ್ಯಾಯದ ಆರೋಪಗಳು ಹೆಚ್ಚಾಗಿದ್ದವು. ಇದರಿಂದ ವಿದ್ಯಾರ್ಥಿಗಳು ಮತ್ತು ಪೋಷಕರಲ್ಲಿ ಆತಂಕ ಮತ್ತು ಅಸಮಾಧಾನ ಹೆಚ್ಚಾಗಿತ್ತು. ಈ ಬಾರಿ ಅಂತಹ ಕಹಿ ಘಟನೆಗಳು ಪುನರಾವರ್ತನೆಯಾಗದಂತೆ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿ ಸಕಲ ಎಚ್ಚರಿಕೆ ವಹಿಸಿದೆ. ಈ ಬಾರಿ ಎನ್‌ಟಿಎ ಜೀರೋ ಲೀಕ್ ಪಾಲಿಸಿ ಅನ್ನು ಜಾರಿಗೊಳಿಸಿದೆ. ಪ್ರಶ್ನೆಪತ್ರಿಕೆಗಳನ್ನು ಮುದ್ರಣದಿಂದ ಪರೀಕ್ಷಾ ಕೇಂದ್ರಗಳವರೆಗೆ ಜಿಪಿಎಸ್ ಟ್ರ್ಯಾಕಿಂಗ್‌ನೊಂದಿಗೆ ಪೊಲೀಸ್ ಎಸ್ಕಾರ್ಟ್‌ನಲ್ಲಿ ಸಾಗಿಸಲಾಗುತ್ತಿದೆ. ಡಬಲ್ ಲಾಕ್ ಸ್ಟ್ರಾಂಗ್‌ರೂಮ್‌ಗಳಲ್ಲಿ 24 ಗಂಟೆ ಸಿಸಿಟಿವಿ ನಿಗಾ ಇರಲಿದೆ. ಪರೀಕ್ಷಾ ಕೇಂದ್ರಗಳಲ್ಲಿ ಬಯೋಮೆಟ್ರಿಕ್ ವೆರಿಫಿಕೇಷನ್ ಮತ್ತು ಫೇಷಿಯಲ್ ರೆಕಗ್ನಿಷನ್ ಮತ್ತು ಫಿಂಗರ್‌ಪ್ರಿಂಟ್, ಹಾಗೂ ಎಐ ಆಧಾರಿತ ಸಿಸಿಟಿವಿ ಕ್ಯಾಮೆರಾಗಳು, 5ಜಿ ಜ್ಯಾಮರ್‌ಗಳು, ಡಿಜಿಟಲ್ ಫ್ರಿಸ್ಕಿಂಗ್ ಮತ್ತು ಲೈವ್ ಮಾನಿಟರಿಂಗ್ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ.

ವಿದ್ಯಾರ್ಥಿಗಳು ಅಡಿಟ್ ಕಾರ್ಡ್, ಮೂಲ ಗುರುತಿನ ಚೀಟಿ ಜೊತೆಗೆ ತರಬೇಕು. ಮೊಬೈಲ್ ಫೋನ್, ಕ್ಯಾಲ್ಕುಲೇಟರ್, ವಾಚ್, ನೀರು ಬಾಟಲ್ ಸೇರಿದಂತೆ ಹಲವು ವಸ್ತುಗಳನ್ನು ಪರೀಕ್ಷಾ ಕೇಂದ್ರಕ್ಕೆ ತರಬಾರದು. ಎಲ್ಲಾ ಕೇಂದ್ರಗಳಲ್ಲಿ ತೀವ್ರ ಫ್ರಿಸ್ಕಿಂಗ್ ನಡೆಯಲಿದೆ.

ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ಲೀಕ್ ಸುದ್ದಿಗಳನ್ನು ನಂಬದಂತೆ ಎನ್‌ಟಿಎ ವಿದ್ಯಾರ್ಥಿಗಳಿಗೆ ಎಚ್ಚರಿಕೆ ನೀಡಿದೆ. ಕಳೆದೆರೆಡು ಬಾರಿ ನೀಟ್ ಪರೀಕ್ಷೆಯಲ್ಲಿ ಉಂಟಾದ ಗೊಂದಲಗಳು ಮತ್ತು ಅಕ್ರಮಗಳು ಪುನಃ ಆಗದಂತೆ ಪರೀಕ್ಷಾ ಮಂಡಳಿ ಈ ಬಾರಿ ಮುನ್ನೆಚ್ಚರಿಕೆ ವಹಿಸಿದೆ.

# ಬಿಎಸ್‌ಡಬ್ಲ್ಯುಎಂಎಲ್ ಮತ್ತೊಂದು ಹಂತಕ್ಕೆ ಕಸ ಸಂಘರ್ಷ: ಮುಖ್ಯಕಾರ್ಯದರ್ಶಿಗೆ ಪತ್ರ

• **ಉದಯವಾಹಿನಿ, ಬೆಂಗಳೂರು**

ಘನತ್ಯಾಜ್ಯ ನಿರ್ವಹಣೆ ನಿಯಮಿತದ ಸಿಇಒ ಕರೀಗೌಡ ಅವರು ಗುತ್ತಿಗೆದಾರರಿಗೆ ಬೆದರಿಕೆ ಹಾಕಿ, ಖಾಲಿ ಕಾಗದಕ್ಕೆ ಸಹಿ ಹಾಕಿಸಿಕೊಳ್ಳುತ್ತಿದ್ದಾರೆ. ಸಾಕ್ಷ್ಯ ನಾಶಕ್ಕೂ ಮುಂದಾಗಿದ್ದಾರೆ ಎಂದು ಆರೋಪಿಸಿ ಕಸ ಗುತ್ತಿಗೆದಾರರ ಸಂಘದಿಂದ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆಯಲಾಗಿದೆ. ಈ ಮೂಲಕ ಬೆಂಗಳೂರು ಮಹಾನಗರ ಸ್ವಚ್ಛತೆ ಮತ್ತು ಲಾರಿ ಮಾಲೀಕರ–ಗುತ್ತಿಗೆದಾರರ ಸಂಘ, ಕರೀಗೌಡ ನಡುವಿನ ಸಂಘರ್ಷ ಮತ್ತೊಂದು ಹಂತಕ್ಕೆ ತಲುಪಿದೆ. ಪಾದಚಾರಿ ಮಾರ್ಗದಲ್ಲಿ ವ್ಯಾಪಾರ ವಹಿವಾಟಿನಿಂದ ಉತ್ಪತ್ತಿಯಾಗುವ ಕಸದ ವಿಲೇವಾರಿ ಬಗ್ಗೆ ಚರ್ಚಿಸಲು ನಮ್ಮ ಗುತ್ತಿಗೆದಾರರನ್ನು ಬಿಎಸ್‌ಡಬ್ಲ್ಯುಎಂಎಲ್‌ನ ಕಚೇರಿಗೆ ಕರೀಗೌಡ ಅವರು ಏಪ್ರಿಲ್ 30ರಂದು ಮಧ್ಯಾಹ್ನ 1 ಗಂಟೆಗೆ ಕರೆದಿದ್ದರು. ಮಹದೇವಪುರ ಮತ್ತು



ಉದಯವಾಹಿನಿ ಚಿತ್ರ

ಕೆ.ಆರ್. ಪುರ ವಿಭಾಗದ ಸಹಾಯಕ ಪ್ರಧಾನ ವ್ಯವಸ್ಥಾಪಕರಾದ ಜ್ಯೋತಿ ಮತ್ತು ಶ್ರೀನಿಧಿ ಅವರು ಸಭೆಯಲ್ಲಿ ಹಾಜರಿದ್ದರು. ಸಭೆಯ ಹಾಜರಾತಿ ಪುಸ್ತಕದಲ್ಲಿ ಹಾಳೆ ಇರಿಸಿ, ಬೆದರಿಕೆ ತಂತ್ರವಾಗಿ ನೀವು ಘನತ್ಯಾಜ್ಯ ನಿರ್ವಹಣೆ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳೇ ಇಲ್ಲವೇ ಎಂದು ಪ್ರಶ್ನಿಸಿದ್ದಾರೆ' ಎಂದು ಮುಖ್ಯ ಕಾರ್ಯದರ್ಶಿಯವರಿಗೆ ಬರೆದಿರುವ ಪತ್ರದಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಎಸ್. ಎನ್. ಬಾಲಸುಬ್ರಮಣಿಯಂ ತಿಳಿಸಿದ್ದಾರೆ. 'ಸಂಘದ ಪದಾಧಿಕಾರಿಗಳಾಗಿದ್ದಲ್ಲಿ ಮುಚ್ಚಳಿಕೆ ಪತ್ರವನ್ನು ನೀಡುವಂತೆ ಬೆದರಿಸಿದ್ದಾರೆ. ಅಲ್ಲದೆ, ಸಂಘದಲ್ಲಿ ಸದಸ್ಯರಾಗಿದ್ದರೆ ನಿಮಗೆ ಯಾವುದೇ ರೀತಿಯ ರಿಯಾಯಿತಿ ನೀಡುವುದಿಲ್ಲ ಸಂಘದಲ್ಲಿ ಇಲ್ಲವೆಂದು ಸಹಿ ಹಾಕಿದರೆ ನಿಮಗೆ ಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದ್ದಾರೆ.

ನಾವು ಈಗಾಗಲೇ ಕರೀಗೌಡ ಅವರ ವಿರುದ್ಧ ನ್ಯಾಯಾಲಯದಲ್ಲಿ ದೂರಿನ ಪ್ರಮಾಣ ಪತ್ರ ಸಲ್ಲಿಸಿರುವುದರಿಂದ ಸಾಕ್ಷ್ಯ ನಾಶ ಮಾಡಲು ಹೊರಟಿದ್ದಾರೆ. ಆದ್ದರಿಂದ ಇವರ ವಿರುದ್ಧ ಬೆದರಿಕೆ ಮತ್ತು ಸಾಕ್ಷ್ಯನಾಶ ಆರೋಪಡಡಿ ಪ್ರಕರಣ ದಾಖಲಿಸಲು ಅನುಮತಿ ನೀಡಬೇಕು' ಎಂದು ಪತ್ರದಲ್ಲಿ ಕೋರಿದ್ದಾರೆ. ಈ ಬಗ್ಗೆ ಪ್ರತಿಕ್ರಿಯೆ ಪಡೆಯಲು ಕರೀಗೌಡ ಅವರನ್ನು ಸಂಪರ್ಕಿಸಿದಾಗ, ಅವರು ಸ್ಪಂದಿಸಲಿಲ್ಲ.

# ಗೋಡೆ ಕೊರೆದು ಚಿನ್ನಾಭರಣ ಮಳಿಗೆಗೆ ಕನ್ನ : 1.20 ಕೋಟಿ ರೂ. ಆಭರಣ ಕಳವು

• **ಉದಯವಾಹಿನಿ, ಬೆಂಗಳೂರು**

ಚಾಲಾಕಿ ಖದೀಮರು ರೂಮ್ ಬೀಗ ಒಡೆದು ಒಳ ನುಗ್ಗಿ ಗೋಡೆ ಕೊರೆದು ಕನ್ನ ಹಾಕಿ ಆ ಮೂಲಕ ಚಿನ್ನಾಭರಣ ಮಳಿಗೆಗೆ ನುಸುಳಿ ಸುಮಾರು 1.20 ಕೋಟಿ ಮೌಲ್ಯದ 70 ಕೆಜಿ ಬೆಳ್ಳಿ ಆಭರಣಗಳನ್ನು ಕದ್ದೊಯ್ದಿರುವ ಘಟನೆ ಬಾಗಲಗುಂಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ತಡವಾಗಿ ಬೆಳಕಿಗೆ ಬಂದಿದೆ. ದಾಸರಹಳ್ಳಿ 8ನೇ ಮೈಲಿ, ಹಾವನೂರು ಲೇಔಟ್‌ನಲ್ಲಿ ಮಹೇಂದ್ರ ಎಂಬುವವರಿಗೆ ಸೇರಿದ ಜ್ಯೂವೆಲರಿ ಅಂಗಡಿ ಇದೆ. ವ್ಯಾಪಾರ ವಹಿವಾಟು ಮುಗಿಸಿ ಬೀಗ ಹಾಕಿಕೊಂಡು ಮಹೇಂದ್ರ ಅವರು ಮನೆಗೆ ತೆರಳಿದ್ದಾರೆ.ಇದೇ ಸಮಯಕ್ಕಾಗಿ ಕಾದಿದ್ದ ಚೋರರು ಜ್ಯೂವೆಲರಿ ಮಳಿಗೆಗೆ ಹೊಂದಿಕೊಂಡಿರುವ ಹಿಂಭಾಗದ ರೂಮ್‌ನ ಬೀಗ ಒಡೆದು ಒಳ ನುಗ್ಗಿ ಗೋಡೆ ಕೊರೆದು ಕನ್ನ ಹಾಕಿ ಮಳಿಗೆಗೆ ನುಗ್ಗಿ ಕೈಗೆ ಸಿಕ್ಕಿದಷ್ಟು ಬೆಳ್ಳಿ ಆಭರಣಗಳನ್ನು ತುಂಬಿಕೊಂಡು ಪರಾರಿಯಾಗಿದ್ದಾರೆ.

# ರಾಜ್ಯದಲ್ಲಿ 653 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ: 18,593 ಪ್ರಕರಣ ದಾಖಲು

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಕಳೆದ ಮೂರು ವರ್ಷ ನಾಲ್ಕು ತಿಂಗಳಲ್ಲಿ 653 ಕೋಟಿ ಮೌಲ್ಯದ ಡ್ರಗ್ಸ್ ವಶಪಡಿಸಿಕೊಂಡು 18,593 ಪ್ರಕರಣ ದಾಖಲಿಸಿ ಕೊಳ್ಳಲಾಗಿದೆ. ಸರ್ಕಾರ ಮತ್ತು ಪೊಲೀಸ್ ಇಲಾಖೆಗೆ ದೊಡ್ಡ ಸವಾಲಾಗಿರುವುದು ಮಾದಕ ವಸ್ತು ಮಾರಾಟ ಹಾಗೂ ಸರಬರಾಜು ದಂಧೆ. ಡ್ರಗ್ಸ್ ಮಾರಾಟ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗಿದೆ. 2023ರಿಂದ ಇದುವರೆಗೆ ಬೆಂಗಳೂರಿನಲ್ಲಿ ಡ್ರಗ್ಸ್ ದಂಧೆಯಲ್ಲಿ ತೊಡಗಿದ್ದ 291 ವಿದೇಶಿಯರನ್ನು ಬಂಧಿಸಲಾಗಿದೆ. ಇದೇ ಅವಧಿಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವಿವಿಧ ಮಾದರಿಯ 25,500 ಕೆ.ಜಿ ಡ್ರಗ್ಸ್ ಜಪ್ತಿ ಮಾಡಿಕೊಳ್ಳಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು.





ಉದಯವಾಹಿನಿ ಚಿತ್ರ

ರಾಜಧಾನಿ ಬೆಂಗಳೂರಿನಲ್ಲಿ ಅತಿ ಹೆಚ್ಚು ಡ್ರಗ್ಸ್ ಮಾರಾಟ ದಂಧೆ ನಡೆಯುತ್ತಿದ್ದು, ಇದೇ ವರ್ಷದ ಜನವರಿ 1ರಿಂದ ಏಪ್ರಿಲ್ 28ರವರೆಗೆ 130.18 ಕೋಟಿ ಮೌಲ್ಯದ ಡ್ರಗ್ಸ್ ಜಪ್ತಿ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಮಾದಕ ವಸ್ತುಗಳ ಮಾರಾಟ ಹಾಗೂ ಪೂರೈಕೆ ದಂಧೆ ಕಡಿವಾಣಕ್ಕೆ ಬೆಂಗಳೂರು ಪೊಲೀಸರು ವಿಶೇಷ ಕಾರ್ಯಾಚರಣೆ ಮುಂದುವರಿಸಿದ್ದಾರೆ. ಎನ್‌ಸಿಬಿ, ಅಬಕಾರಿ ಇಲಾಖೆ, ವಲಸೆ ಅಧಿಕಾರಿಗಳು ಹಾಗೂ ನಗರ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ ಡ್ರಗ್ಸ್ ಪೆಡ್ಲರ್‌ಗಳನ್ನು ಬಂಧಿಸಿದ್ದಾರೆ. ನಗರದಲ್ಲಿ ಸೆರೆ ಸಿಕ್ಕಿದ ಆರೋಪಿಗಳು ನೀಡಿದ ಮಾಹಿತಿ ಆಧರಿಸಿ, ಕೇರಳ, ಗೋವಾ, ಮಹಾರಾಷ್ಟ್ರ, ನವದೆಹಲಿ, ಬಿಹಾರದಲ್ಲೂ ಕಾರ್ಯಾಚರಣೆ ನಡೆಸಿ ಪೆಡ್ಲರ್‌ಗಳನ್ನು ಬಂಧಿಸಲಾಗಿದೆ ಎಂದು ತಿಳಿಸಿದರು.

**16 ಆರೋಪಿಗಳ ಬಂಧನ:** ಮಾದಕ ವಸ್ತುಗಳ ಸಾಗಾಣಿಕೆ, ಮಾರಾಟ ಜಾಲದ ವಿರುದ್ಧ ನಗರದ ವಿವಿಧ ಠಾಣೆಗಳ ಪೊಲೀಸರು ಕಳೆದ ಒಂದು ವಾರದಲ್ಲಿ ವಿಶೇಷ ಕಾರ್ಯಾಚರಣೆ ನಡೆಸಿ, ಒಟ್ಟು 36.67 ಕೋಟಿ ಮೌಲ್ಯದ ವಿವಿಧ ಮಾದರಿಯ ಮಾದಕ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ಸಿಸಿಬಿ ಮಾದಕ ದ್ರವ್ಯ ನಿಗ್ರಹ ದಳ ಮತ್ತು ಬಾಗಲೂರು, ಆಡುಗೋಡಿ, ಚಿಕ್ಕಜಾಲ, ಎಚ್‌ಎಸ್‌ಆರ್ ಲೇಔಟ್, ಯಶವಂತಪುರ ಠಾಣೆಯ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ, ಡ್ರಗ್ಸ್ ಮಾರಾಟ ಮಾಡುತ್ತಿದ್ದ 16 ಆರೋಪಿಗಳನ್ನು ಬಂಧಿಸಿದ್ದಾರೆ. ಬಂಧಿತರಲ್ಲಿ ನಾಲ್ವರು ವಿದೇಶಿ ಪ್ರಜೆಗಳು, ಎಂಟು ಮಂದಿ ಹೊರ ರಾಜ್ಯದವರು, ನಾಲ್ವರು ಸ್ಥಳೀಯರು ಎಂದು ನಗರ ಪೊಲೀಸ್ ಕಮಿಷನರ್ ಸೀಮಾಂತ್‌ಕುಮಾರ್ ಸಿಂಗ್ ಮಾಹಿತಿ ನೀಡಿದರು.

# ಸಿಗದ ಪರಿಹಾರ, ತಪ್ಪದ ಸಂಕಷ್ಟ

## ಮಾತಿನಲ್ಲೇ ಉಳಿದ ಜಿಬಿಎ ಮುಖ್ಯ ಆಯುಕ್ತರ ಭರವಸೆ, ವಾಹನ ಸಂಚಾರಕ್ಕೆ ಅಡ್ಡಿ

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ಸುರಿದ ಆಲಿಕಲ್ಲು, ಬಿರುಗಾಳಿ ಮಳೆಯಿಂದ ಉಂಟಾದ ಸಮಸ್ಯೆಗಳಿಗೆ ಜಿಬಿಎ ಅಥವಾ ನಗರ ಪಾಲಿಕೆಗಳಿಂದ ನಿರೀಕ್ಷಿತ ಪರಿಹಾರ ಸಿಗದೆ, ವಾಹನ ಸಂಚಾರಕ್ಕೆ ಅಡ್ಡಿಯಾಗಿ ಜನರು ಸಂಕಷ್ಟ ಎದುರಿಸಿದರು. ನೂರಾರು ಮರಗಳು ಕೊಂಬೆಗಳು ಧರೆಗುರುಳಿದ್ದು, ಅವುಗಳನ್ನು ತೆರವು ಮಾಡುವ ಕಾರ್ಯ ರಾತ್ರಿವರೆಗೂ ನಡೆಯುತ್ತಲೇ ಇತ್ತು. ಕೆಲವು ಬಡಾವಣೆಗಳಲ್ಲಿ ನಾಗರಿಕರು ಮನೆಯಿಂದ ಹೊರಬರಲು ಸಾಧ್ಯವಿಲ್ಲದಂತಹ ಸ್ಥಿತಿಯಿದ್ದರೂ, ಮರ ಕೊಂಬೆಗಳನ್ನು ತುರ್ತಾಗಿ ತೆರವುಗೊಳಿಸುವ ಕೆಲಸವನ್ನು ನಗರ ಪಾಲಿಕೆ ಸಿಬ್ಬಂದಿ ಮಾಡಿಲ್ಲ, ದೂರು ನೀಡಿದ ಮೂರು ಗಂಟೆಯೊಳಗೆ ಪರಿಹಾರ ನೀಡುತ್ತೇವೆ ಎಂಬ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ನೀಡಿದ ಭರವಸೆ ಈಡೇರಿಲ್ಲ. ಸದಾಶಿವನಗರ ಭಾಷ್ಯಂ ವೃತ್ತ, ಜಯನಗರ 9ನೇ ಮುಖ್ಯರಸ್ತೆ, 32 ಅಡ್ಡರಸ್ತೆ, 23ನೇ ಅಡ್ಡರಸ್ತೆ, ಜಯನಗರದ ಪುಟ್ಟಣ್ಣ ಜಂಕ್ಷನ್, ಕುಮಾರಕೃಪಾ ರಸ್ತೆ, ಮಲ್ಲೇಶ್ವರ ರೈಲ್ವೆ ಪ್ಯಾರಲಲ್ ರಸ್ತೆ, ಚಾಮರಾಜಪೇಟೆ ಪೊಲೀಸ್ ಠಾಣೆ ರಸ್ತೆ, ಚಾಮರಾಜಪೇಟೆ ಮೂರನೇ ಮುಖ್ಯರಸ್ತೆ, ಕಾಡು ಮಲ್ಲೇಶ್ವರ ದೇವಸ್ಥಾನ, ಬನಶಂಕರಿ ಒಂದನೇ ಹಂತದ 5ನೇ ಮುಖ್ಯರಸ್ತೆ, ಶಿರಸಿ ವೃತ್ತ, ದಿಣ್ಣೂರು ಮುಖ್ಯರಸ್ತೆ ಸೇರಿದಂತೆ ಹಲವು ರಸ್ತೆಗಳಲ್ಲಿ ಸಂಜೆಯಾದರೂ ಮರಗಳು, ಕೊಂಬೆಗಳನ್ನು ತೆರವು ಮಾಡಿರಲಿಲ್ಲ. ಹೀಗಾಗಿ, ಸಂಚಾರ ದಟ್ಟಣೆ ಹೆಚ್ಚಾಗಿತ್ತು. ವಸತಿ ಪ್ರದೇಶಗಳಲ್ಲಿ ಮರಗಳು ಮನೆಯ ಕಾಂಪೌಂಡ್, ಬಾಗಿಲ ಬಳಿಯೇ ಬಿದ್ದಿದ್ದರಿಂದ ನಿವಾಸಿಗಳು ಹೊರಗೆ ಬರಲು ಸಾಧ್ಯವಾಗದೆ ತೊಂದರೆಗೊಳಗಾದರು.

**105 ಮನೆಗಳಿಗೆ ನೀರು**



ಉದಯವಾಹಿನಿ ಚಿತ್ರ

### 206 ಮರ ತೆರವು

**ಜಿಬಿಎ ಜಿಬಿಎ ವ್ಯಾಪ್ತಿಯಲ್ಲಿ ಒಟ್ಟು 287 ಮರಗಳು ಧರೆಗುರುಳಿದ್ದು, 723 ಕೊಂಬೆಗಳು ಮುರಿದು ಬಿದ್ದಿವೆ. ಜೊತೆಗೆ ಮರದ ಸಣ್ಣಪುಟ್ಟ ರೆಂಬೆಗಳು ಹಾಗೂ ಎಲೆಗಳು ಹೆಚ್ಚಿನ ಪ್ರಮಾಣದಲ್ಲಿ ಉದುರಿವೆ. ಸಂಜೆ ವೇಳೆಗೆ 206 ಮರಗಳು ಹಾಗೂ 456 ರೆಂಬೆಗಳನ್ನು ತೆರವುಗೊಳಿಸಲಾಗಿದೆ. ನಗರ ಪಾಲಿಕೆಗಳ ವತಿಯಿಂದ 30 ತಂಡಗಳು ಹಾಗೂ ನಾಲ್ಕು ಕ್ರೇನ್‌ಗಳನ್ನು ತೆರವು ಕಾರ್ಯಕ್ಕಾಗಿ ನಿಯೋಜಿಸಲಾಗಿದೆ. ಅಗ್ನಿಶಾಮಕ ಇಲಾಖೆಯಿಂದ 15 ತಂಡಗಳು, ಎಸ್.ಡಿ.ಆರ್.ಎಫ್‌ನಿಂದ ನಾಲ್ಕು ತಂಡಗಳು ಹಾಗೂ ಹೆಚ್ಚುವರಿಯಾಗಿ 10 ಖಾಸಗಿ ತಂಡಗಳನ್ನು ಬಾಡಿಗೆ ಆಧಾರದಲ್ಲಿ ನಿಯೋಜಿಸಲಾಗಿದೆ ಎಂದು ಜಿಬಿಎ ಪ್ರಕಟಣೆ ತಿಳಿಸಿದೆ. ನಗರದಾದ್ಯಂತ 62ಕ್ಕೂ ಹೆಚ್ಚು ಪ್ರದೇಶಗಳ ರಸ್ತೆಗಳಲ್ಲಿ ನೀರು ನಿಂತಿರುವ ಬಗ್ಗೆ ದೂರುಗಳು ದಾಖಲಾಗಿವೆ. ಮೂರು ಕಡೆ ಗೋಡೆ ಕುಸಿತ, 105 ಮನೆಗಳಿಗೆ ನೀರು ನುಗ್ಗಿರುವುದು ವರದಿಯಾಗಿದೆ ಎಂದು ತಿಳಿಸಲಾಗಿದೆ. 186 ಕಂಬ, 36 ಟ್ರಾನ್ಸ್‌ಫಾರ್ಮಗೆ ಹಾನಿ ಮಳೆ ಹಾಗೂ ಮರಗಳು ಬಿದ್ದ ಪರಿಣಾಮ, ನಗರದ 186 ಕಡೆ ವಿದ್ಯುತ್ ಕಂಬಗಳು, 36 ಕಡೆ ವಿದ್ಯುತ್ ಪರಿವರ್ತಕಗಳು ಹಾನಿಗೊಳಗಾಗಿ, ವಿದ್ಯುತ್ ಸರಬರಾಜು ಅಸ್ತವ್ಯಸ್ತವಾಗಿದೆ. ಬೆಸ್ಕಾಂನಿಂದ ಈಗಾಗಲೇ 112 ವಿದ್ಯುತ್ ಕಂಬಗಳು ಹಾಗೂ 18 ಟ್ರಾನ್ಸ್‌ಫಾರ್ಮಗಳ ದುರಸ್ತಿ ಕಾರ್ಯ ಕೈಗೊಳ್ಳಲಾಗಿದೆ.**

### ಪರಿಹಾರ ಮೊತ್ತ ಹಸ್ತಾಂತರ

**ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ಹಿಂಭಾಗದ ಕಾಂಪೌಂಡ್ ಕುಸಿದು ಮೃತಪಟ್ಟ ಏಳು ಜನರ ಕುಟುಂಬದವರಿಗೆ ತಲಾ 5 ಲಕ್ಷ ಪರಿಹಾರದ ಚೆಕ್ ಅನ್ನು ಕೇಂದ್ರ ನಗರ ಪಾಲಿಕೆ ವತಿಯಿಂದ ವಿತರಿಸಲಾಯಿತು. ಎಂ.ಜಿ. ರಸ್ತೆಯಲ್ಲಿರುವ ಪಿಯುಬಿ ಕಟ್ಟಡದಲ್ಲಿರುವ ಕೇಂದ್ರ ನಗರ ಪಾಲಿಕೆ ಆಯುಕ್ತರ ಕಚೇರಿಯಲ್ಲಿ ಶಿವಾಜಿನಗರ ಶಾಸಕ ರಿಜ್ವಾನ್ ಅರ್ಷದ್ ಅವರು ಮೃತರ ಕುಟುಂಬದವರಿಗೆ ಚೆಕ್ ಹಸ್ತಾಂತರಿಸಿದರು.**

ಅಂಬೇಡ್ಕರರು 56 ವಿಷಯಗಳನ್ನು 9 ಭಾಷೆಗಳಲ್ಲಿ ಅಧ್ಯಯನ ಮಾಡಿ ಸುಮಾರು 34 ಪದವಿಗಳನ್ನು ಪಡೆದುಕೊಂಡ ಮಹಾನ್ ತತ್ವಜ್ಞಾನಿ

# ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ದೇಶದ ಆಸ್ತಿ: ಸಂತೋಷ ಲಾಡ್

• ಉದಯವಾಹಿನಿ ಬೀದರ

ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎಂಬ ನೀತಿಯನ್ನು ನೀಡಿದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಕೇವಲ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಕ್ಕೆ ಮಾತ್ರ ಸೀಮಿತವಲ್ಲ. ಅವರು ಇಡೀ ದೇಶದ ಆಸ್ತಿಯಾಗಿದ್ದಾರೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದರು. ನಗರದ ಅಂಬೇಡ್ಕರ್ ವೃತ್ತದ ಸಮೀಪ ಬೀದರ ಜಿಲ್ಲಾ ಸಕಲ ಮರಾಠಾ ಸಮಾಜದ ವತಿಯಿಂದ ಆಯೋಜಿಸಿದ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಉದ್ಘಾಟಿಸಿ ಮಾತನಾಡಿದರು.

**ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ**

ಅಂಬೇಡ್ಕರರು 56 ವಿಷಯಗಳನ್ನು 9 ಭಾಷೆಗಳಲ್ಲಿ ಅಧ್ಯಯನ ಮಾಡಿ ಸುಮಾರು 34 ಪದವಿಗಳನ್ನು ಪಡೆದುಕೊಂಡ ಮಹಾನ್ ತತ್ವಜ್ಞಾನಿಯಾಗಿದ್ದರು.

ಹರಿದು ಹಂಚಿಹೋಗಿದ್ದ ಭಾರತದ ಕಾನೂನು ಸುವ್ಯವಸ್ಥೆಯನ್ನು ಸಂವಿಧಾನದ ಮೂಲಕ ಒಂದು ಚೌಕಟ್ಟನ್ನು ಹಾಕಿಕೊಟ್ಟ ಅಖಂಡ ಭಾರತದ ಮಹಾನಾಯಕ ಅಂಬೇಡ್ಕರ್ ಅವರಾಗಿದ್ದಾರೆ ಎಂದರು. ಸಯ್ಯಾಜಿರಾವ ಗಾಯಕವಾಡ ಮತ್ತು ಶಾಹು ಮಹಾರಾಜ್ ಇವರಿಬ್ಬರು ಅಂಬೇಡ್ಕರ್ ಅವರನ್ನು ಅಧ್ಯಯನ ಮಾಡಲು ವಿದೇಶಕ್ಕೆ ಕಳುಹಿಸಿದ್ದರು. ಹೀಗಾಗಿ ಈ ಮೂವರ ಮಧ್ಯೆ ಅವಿನಾಭಾವ ಸಂಬಂಧವಿತ್ತು. ಈ ಕಾರಣಕ್ಕಾಗಿಯೇ 60 ದೇಶದ ಸಂವಿಧಾನ ಅಧ್ಯಯನ ಮಾಡಿದ ಅಂಬೇಡ್ಕರರು ಬೃಹತ್ ಸಂವಿಧಾನ ರಚನೆ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಲಾಡ್ ತಿಳಿಸಿದರು.

ಲಂಡನ್‌ನಲ್ಲಿ ಕಾರ್ಲಾಮಾರ್ಕ್ಸ್ ಪುತ್ಥಳಿ ಪಕ್ಕದಲ್ಲೇ ಡಾ. ಅಂಬೇಡ್ಕರರ ಮೂರ್ತಿ ಇದೆ. ಅಂತಹ ಮಹಾನ್ ವ್ಯಕ್ತಿತ್ವ ಅಂಬೇಡ್ಕರ್ ಅವರಲ್ಲಿತ್ತು. ಉಚಿತ ಶಿಕ್ಷಣ ಇಡೀ ದೇಶದ ಜನತೆಗೆ ನೀಡಬೇಕೆಂಬ ಪರಿಕಲ್ಪನೆ ಕೊಟ್ಟವರೇ ಅಂಬೇಡ್ಕರರು. ಸ್ಥಳೀಯವಾಗಿ ನ್ಯಾಯ ಸಿಗದೇ ಇದ್ದಾಗ ಕಲಂ 32ರ ಪ್ರಕಾರ ಸುಪ್ರಿಂ ಕೋರ್ಟ್ಗೆ ಹೋಗಿ ನ್ಯಾಯ ಪಡೆದುಕೊಳ್ಳುವ ಹಕ್ಕು ಡಾ. ಬಾಬಾ ಸಾಹೇಬರು ಈ ದೇಶದ ನಾಗರಿಕರಿಗೆ ನೀಡಿದ್ದಾರೆ ಎಂದು ಸಂತೋಷ ಲಾಡ್ ಪ್ರತಿಪಾದಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ದಾದಾ ಮಹಾರಾಜ್ ನಗರಕರ್ ಮಾತನಾಡಿ ಮರಾಠಾ ಸಮಾಜ ಹಾಗೂ ದಲಿತ ಸಮುದಾಯ ಒಂದಾಗಿರಬೇಕು. ಭಿನ್ನಾಭಿಪ್ರಾಯ ಇರಬಾರದು. ಐಕ್ಯತೆಯಿಂದ ಸಾಗಿದರೆ ಸಹೋದರತ್ವ ಮೂಡುತ್ತದೆ. ಡಾ. ಅಂಬೇಡ್ಕರ್ ಜಯಂತಿ ಆಚರಣೆ ಮಾಡಿದಂತೆ ಎಲ್ಲಾ ಸಮಾಜದ ಮಹಾತ್ಮರ ಜಯಂತಿ ಮುಂದಿನ ದಿನಗಳಲ್ಲಿ ಆಚರಣೆ ಮಾಡಲಾಗುವುದು ಎಂದರು.

ಮೆಹಕರ್ನ ಶ್ರೀ ರಾಜಶೇಖರ ಶಿವಾಚಾರ್ಯರು ಮಾತನಾಡಿದರು. ಇದೇ ವೇಳೆ ಪೂಜ್ಯ ಭಂತೆ ವರಜ್ಯೋತಿ, ಪೂಜ್ಯ ಶ್ರೀ ಬೆಲ್ದಾಳ ಸಿದ್ಧರಾಮ ಶರಣರು, ಫಾದರ್ ಕ್ಲೇರಿ ಡಿಸೋಜಾ, ಶ್ರೀ ರಾಜಗುರು ಮಹಾರಾಜ್ ಸಾನಿಧ್ಯವಹಿಸಿದ್ದರು. ವೇದಿಕೆ ಮೇಲೆ ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದ ಅರಳಿ, ಮುಖಂಡ ತರುಣ ನಾಗಮಾರಪಳ್ಳಿ, ಕರ್ನಾಟಕ ಲಿಡ್ಕರ್ ಅಧ್ಯಕ್ಷ ನಾಗರಾಜ್ ಮುಂಡರಗಿ, ಸಕಲ ಮರಾಠಾ ಸಮಾಜ ಸಂಯೋಜಕ ಪ್ರದೀಪ ಬಿರಾದಾರ, ಡಾ. ಭೀಮಸೇನರಾವ ಶಿಂಧೆ, ಬುಡಾ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ದಿಗಂಬರರಾವ ಮಾನಕಾರಿ, ಜನಾರ್ಧನ ಬಿರಾದಾರ, ವೆಂಕಟರಾವ ಮೆಂದೆ, ಅನೀಲ ಕಾಳೆ, ನಾರಾಯಣ ಗಣೇಶ, ಕೊಂಡಿಬಾ ಸಾಹುಕಾರ್, ಶಿವಾಜಿ ಕಾಳೆ, ಸತೀಶ ಮೂಳೆ, ತಾತ್ಯಾರಾವ ಪಾಟೀಲ, ರಘುನಾಥರಾವ ಜಾಧವ, ಮಾರುತಿ ಬೌದ್ಧೆ, ಶಿವಕುಮಾರ ನೀಲಿಕಟ್ಟಿ, ಅರುಣ ಪಟೇಲ್, ವಿಠಲದಾಸ ಪ್ಯಾಗೆ, ರಾಜಶೇಖರ ಸೇಡಂಕರ್, ವಿಜಯಕುಮಾರ ಫರ್ನಾಂಡಿಸ್ ಹಿಪ್ಪಳಗಾಂವ, ಚಂದ್ರಕಾಂತ ಹಿಪ್ಪಳಗಾಂವ, ಡಾ. ಕಾಶಿನಾಥ ಚಲವಾ, ಅರುಣ ಪಟೇಲ್, ಕಲ್ಯಾಣರಾವ ಭೋಸ್ಲೆ, ಅಂಬರೀಶ ಕುದರೆ ಸೇರಿದಂತೆ ಹಲವರಿದ್ದರು.

ಶಿವಾಜಿರಾವ ಪಾಟೀಲ ಮುಂಗನಾಳ ಸ್ವಾಗತಿಸಿದರು. ವಿನೋದ ನಿರೂಪಿಸಿದರು. ವಿದ್ಯಾಸಾಗರ ವಂದಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಆಗಮಿಸಿದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಅನುಯಾಯಿಗಳು ಸುಮಾರು 5 ಸಾವಿರಕ್ಕೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.



ಉದಯವಾಹಿನಿ ಚಿತ್ರ

### ಪ್ರತಿದಿನ ಅಂಬೇಡ್ಕರ್ ಅವರ ಮುಂದೆ ಒಂದು ಜ್ಯೋತಿ ಹಚ್ಚಲೇಬೇಕು


ಹಿಂದೆ ಸಮಾಜದಲ್ಲಿ ಅಸ್ಪೃಶ್ಯತೆ ಆಚರಣೆ ಜಾರಿಯಲ್ಲಿತ್ತು. ಚೌಡಾರ್ ಕೆರೆಯಲ್ಲಿ ನಾಯಿ ನರಿ ಹಂದಿ ಕುರಿಗಳು ನೀರು ಕುಡಿಯಬಹುದಿತ್ತು. ಆದರೆ ಮನುಷ್ಯರಾದ ದಲಿತ ಸಮಾಜದವರು ನೀರು ಕುಡಿಯುವಂತಿರಲಿಲ್ಲ. ಇಂತಹ ಸಂದರ್ಭದಲ್ಲಿ ಡಾ. ಬಾಬಾ ಸಾಹೇಬರು ಹೋರಾಟ ಮಾಡಿ ಚೌಡಾರ್ ಕೆರೆ ನೀರು ಕುಡಿಯಲು ಅವಕಾಶ ಮಾಡಿ ಕೊಟ್ಟಿದ್ದಾರೆ ಎಂದರು. ಸತಿಸಹಗಮನ ಪದ್ಧತಿ ಆಚರಣೆಯಲ್ಲಿದ್ದ ಭಾರತದ ಮಹಿಳೆಗೆ ಪಿತ್ರಾರ್ಜಿತ, ಗಂಡನ ಆಸ್ತಿಯಲ್ಲಿ ಹಕ್ಕಿದೆ ಎಂದು ಪ್ರತಿಪಾದಿಸಿದವರೇ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು. ಹಿಂದೂ ಕೋಡ್ ಬಿಲ್ ಜಾರಿಗೆ ತಂದು ಎಲ್ಲರಿಗೂ ಅನುಕೂಲ ಮಾಡಿಕೊಟ್ಟಿದ್ದಾರೆ. ಮಹಿಳೆಯರು ಯಾವ ದೇವರಿಗೆ ದೀಪ ಹಚ್ಚುತ್ತಾರೋ ಇಲ್ಲವೋ ಗೊತ್ತಿಲ್ಲ. ಆದರೆ ಪ್ರತಿದಿನ ಅಂಬೇಡ್ಕರ್ ಅವರ ಮುಂದೆ ಒಂದು ಜ್ಯೋತಿ ಹಚ್ಚಲೇಬೇಕು ಎಂದು ಸಂತೋಷ ಲಾಡ್ ಹೇಳಿದರು.

> ತಮ್ಮ ತಮ್ಮ ಸಮಾಜದ ನಾಯಕರ ಜಯಂತಿ ಆಚರಣೆ ಮಾಡುವುದು ಸಹಜ. ಆದರೆ ಡಾ. ಅಂಬೇಡ್ಕರರ ಜಯಂತಿಯನ್ನು ಮರಾಠಾ ಹಾಗೂ ದಲಿತ ಸಮುದಾಯದವರು ಕೂಡಿ ಆಚರಣೆ ಮಾಡುತ್ತಿರುವುದು ಶ್ಲಾಘನೀಯ. ಇದೇ ರೀತಿ ಎಲ್ಲರೂ ಆಚರಣೆ ಮಾಡಿದರೆ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಮಾನತೆ ಮೂಡುತ್ತದೆ. -ರಹಿಂಖಾನ್
> ಪೌರಾಡಳಿತ ಮತ್ತು ಹಜ್ ಖಾತೆ ಸಚಿವ

ಉದಯ ವಾಹಿನಿ
ಪ್ರಾದೇಶಿಕ
ಶನಿವಾರ
02 ಮೇ 2026


## ಮಿನಿ ನ್ಯೂಸ್

### ಬಳ್ಳಾರಿಯ ಸಂಜೀವರಾಯ ದೇವಸ್ಥಾನದಲ್ಲಿ ವಿದುಷಿ ದಿವ್ಯಾ ಗಿರಿಧರ್ ಅದ್ಭುತ ಗಾಯನ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಳ್ಳಾರಿ

ನಗರದ ರಾಯಲ್ ಕಾಲೋನಿಯ ಶ್ರೀ ಸಂಜೀವರಾಯ ಸ್ವಾಮಿ ದೇವಸ್ಥಾನದಲ್ಲಿ 50ನೇ ಶ್ರೀ ನರಸಿಂಹ ಜಯಂತ್ಯೋತ್ಸವದ ಪ್ರಯುಕ್ತ ಏ. 30ರಂದು ಸಂಜೆ ಏರ್ಪಡಿಸಿದ್ದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಬೆಂಗಳೂರಿನ ವಿದುಷಿ ಶ್ರೀಮತಿ ದಿವ್ಯಾ ಗಿರಿಧರ್ ಅವರು ಸುಮಾರು ಎರಡು ಗಂಟೆಗಳ ಕಾಲ ಅಪರೋಕ್ಷ ಜ್ಞಾನಿಗಳಿಂದ ರಚಿಸಲ್ಪಟ್ಟ ಹಲವಾರು ಅಪರೂಪದ ಹರಿದಾಸರ ಪದಗಳನ್ನೂ ಇನ್ನಿತರ ಕೃತಿಗಳನ್ನೂ ಸುಶ್ರಾವ್ಯವಾಗಿ ಹಾಡಿದ್ದು ಕಿಕ್ಕಿರಿದು ನೆರೆದಿದ್ದ ದಾಸಸಾಹಿತ್ಯಾಭಿಮಾನಿಗಳ ಮನಸೂರೆಗೊಂಡಿತು.

ಇವರ ಗಾಯನಕ್ಕೆ ಹಾರ್ಮೋನಿಯಂ ವಾದನದಲ್ಲಿ ಶ್ರೀ ಮಧುಸೂದನ್, ತಬಲಾ ವಾದನದಲ್ಲಿ ಶ್ರೀ ಪವಮಾನ ಅರಳಿಕಟ್ಟಿ ಮತ್ತು ತಾಳದಲ್ಲಿ ಶ್ರೀ ವಾದಿರಾಜ್ ಸಹಕರಿಸಿದರು. ಇದೇ ಸಂದರ್ಭದಲ್ಲಿ ಬಳ್ಳಾರಿಯವರೇ ಆದ ಶ್ರೀಮತಿ ಅನುಕೃಪ ರೌಡೂರ್ ಪುರೋಹಿತ್ (ದಿವ್ಯಾ ಗಿರಿಧರ್ ಅವರ ಶಿಷ್ಯೆ) ನಿಗಮ ನಿಗಮಾಂತ ವರ್ಣಿತ ಎಂಬ ಶ್ರೀ ಅನ್ನಮಾಚಾರ್ಯರ ಕೀರ್ತನೆಯನ್ನು ಪ್ರಸ್ತುತ ಪಡಿಸಿದರು.

### ಅಲೆದಾಡಿಸಿದ ಅಧಿಕಾರಿಗಳು ಆತ್ಮಹತ್ಯೆಗೆ ರೈತ ಯತ್ನ

• ಉದಯವಾಹಿನಿ, ಬೆಳಗಾವಿ

ಭೂ ಪರಿವರ್ತನೆಗಾಗಿ ಅರ್ಜಿ ಸಲ್ಲಿಸಿ ಹಲವು ದಿನಗಳಿಂದ ಅಲೆದಾಡಿದರೂ ಕೆಲಸ ಮಾಡಿಕೊಡುತ್ತಿಲ್ಲ ಎಂದು ಮನನೊಂದ ರೈತ ರುದ್ರಯ್ಯ ಅಮ್ಮಿನಭಾವಿಮಠ (49) ಅವರು ಇಲ್ಲಿನ ಕಂದಾಯ ಇಲಾಖೆಯ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲೇ ಫಿನಾಯಿಲ್ ಕುಡಿದು ಆತ್ಮಹತ್ಯೆಗೆ ಯತ್ನಿಸಿದರು. ಹಾವೇರಿ ಜಿಲ್ಲೆಯ ರಾಣೆಬೆನ್ನೂರಿನ ಇವರು ತಮ್ಮ ಎರಡು ಎಕರೆ ಜಮೀನು ಭೂ ಪರಿವರ್ತನೆಗಾಗಿ (ಎನ್) ಅರ್ಜಿ ಸಲ್ಲಿಸಿದ್ದರು. ಹಾವೇರಿ ಡಿ.ಸಿ. ಕಚೇರಿ ಹಾಗೂ ಬೆಳಗಾವಿಯ ಕಚೇರಿಗೆ ಸಾಕಷ್ಟು ಬಾರಿ ಅಲೆದಾಡಿದರೂ ಅಧಿಕಾರಿಗಳು ಸ್ಪಂದಿಸಲಿಲ್ಲ. ಹೀಗಾಗಿ, ಸಾಯುವ ನಿರ್ಧಾರ ತೆಗೆದುಕೊಂಡೆ ಎಂದು ಅಳಲು ತೋಡಿಕೊಂಡರು. ರುದ್ರಯ್ಯ ಅವರನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಿಗೆ ಯಾವುದೇ ಅಪಾಯ ಆಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

### ಅಕ್ರಮವಾಗಿ ಮರಳು ಸಾಗಾಣಿಕೆ: ನಿಷೇಧಾಜ್ಞೆ ಜಾರಿ: ತಹಶೀಲ್ದಾರ್

• ಉದಯವಾಹಿನಿ, ಕನಕಗಿರಿ

ತಾಲ್ಲೂಕಿನ ಕೆರೆ, ಹಳ್ಳ ಪಾತ್ರದ ಗ್ರಾಮಗಳಲ್ಲಿ ಅಕ್ರಮವಾಗಿ ಮರಳು ಗಣಿಗಾರಿಕೆ ಹಾಗೂ ಸಾಗಾಣಿಕೆ ತಡೆಯಲು ಇಲ್ಲಿನ ತಹಶೀಲ್ದಾರ್ ವಿಶ್ವನಾಥ ಮುರುಡಿ ಅವರು ನಿಷೇಧಾಜ್ಞೆ ಜಾರಿಗೊಳಿಸಿ ಆದೇಶ ಹೊರಡಿಸಿದ್ದಾರೆ. ಕನಕಗಿರಿ, ಚಿಕ್ಕಮಾದಿನಾಳ, ರಾಮದುರ್ಗ, ನಾಗಲಾಪುರ, ನವಲಿ, ಬುನ್ನಟ್ಟಿ, ಈಚನಾಳ, ಮಲ್ಲಾಪುರ, ಹಿರೇಮಾದಿನಾಳ, ಉದ್ದಿಹಾಳ, ಯತ್ನಟ್ಟಿ, ಜೀರಾಳ, ಚಿಕ್ಕಡಂಕಲ್ ಸೇರಿದಂತೆ ಹೋಬಳಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ಅಕ್ರಮ ಮರಳು ತೆಗೆಯುವುದು, ಸಾಗಿಸುವುದನ್ನು ಬಿಎನ್‌ಎಸ್ ಕಲಂ 163ರ ಅಡಿ ನಿಷೇಧಿಸಲಾಗಿದೆ. ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು 1994 ಹಾಗೂ ನಿಯಮಗಳು 2016 ಹಾಗೂ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163ರ ಪ್ರಕಾರ ಈ ಕ್ರಮ ಜರುಗಿಸಲಾಗಿದೆ. ಅಕ್ರಮ ಮರಳು ದಂಧೆ ಹೆಚ್ಚಿದ್ದರಿಂದ ಸರ್ಕಾರಕ್ಕೆ ನಷ್ಟ ಹಾಗೂ ಪರಿಸರ ಹಾನಿಯಾಗುತ್ತಿತ್ತು. ಆದೇಶ ಉಲ್ಲಂಘಿಸಿದರೆ ಸೂಕ್ತ ಕಾನೂನು ಕ್ರಮಕೈಗೊಳ್ಳಲು ಪೊಲೀಸರಿಗೆ ಸೂಚಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಬಂಜಾರ: ವರದಕ್ಷಿಣೆಗೆ ಕಡಿವಾಣ

• ಉದಯವಾಹಿನಿ, ಗಜೇಂದ್ರಗಡ

ತಾಲ್ಲೂಕಿನ 17 ತಾಂಡಾಗಳ ನಾಯಕರು ಇಲ್ಲಿನ ಕಾಲಕಾಲೇಶ್ವರ ದೇವಸ್ಥಾನದ ಆವರಣದಲ್ಲಿ ನಡೆದ ಸಭೆಯಲ್ಲಿ ವರದಕ್ಷಿಣೆ ಕೊಡುವುದು, ತೆಗೆದುಕೊಳ್ಳುವುದಕ್ಕೆ ಕಡಿವಾಣ ಹಾಕುವ ನಿರ್ಧಾರ ಕೈಗೊಂಡು ಠರಾವು ಮಾಡಿದರು. ವರದಕ್ಷಿಣೆಯಿಂದಾಗಿ ಹೆಣ್ಣು ಹೆತ್ತವರು ಶೋಷಣೆಗೆ ಒಳಗಾಗುತ್ತಿದ್ದು, ಅಲ್ಲದೇ ಚಿನ್ನದ ಬೆಲೆಯೂ ಏರಿಕೆಯಾಗಿದೆ.

ಸಮುದಾಯದ ಬಡವರು ಮಕ್ಕಳ ಮದುವೆ ಮಾಡುವಲ್ಲಿ ಆರ್ಥಿಕ ಸಂಕಷ್ಟಕ್ಕೆ ಒಳಗಾಗುತ್ತಿದ್ದಾರೆ. ವರದಕ್ಷಿಣೆ ಎಂಬ ಸಾಮಾಜಿಕ ಪಿಡುಗನ್ನು ನಿವಾರಿಸುವ ಉದ್ದೇಶದಿಂದ ಬಂಜಾರ ಸಮಾಜದ ಹಿರಿಯರು ಈ ನಿರ್ಣಯ ಕೈಗೊಂಡರು. ವರದಕ್ಷಿಣೆ ತೆಗೆದುಕೊಳ್ಳುವಂತಿಲ್ಲ, ಮದುವೆಗೆ ದುಂದು ವೆಚ್ಚ ಮಾಡುವಂತಿಲ್ಲ. ತಾಳಿಗುಂಡು 5 ಗ್ರಾಂ. ಒಳಗಿರಬೇಕು, ಮದ್ಯ ಹಾಗೂ ಡಿಜೆ ನಿಷೇಧ, ಜೀವನೋಪಾಯಕ್ಕೆ ಬೇಕಾದ ಅಗತ್ಯ ಬಾಂಡೆ ಸಾಮಗ್ರಿ ಮಾತ್ರ ಕೊಡಿಸುವುದು, ಹೆಣ್ಣಿನ ಮನೆಯ ಮುಂದೆ ಮದುವೆ ಮಾಡಿದರೆ ತಲಾ ಅರ್ಧ ಖರ್ಚು ಹಂಚಿಕೆ ಹೀಗೆ ಅನೇಕ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ. ಉಲ್ಲಂಘಿಸಿದ್ದಲ್ಲಿ ತಾಂಡಾದ ಹಿರಿಯರು ಕೈಗೊಳ್ಳುವ ಕ್ರಮಕ್ಕೆ ಬದ್ಧರಾಗಬೇಕು ಎಂಬ ಠರಾವು ಬರೆದು ಓದಲಾಯಿತು. ಇದಕ್ಕೆ ತಾಂಡಾದ ಹಿರಿಯರು ಸಮ್ಮತಿಸಿದ್ದಾರೆ.

### ಮಲೇರಿಯಾ ಮುಕ್ತ ಜಿಲ್ಲೆಗೆ ಸಂಕಲ್ಪ

• ಉದಯವಾಹಿನಿ, ಬಳ್ಳಾರಿ

ಜಿಲ್ಲೆಯನ್ನು 2030ರ ವೇಳೆಗೆ ಮಲೇರಿಯಾ ಮುಕ್ತವಾಗಿಸಲು ಆರೋಗ್ಯ ಇಲಾಖೆ ನಿರ್ಧರಿಸಿದ್ದು, ಈ ಕಾರ್ಯದಲ್ಲಿ ಸಾರ್ವಜನಿಕರು ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಮನ ಮಾಡಿದ್ದಾರೆ. ಮಲೇರಿಯಾವನ್ನು ಅಂತ್ಯಗೊಳಿಸಲು ಸಂಕಲ್ಪ ಮಾಡೋಣ: ನಮಗಿದು ಸಾಧ್ಯ ಎಂಬ ಘೋಷವಾಕ್ಯದೊಂದಿಗೆ ಜಿಲ್ಲೆಯಾದ್ಯಂತ ವಿಶ್ವ ಮಲೇರಿಯಾ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಗಿದೆ. ಮಲೇರಿಯಾ ನಿಯಂತ್ರಣದಲ್ಲಿ ಬಳ್ಳಾರಿ ಜಿಲ್ಲೆ ಮಾದರಿ ಸಾಧನೆ ಮಾಡಿದೆ. 2015 ರಿಂದ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಇಳಿಮುಖವಾಗಿದ್ದು, ಕಳೆದ ಮೂರು ವರ್ಷಗಳಿಂದ ಶೂನ್ಯ ಸ್ಥಳೀಯ ಪ್ರಕರಣಗಳನ್ನು ದಾಖಲಿಸುವ ಮೂಲಕ ಜಿಲ್ಲೆ ಗಮನಾರ್ಹ ಮೈಲಿಗಲ್ಲು ತಲುಪಿದೆ. 2027ರ ವೇಳೆಗೆ ಸ್ಥಳೀಯ ಪ್ರಕರಣಗಳನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಿ 2030ರೊಳಗೆ ಜಿಲ್ಲೆಯನ್ನು ಸಂಪೂರ್ಣ ಮಲೇರಿಯಾ ಮುಕ್ತವಾಗಿಸುವ ಗುರಿ ಹೊಂದಲಾಗಿದೆ ಎಂದು ಅವರು ವರಿಸಿದರು. ಮಲೇರಿಯಾವು ಪ್ಲಾಸ್ಮೋಡಿಯಂ ಪರಾವಲಂಬಿಗಳಿಂದ ಬರುವ ಕಾಯಿಲೆಯಾಗಿದ್ದು, ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಡಿತದಿಂದ ಹರಡುತ್ತದೆ. ಇದನ್ನು ತಡೆಗಟ್ಟಲು ಜ್ವರ ಬಂದ ತಕ್ಷಣ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ರಕ್ತ ಪರೀಕ್ಷೆ ಮಾಡಿಸಿಕೊಂಡು ಸಂಪೂರ್ಣ ಚಿಕಿತ್ಸೆ ಪಡೆಯಬೇಕು ಎಂದರು.

## ನೀರಿಲ್ಲದೆ ಪರದಾಡುತ್ತಿರುವ ಗ್ರಾಮಸ್ಥರ ಮನವಿಗೆ ಸ್ಪಂದಿಸಿ, ನೀರಿನ ವ್ಯವಸ್ಥೆ ಕಲ್ಪಿಸಲು ಭರವಸೆ ನೀಡಿದ ಶ್ರೀಮತಿ ಲಕ್ಷ್ಮೀ ದೇವಿ ತಾ. ಪಂ, ಇ ಓ

• ಉದಯವಾಹಿನಿ ಕಾರಟಗಿ

ನೀರಿಗಾಗಿ ಸಾರ್ವಜನಿಕರು ಪರದಾಡುತ್ತಿರುವ ಮತ್ತು ಅಧಿಕಾರಿಗಳು ಎಚ್ಚೆತ್ತುಕೊಳ್ಳದ ಸ್ಥಿತಿಯು ಕರ್ನಾಟಕದ ಹಲವು ಭಾಗಗಳಲ್ಲಿ ಪ್ರಸ್ತುತ ಗಂಭೀರ ಸಮಸ್ಯೆಯಾಗಿದೆ. ವಿಶೇಷವಾಗಿ ಬೇಸಿಗೆಯ ಆರಂಭದಲ್ಲಿಯೇ ಕುಡಿಯುವ ನೀರಿಗೆ ಹಾಹಾಕಾರ ಶುರುವಾಗಿದ್ದು. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಜನ ಕುಡಿಯುವ ನೀರಿಗಾಗಿ ತೀವ್ರ ಪರದಾಡುತ್ತಿದ್ದಾರೆ. ಬಿರು ಬೇಸಿಗೆಯ ಬಿಸಿಲು, ಅಧಿಕಾರಿಗಳ ನಿರ್ಲಕ್ಷ್ಯ, ಮತ್ತು ಮಳೆ ಕೊರತೆಯಿಂದಾಗಿ ಹನಿ ನೀರಿಗೂ ಹಾಹಾಕಾರ ಉಂಟಾಗಿದ್ದು, ಜಾನುವಾರುಗಳು ಕೂಡ ಕಂಗಾಲಾಗಿವೆ ಈ ಹಿನ್ನೆಲೆ ಕಾರಟಗಿ ಪಟ್ಟಣದಲ್ಲಿ ಮೈಲಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ಸೋಮನಾಳ ಗ್ರಾಮದಲ್ಲಿ ಸುಮಾರು ದಿವಸದಿಂದ ನೀರಿಲ್ಲದೆ ಪರದಾಡುತ್ತಿರುವ ಸಾರ್ವಜನಿಕರು, ಮೈಲಾಪುರ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಫೋನ್ ಮುಖಾಂತರ ಮತ್ತು ಖುದ್ದಾಗಿ ಗ್ರಾಮ ಪಂಚಾಯತಿಗೆ ತೆರಳಿ ಕುಡಿಯಲಿಕ್ಕೆ ದಿನನಿತ್ಯ ಬಳಸುವುದಕ್ಕೆ ನೀರಿಲ್ಲವೆಂದು ಬೇಡಿಕೊಂಡು ಮನವಿ ಸಲ್ಲಿಸಿದ್ದರು.



ಉದಯವಾಹಿನಿ ಚಿತ್ರ

**ಬೇಸಿಗೆಯ ಆರಂಭದಲ್ಲಿಯೇ ಕುಡಿಯುವ ನೀರಿಗೆ ಹಾಹಾಕಾರ**

ಈ ಹಿನ್ನೆಲೆ ಸಾರ್ವಜನಿಕರ ಮನವಿಗೆ ಸ್ಪಂದಿಸಿದ ತಾಲ್ಲೂಕು ಪಂಚಾಯಿತಿ ಇ ಓ ಶ್ರೀಮತಿ ಲಕ್ಷ್ಮಿದೇವಿ ಸೋಮನಾಳ ಗ್ರಾಮಕ್ಕೆ ಆಗಮಿಸಿ ನೀರಿನ ಸಮಸ್ಯೆ ಬಗ್ಗೆ ಸಾರ್ವಜನಿಕರಲ್ಲಿ ಚರ್ಚಿಸಿದರು. ಸಾರ್ವಜನಿಕರ ಅನುಕೂಲಕ್ಕಾಗಿ ಮುಂಜಾಗ್ರತ ಕ್ರಮವಾಗಿ ನೀರಿನ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು, ಈ ಮೂಲಕ ತಾಲ್ಲೂಕ ಪಂಚಾಯಿತಿ ಅಧಿಕಾರಿಗಳು ಎಚ್ಚೆತ್ತುಕೊಂಡು ಸಾರ್ವಜನಿಕರಿಗೆ ನೀರಿನ ವ್ಯವಸ್ಥೆ ಕಲ್ಪಿಸಲು ಭರವಸೆ ನೀಡಿದ ತಾಲ್ಲೂಕು ಪಂಚಾಯಿತಿ ಇಓ ಶ್ರೀಮತಿ ಲಕ್ಷ್ಮಿ ದೇವಿ ಇವರಿಗೆ ಮಾದಿಗ ದಂಡೋರ ಮಾದಿಗ ಹೋರಾಟ ಸಮಿತಿಯ ತಾಲ್ಲೂಕ ಕಾರ್ಯ ಅಧ್ಯಕ್ಷ ಶರಣಪ್ಪ ವಣಗೇರಿ ಹಾಗೂ ಸಾರ್ವಜನಿಕರು ಧನ್ಯವಾದಗಳು ತಿಳಿಸಿದ್ದಾರೆ

## ನದಿ ಜೋಡಣೆಗೆ ತಾಂತ್ರಿಕ ಸ್ಥಳ ಪರಿಶೀಲನೆ

• ಉದಯವಾಹಿನಿ, ಶಿರಸಿ

ಬೇಡ್ತಿ-ವರದಾ ನದಿ ಜೋಡಣೆ ಯೋಜನೆ ಸಂಬಂಧ ಸ್ಥಳೀಯರು ಹಾಗೂ ಪರಿಸರ ಕಾರ್ಯಕರ್ತರಿಗೆ ಯಾವುದೇ ಪೂರ್ವ ಮಾಹಿತಿ ನೀಡದೆ, ರಾಷ್ಟ್ರೀಯ ಜಲ ಅಭಿವೃದ್ಧಿ ಸಂಸ್ಥೆ ಮತ್ತು ರಾಜ್ಯದ ಇಂಜಿನಿಯರಿಂಗ್ ಅಧಿಕಾರಿಗಳ ತಂಡವು ದಟ್ಟ ಅರಣ್ಯ ಪ್ರದೇಶಗಳಲ್ಲಿ ತಾಂತ್ರಿಕ ಸ್ಥಳ ಪರಿಶೀಲನೆ ನಡೆಸಿರುವುದು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ. ಈ ಭೇಟಿಯಲ್ಲಿ ಅಧಿಕಾರಿಗಳು ಮುಖ್ಯವಾಗಿ ಭೂಪ್ರದೇಶದ ಸಮೀಕ್ಷೆ ನಡೆಸಿದ್ದಾರೆ. ಜತೆಗೆ, ಅರಣ್ಯದಲ್ಲಿ ಸಾಗುವ ಪೈಪ್‌ಲೈನ್ ಹಾಗೂ ಸುರಂಗ ಸಾಗುವ ಮಾರ್ಗಗಳನ್ನು ವೀಕ್ಷಿಸಿದ್ದಾರೆ. ಬೇಡ್ತಿಯ ಉಪನದಿಯಾದ ಪಟ್ಟಣಹಳ್ಳದ ಬಳಿ ನೀರನ್ನು ಎತ್ತುವ ತಂತ್ರಜ್ಞಾನ ಮತ್ತು 6 ರಿಂದ 15 ಕಿಲೋಮೀಟರ್ ಉದ್ದದ ಬೃಹತ್ ಸುರಂಗ ಮಾರ್ಗ ನಿರ್ಮಿಸುವ ಕುರಿತು ತಂಡದ ಸದಸ್ಯರು ಮೌಲ್ಯಮಾಪನ ಮಾಡಿದ್ದಾರೆ. ಮೆಣಸಗೋಡ ಮತ್ತು ಪಟ್ಟಣಹಳ್ಳದ ದಟ್ಟ ಕಾಡಿನ ಮಧ್ಯೆ ಅಣೆಕಟ್ಟು ಕಟ್ಟುವ ಸಾಧ್ಯತೆಗಳನ್ನು ಪರಿಶೀಲಿಸಿದ್ದಾರೆ. ಪಟ್ಟಣಹಳ್ಳದಿಂದ ಸುರಂಗದ ಮೂಲಕ ಬರುವ ನೀರು ವರದಾ ನದಿಯನ್ನು ಸೇರುವ ಅಂತಿಮ ಗುರಿಯನ್ನು ನಕ್ಷೆಯೊಂದಿಗೆ ತಾಳೆ ಮಾಡಿದ್ದಾರೆ. ಇಷ್ಟೆಲ್ಲ ಮಾಡಿದರೂ ಯಾರೊಬ್ಬರಿಗೂ ಪೂರ್ವ ಮಾಹಿತಿ ನೀಡಿಲ್ಲ ಎಂದು ಬೇಡ್ತಿ-ಅಘನಾಶಿನಿ ಕೊಳ್ಳ ಸಂರಕ್ಷಣಾ ಸಮಿತಿಯ ಪದಾಧಿಕಾರಿಯೊಬ್ಬರು ಆರೋಪಿಸಿದರು. ಅರಣ್ಯ ನಾಶದ ಭೀತಿಯನ್ನು ಮರೆಮಾಚಲು ಲಿಫ್ಟ್ ಇರಿಗೇಶನ್ ಎಂಬ ಹೊಸ ನಾಟಕವನ್ನು ಮುನ್ನೆಲೆಗೆ ತಂದಿದ್ದಾರೆ. ಸುರಂಗ ಮಾರ್ಗಗಳು ಮತ್ತು ಪೈಪ್‌ಲೈನ್‌ಗಳಿಂದ ಕಾಡಿನ ಅಡಿಯಲ್ಲಿ ಆಗುವ ಭೂವೈಜ್ಞಾನಿಕ ಬದಲಾವಣೆಗಳು ಹಾಗೂ ಜಲಮೂಲಗಳ ಮೇಲಾಗುವ ಭೀಕರ ಪರಿಣಾಮಗಳ ಬಗ್ಗೆ ಅಧಿಕಾರಿಗಳು ಮೌನ ವಹಿಸಿದ್ದಾರೆ.



ಉದಯವಾಹಿನಿ ಚಿತ್ರ

## ಏರಿದ ಧಗೆ: ಹಣ್ಣು, ತರಕಾರಿ ತುಟ್ಟಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಉಡುಪಿ

ಬಿಸಿಲಿನ ಧಗೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದರ ನಡುವೆ ಹಣ್ಣು, ತರಕಾರಿ ಬೆಲೆ ಗಗನಕ್ಕೇರಿ ಗ್ರಾಹಕರ ಜೇಬು ಸುಡುತ್ತಿದೆ. ಅತಿಯಾದ ಬಿಸಿಲಿನ ವಾತಾವರಣದಿಂದ ಕೆಲವೆಡೆ ನೀರಿನ ಕೊರತೆ ಎದುರಾಗಿ ತರಕಾರಿ ಬೆಳೆಗೆ ಸಮಸ್ಯೆಯಾಗಿದೆ. ಇದರಿಂದ ತರಕಾರಿಗಳ ಅವಕ ಕಡಿಮೆಯಾಗಿ ಬೆಲೆ ಏರುಮುಖವಾಗಿದೆ ಎನ್ನುತ್ತಾರೆ ವ್ಯಾಪಾರಿಗಳು.

ಈ ಬಾರಿ ಜಿಲ್ಲೆಯ ವಿವಿಧೆಡೆ ತರಕಾರಿ ಕೃಷಿಗೆ ಹಳದಿ ರೋಗ ಬಾಧಿಸಿತ್ತು. ಈ ಕಾರಣಕ್ಕೆ ಸ್ಥಳೀಯ ತರಕಾರಿಗಳು ಮಾರುಕಟ್ಟೆಗೆ ಬರುವುದು ಕಡಿಮೆಯಾಗಿದೆ. ಇದು ಕೂಡ ಬೆಲೆ ಏರಿಕೆಯಾಗಲು ಕಾರಣವಾಗಿದೆ. ಈಗ ಮದುವೆ ಸೇರಿದಂತೆ ವಿವಿಧ ಸಮಾರಂಭಗಳು ನಡೆಯುತ್ತಿರುವುದರಿಂದ ತರಕಾರಿಗಳಿಗೆ ಹೆಚ್ಚಿನ ಬೇಡಿಕೆ ಇದೆ. ಬೇಡಿಕೆಗೆ ಅನುಗುಣವಾಗಿ ತರಕಾರಿ ಪೂರೈಕೆಯಾಗುತ್ತಿಲ್ಲ ಎಂದು ಹೇಳುತ್ತಾರೆ. ಕೆ.ಜಿ.ಬೆಂಡೆಕಾಯಿ ದರವು ರೂ.80ಕ್ಕೆ ಏರಿಕೆಯಾದರೆ, ಮುಳ್ಳುಸೌತೆ ದರ ಕೆ.ಜಿ.ಗೆ ರೂ.55ಕ್ಕೇರಿದೆ. ಕೆ.ಜಿ.ಗೆ 30ರ ಆಸುಪಾಸಿನಲ್ಲಿದ್ದ ಬೂದುಗುಂಬಳ ದರ ಕೆ.ಜಿ.ಗೆ ರೂ.40ರ ಗಡಿ ದಾಟಿದೆ. ಕೆ.ಜಿ.ಆ್ಯಯಪಲ್ ದರ ರೂ.240ರ ಗಡಿ ದಾಟಿದರೆ, ಕೆ.ಜಿ.ದಾಳಿಂಬೆ ಬೆಲೆ ರೂ.250 ಕ್ಕೇರಿದೆ. ಬೇಸಿಗೆಯಲ್ಲಿ ದಾಳಿಂಬೆ ಹಣ್ಣಿಗೆ ಹೆಚ್ಚಿನ ಬೇಡಿಕೆ ಇರುತ್ತದೆ. ಈ ಕಾರಣಕ್ಕೆ ದರ ಇಳಿಕೆಯಾಗಿಲ್ಲ ಎಂದು ಹಣ್ಣಿನ ವ್ಯಾಪಾರಿಗಳು ತಿಳಿಸಿದ್ದಾರೆ.

ಏಲಕ್ಕಿ ಬಾಳೆ ಹಣ್ಣಿನ ದರವು ಕೆ.ಜಿ.ಗೆ ರೂ.90ರ ಆಸುಪಾಸಿನಲ್ಲೇ ಇದೆ. ಕೆ.ಜಿ.ಗೆ ರೂ.30ರ ಆಸುಪಾಸಿನಲ್ಲಿದ್ದ ಕಲ್ಲಂಗಡಿ ಹಣ್ಣಿನ ದರವು ಕೆ.ಜಿ.ಗೆ ರೂ. 40ರ ಗಡಿದಾಟಿದೆ. ಪಪ್ಪಾಯ ಹಣ್ಣಿನ ದರವು ಕೆ.ಜಿ.ಗೆ ರೂ. 50ಕ್ಕೆ ಏರಿಕೆಯಾಗಿದೆ.

ಬಿಸಿಲಿನ ಧಗೆ ಹೆಚ್ಚಾದಂತೆ ತಾಜಾ ಹಣ್ಣುಗಳಿಗೆ ಮತ್ತು ಹಣ್ಣಿನ ಜ್ಯೂಸ್‌ಗಳಿಗೆ ಹೆಚ್ಚಿನ ಬೇಡಿಕೆ ಇರುತ್ತದೆ. ಮಳೆಗಾಲ ಆರಂಭವಾಗುವ ವರೆಗೂ ಹಣ್ಣುಗಳ ಬೆಲೆ ಏರುಮುಖವಾಗಿಯೇ ಮುಂದುವರಿಯಲಿದೆ. ಅನಂತರ ಕಡಿಮೆಯಾಗಲಿದೆ ಎಂದು ಉಡುಪಿಯ ಹಣ್ಣಿನ ವ್ಯಾಪಾರಿ ಸಾದಿಕ್ ತಿಳಿಸಿದರು. ಸದ್ಯಕ್ಕೆ ಸ್ಥಳೀಯ ತರಕಾರಿಗಳು ಮಾರಾಟಕ್ಕೆ ಬರುವುದು ತೀರಾ ಕಡಿಮೆಯಾಗಿದೆ. ಸಗಟು ಮಾರುಕಟ್ಟೆಯಲ್ಲೂ ತರಕಾರಿಗಳ ಆವಕ ಕಡಿಮೆಯಾಗಿದೆ ಎಂದು ತರಕಾರಿ ವ್ಯಾಪಾರಸ್ಥೆ ರೇಣುಕಾ ತಿಳಿಸಿದರು.

## ಕೇಂದ್ರ ಸರ್ಕಾರದಿಂದ ಅಡಿಕೆ ಎಲೆಚುಕ್ಕಿ ರೋಗ ನಿಯಂತ್ರಣಕ್ಕೆ ಕ್ರಮ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಸುಳ್ಯ

ಕೇಂದ್ರ ಸರ್ಕಾರದ ಮಿಷನ್ ಫಾರ್ ಇಂಟೆಗ್ರೇಟೆಡ್ ಡೆವಲಪ್ಮೆಂಟ್ ಆಫ್ ಹಾರ್ಟಿಕಲ್ಚರ್ ಯೋಜನೆಯಡಿ ಸೆಂಟ್ರಲ್ ಪ್ಲಾಂಟೇಶನ್ ಕ್ರಾಪ್ಸ್ ರಿಸರ್ಚ್ ಇನ್ಸ್ಟಿಟ್ಯೂಟ್ ನೇತೃತ್ವದಲ್ಲಿ ದಕ್ಷಿಣ ಕನ್ನಡದಲ್ಲಿ ವ್ಯಾಪಕವಾಗಿರುವ ಎಲೆಚುಕ್ಕಿ ರೋಗ ನಿಯಂತ್ರಣಕ್ಕೆ ಸುಳ್ಯದ ಗುತ್ತಿಗಾರಿನಲ್ಲಿ ಅಳವಡಿಸಿರುವ ವಿಶೇಷ ಪ್ರಾತಕ್ಷಿಕೆ ಕುರಿತಂತೆ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಅಡಿಕೆ ಬೆಳೆಗಾರರ ತೋಟಕ್ಕೆ ಭೇಟಿ ನೀಡಿ ಮಾಹಿತಿ ಪಡೆದು ಪ್ರಗತಿಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ ಬೆಳೆಗೆ ಬಾಧಿಸಿರುವ ಎಲೆ ಚುಕ್ಕೆ ರೋಗವನ್ನು ಗಂಭೀರವಾಗಿ ಪರಿಗಣಿಸಿರುವ ಅವರು, ಶಾಶ್ವತ ಹಾಗೂ ವೈಜ್ಞಾನಿಕವಾದ ಪರಿಹಾರ ಮಾರ್ಗಗಳನ್ನು ಅಳವಡಿಸುವುದಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದ್ದಾರೆ. ಇದರ ಭಾಗವಾಗಿ ಚನಿಲದಲ್ಲಿರುವ ಸುಬ್ರಹ್ಮಣ್ಯ ಪ್ರಸಾದ್ ಹಾಗೂ ಸುತ್ತಲಿನ ಅಡಿಕೆ ಬೆಳೆಗಾರರ ತೋಟಕ್ಕೆ ಸಿಪಿಸಿಆರ್‌ಐ ಕಾಸರಗೋಡು ನಿರ್ದೇಶಕರಾದ ಡಾ. ಬಾಲಚಂದ್ರ ಹೆಬ್ಬಾರ್, ಕ್ಯಾಂಪ್ಕೋ ಅಧ್ಯಕ್ಷರಾದ ಸತೀಶ್ಚಂದ್ರ, ಹಾಗೂ ಕೃಷಿ ವಿಜ್ಞಾನಿಗಳ ಜತೆ ಭೇಟಿ ನೀಡಿದ ಸಂಸದರು, ಅಲ್ಲಿ ಎಲೆಚುಕ್ಕೆ ರೋಗ ನಿಯಂತ್ರಣಕ್ಕೆ ಅಳವಡಿಸಿರುವ ಪೋಷಕಾಂಶ ಮತ್ತು ವೈಜ್ಞಾನಿಕ ವಿಧಾನ ಆಧಾರಿತ ಪ್ರಾತ್ಯಕ್ಷಿಕೆಗಳ ಬಗ್ಗೆ ಸಮಗ್ರ ಮಾಹಿತಿ ಪಡೆದುಕೊಂಡರು. ಈ ಹಿನ್ನಲೆಯಲ್ಲಿ ಎಲೆಚುಕ್ಕಿ ರೋಗ ನಿಯಂತ್ರಣಕ್ಕೆ ಪೂರಕವಾಗಿ ಗುತ್ತಿಗಾರಿನ ಅಡಿಕೆ ಬೆಳೆಗಾರರ ತೋಟದಲ್ಲಿ ವೈಜ್ಞಾನಿಕ ಅಧ್ಯಯನದ ಪ್ರಗತಿ ಯಾವ ರೀತಿ ಸಾಗುತ್ತಿದೆ; ಅಲ್ಲಿ ರೈತರಿಗೆ ಯಾವೆಲ್ಲ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳುವುದಕ್ಕೆ ಮಾಹಿತಿ-ಮಾರ್ಗದರ್ಶನ ನೀಡಲಾಗುತ್ತಿದೆ ಎಂಬುದರ ಬಗ್ಗೆ ಪರಿಶೀಲಿಸುವುದಕ್ಕೆ ಸಂಸದ ಕ್ಯಾ. ಚೌಟ ಅವರು ಇಂದು ಸುಬ್ರಹ್ಮಣ್ಯ ಪ್ರಸಾದ್ ಅವರ ಅಡಿಕೆ ತೋಟಕ್ಕೆ ಭೇಟಿ ನೀಡಿ ಅಲ್ಲಿನ ಎಲೆಚುಕ್ಕಿ ರೋಗ ನಿಯಂತ್ರಣ ಪ್ರಾತ್ಯಕ್ಷಿಕೆ ಬಗ್ಗೆ ಪರಿಶೀಲಿಸಿದ್ದಾರೆ.

### ಅಗತ್ಯ ಮಾಹಿತಿ ಸಂಗ್ರಹಿಸಿ ಪ್ರಾತ್ಯಕ್ಷಿಗಳ ಮೂಲಕ ಪೂರಕ ಅಧ್ಯಯನ

ಜಿಲ್ಲೆಯಲ್ಲಿ ಅಡಿಕೆ ಬೆಳೆಗಾರರನ್ನು ಈ ಎಲೆಚುಕ್ಕಿ ರೋಗದಿಂದ ರಕ್ಷಿಸುವುದಕ್ಕೆ ಕ್ಯಾ.ಚೌಟ ಅವರು ವೈಜ್ಞಾನಿಕ ಪರಿಹಾರೋಪಾಯಗಳ ಕಡೆಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ. ಅದರಂತೆ ಸುಳ್ಯದ ಗುತ್ತಿಗಾರು ಗ್ರಾಮದಲ್ಲಿ ಸುಬ್ರಹ್ಮಣ್ಯ ಪ್ರಸಾದ್ ಅವರ ಒಂದೂವರೆ ಎಕರೆ ಸೇರಿದಂತೆ ಸುತ್ತಲಿನ ಅಡಿಕೆ ಕೃಷಿಕರ ಒಟ್ಟು 6 ಎಕರೆಯಲ್ಲಿ ಪ್ರಾಯೋಗಿಕವಾಗಿ ಎಲೆಚುಕ್ಕಿ ರೋಗ ತಡೆಯಲು ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆಯ ವಿಟ್ಲ ಪ್ರಾಂತೀಯ ಕ್ಷೇತ್ರದ ಮಾರ್ಗದರ್ಶನದಲ್ಲಿ ಪೋಷಕಾಂಶ ಮತ್ತು ವೈಜ್ಞಾನಿಕ ವಿಧಾನಗಳ ಬಗ್ಗೆ ಅಧ್ಯಯನ ನಡೆಸಲಾಗುತ್ತಿದೆ. ಕಳೆದ ಜೂನ್ನಿಂದ ಇವರೆಲ್ಲರ ತೋಟದಲ್ಲಿ ವೈಜ್ಞಾನಿಕ ಕ್ರಮಗಳನ್ನು ಕೈಗೊಂಡು ಅಡಿಕೆ ಬೆಳೆಗೆ ಬಾಧಿಸುವ ಎಲೆಚುಕ್ಕಿ ರೋಗದ ಬಗ್ಗೆ ಕಾಲ-ಕಾಲಕ್ಕೆ ಹೆಚ್ಚಿನ ನಿಗಾ, ಅಗತ್ಯ ಮಾಹಿತಿ ಸಂಗ್ರಹಿಸಿ ಪ್ರಾತ್ಯಕ್ಷಿಗಳ ಮೂಲಕ ಪೂರಕ ಅಧ್ಯಯನ ನಡೆಸಲಾಗುತ್ತಿದೆ. ಜತೆಗೆ, ಕೃಷಿಕರಿಗೂ ಈ ಎಲೆಚುಕ್ಕಿ ರೋಗ ತಡೆಯಲು ಅಡಿಕೆ ತೋಟದಲ್ಲಿ ಏನೆಲ್ಲ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕೆಂಬ ಬಗ್ಗೆ ಕಾಲ-ಕಾಲಕ್ಕೆ ಕೃಷಿ ವಿಜ್ಞಾನಿಗಳು ಭೇಟಿ ನೀಡಿ ಮಾರ್ಗದರ್ಶನ ನೀಡುತ್ತಿದ್ದಾರೆ.

## 6.5 ಕೋಟಿ ರೂ. ವೆಚ್ಚದ ಬಾಲಕಿಯರ ವಸತಿ ನಿಲಯ ಲೋಕಾರ್ಪಣೆ

• ಉದಯವಾಹಿನಿ, ಮುದ್ದೇಬಿಹಾಳ

ಸರ್ಕಾರಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಓದಿದ ವಿದ್ಯಾರ್ಥಿಗಳೇ ಹೆಚ್ಚಿನ ಸಾಧನೆ ಮಾಡುತ್ತಿದ್ದು, ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶ ಪಡೆಯುತ್ತಿದ್ದಾರೆ. ಖಾಸಗಿ ಶಾಲೆಗಳ ಆಕರ್ಷಣೆಗೆ ಮರುಳಾಗದೆ ಸರ್ಕಾರಿ ಶಾಲೆಗಳ ಗುಣಮಟ್ಟದ ಶಿಕ್ಷಣದ ಸದುಪಯೋಗ ಪಡೆಯಬೇಕು, ಎಂದು ಶಾಸಕ ಹಾಗೂ ಕೆಎಸ್‌ಡಿಎಲ್ ನಿಗಮದ ಅಧ್ಯಕ್ಷ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರು ಕರೆ ನೀಡಿದರು.

ಪಟ್ಟಣದ ಮಾರುತಿ ನಗರದಲ್ಲಿ ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಎಸ್‌ಸಿಪಿ-ಟಿಎಸ್‌ಪಿ ಯೋಜನೆಯಡಿ 6.5 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣಗೊಂಡ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ನೂತನ ಕಟ್ಟಡವನ್ನು ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.



ಉದಯವಾಹಿನಿ ಚಿತ್ರ

**ಸಕಾಲದಲ್ಲಿ ಪೂರ್ಣಗೊಂಡ ಕಟ್ಟಡ:** 2023 ರಲ್ಲಿ ಈ ವಸತಿ ನಿಲಯಕ್ಕೆ ನಾನೇ ಭೂಮಿಪೂಜೆ ನೆರವೇರಿಸಿದ್ದೆ, ಈಗ ನಿಯಮಿತ ಅವಧಿಯಲ್ಲೇ ಕಾಮಗಾರಿ ಪೂರ್ಣಗೊಂಡು ಉದ್ಘಾಟನೆ ಮಾಡುತ್ತಿರುವುದು ಸಂತಸ ತಂದಿದೆ. ಮೊಬೈಲ್ ಮತ್ತು ಟಿ.ವಿ ಗೀಳಿನಿಂದ ಮಕ್ಕಳನ್ನು ದೂರವಿಡಲು ಇಂದು ಶ್ರೀಮಂತರು ಸಹ ಮಕ್ಕಳನ್ನು ಹಾಸ್ಟೆಲ್‌ಗೆ ಸೇರಿಸುತ್ತಿದ್ದಾರೆ. ಸರ್ಕಾರಿ ಹಾಸ್ಟೆಲ್‌ಗಳಲ್ಲಿ ಡಿಜಿಟಲ್ ಕ್ಲಾಸ್ ಸೇರಿದಂತೆ ಅತ್ಯುತ್ತಮ ಸೌಲಭ್ಯಗಳಿವೆ, ಎಂದು ಶಾಸಕರು ತಿಳಿಸಿದರು.

**ಗುತ್ತಿಗೆದಾರರಿಗೆ ಕಿವಿಮಾತು ಮತ್ತು ಸುರಕ್ಷತೆಗೆ ಸೂಚನೆ:** ಕಟ್ಟಡದ ಕಾಮಗಾರಿ ವೀಕ್ಷಿಸಿದ ಶಾಸಕರು, ರಸ್ತೆ ಮಟ್ಟಕ್ಕಿಂತ ಕಟ್ಟಡದ ಎತ್ತರ ಕಡಿಮೆ ಇರುವುದಕ್ಕೆ ಗುತ್ತಿಗೆದಾರರಿಗೆ ಕಿವಿಮಾತು ಹೇಳಿದರು. ಮಳೆಗಾಲದಲ್ಲಿ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಲು ಸೂಚಿಸಿದ ಅವರು, ಬಾಲಕಿಯರ ಸುರಕ್ಷತೆ ದೃಷ್ಟಿಯಿಂದ ಕಾಂಪೌಂಡ್ ಎತ್ತರವನ್ನು ಹೆಚ್ಚಿಸಿ ಅದರ ಮೇಲೆ ತಂತಿಯ ಬೇಲಿ ಅಳವಡಿಸಬೇಕು, ಎಂದು ನಿರ್ದೇಶನ ನೀಡಿದರು. ಅಲ್ಲದೆ, ಹಾಸ್ಟೆಲ್ ಬಳಿ ಮಿನಿ ಬಸ್ ನಿಲುಗಡೆ ಭರವಸೆ ನೀಡಿದರು. ಲೋಕೋಪಯೋಗಿ ಇಲಾಖೆಯ ಎಇಇ ಎ.ಬಿ. ರೆಡ್ಡಿ ಕಟ್ಟಡದ ತಾಂತ್ರಿಕ ವಿವರ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಶ್ರೀಮತಿ ಬಸಂತಿ ಮಠ ಇಲಾಖೆಯ ಸೌಲಭ್ಯಗಳ ಬಗ್ಗೆ ಮಾತನಾಡಿದರು.

ಕಾರ್ಯಕ್ರಮದಲ್ಲಿ ತಾಪಂ ಇಒ ಸಂಗನಗೌಡ ಬಿರಾದಾರ, ಮುಖಂಡರಾದ ಮಹಿಬೂಬ ಗೊಳಸಂಗಿ, ಸತೀಶ್ ಓಸ್ವಾಲ್, ಶ್ರೀಕಾಂತ ಚಲವಾದಿ, ವಿರೇಶ ಹಡಲಗೇರಿ, ಸಿಕಂದರ್ ಜಾನ್ವೇಕರ, ವಸತಿ ನಿಲಯದ ವಾರ್ಡನ್ ಹಾಗೂ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಶಿಕ್ಷಕ ಟಿ.ಡಿ. ಲಮಾಣಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಲಿಂಗ ತಾರತಮ್ಯ ಹಾಗೂ ವರದಕ್ಷಿಣೆ ಮುಕ್ತ ಸಮಾಜ ನಿರ್ಮಾಣಕ್ಕೆ ಕರೆ

### ಕೆಲಸದ ಸ್ಥಳದಲ್ಲಿ ಮಹಿಳೆಯರು ಜಾಗೃತರಾಗಿರಬೇಕು ಕಚೇರಿಯ ಸಿಬ್ಬಂದಿಗಳು ಮಹಿಳೆಯರ ಜೊತೆ ಮನೋಭಾವನೆಯಿಂದ ಇರಬೇಕು

• ಉದಯವಾಹಿನಿ, ಗದಗ

(ಪೋಶ್) ಆ್ಯಕ್ಟ್ ಉದ್ದೇಶ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಾಗುವ ದೌರ್ಜನ್ಯ ತಡೆ ಹಾಗೂ ವರದಕ್ಷಿಣೆ ಪದ್ಧತಿಯ ನಿರ್ಮೂಲನೆಯ ಕುರಿತು ಜಾಗೃತಿ ಮೂಡಿಸುವ ವಿಶೇಷ ಕಾರ್ಯಕ್ರಮದಲ್ಲಿ ಕಚೇರಿಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ನಡುವೆ ಸೌಹಾರ್ದಯುತ ವಾತಾವರಣ ಇರಬೇಕು, ಲಿಂಗ ತಾರತಮ್ಯ ಹಾಗೂ ವರದಕ್ಷಿಣೆ ಮುಕ್ತ ಸಮಾಜ ನಿರ್ಮಾಣ ಆಗಲಿಕೆ ನಾವೆಲ್ಲರೂ ಕೈ ಜೋಡಿಸಬೇಕೆಂದು ಅಂದಾಗ ಮಾತ್ರ ವರದಕ್ಷಿಣೆ ಮುಕ್ತ ಸಮಾಜ ಆಗಲಿಕೆ ಸಾಧ್ಯ ಎಂದು ಗೌರವಾನ್ವಿತ ದಿವಾನಿ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಸಿ ಎಸ್. ಶಿವನಗೌಡರ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರುಗಳ ಸಹಯೋಗದಲ್ಲಿ ಜರುಗಿದ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ(ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013ರ ಕಾಯ್ದೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಹಾಗೂ ವರದಕ್ಷಿಣೆ ನಿಷೇಧ ಕಾಯ್ದೆ 1961, ಹಾಗೂ ವಧು-ವರದಕ್ಷಿಣೆ ನಿಷೇಧ ತಡೆಗಟ್ಟುವ ಕರ್ನಾಟಕ ನಿಯಮಗಳು 2004ರ ಹಿನ್ನೆಲೆಯಲ್ಲಿ ವರದಕ್ಷಿಣೆ ಪದ್ಧತಿಯನ್ನು ತಡೆಗಟ್ಟುವ ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು. ತಾಲ್ಲೂಕು ಮಟ್ಟ ಮತ್ತು ಗ್ರಾಮ ಮಟ್ಟದ ಕಚೇರಿಗಳಲ್ಲಿ ಒಬ್ಬ ನೂಡಲ್ ಅಧಿಕಾರಿಯನ್ನು ನೇಮಿಸಬೇಕು, ಕೇವಲ ದ್ವೇಷ ಅಥವಾ ವೈಯಕ್ತಿಕ ಕಾರಣಗಳಿಗಾಗಿ ಅಧಿಕಾರಿಗಳ ಮೇಲೆ ಸುಳ್ಳು ದೂರು ನೀಡುವುದು ಸರಿಯಲ್ಲ ಸುಳ್ಳು ದೂರು ನೀಡುವುದು ಸಾಬೀತಾದಲ್ಲಿ ದೂರುದಾರರ ಮೇಲೆಯೂ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಿದೆ ಎಂದು ಸ್ಪಷ್ಟಪಡಿಸಿದರು.




ಉದಯವಾಹಿನಿ ಚಿತ್ರ

**ಒಂದು ದಿನದ ತರಬೇತಿ ಕಾರ್ಯಗಾರ**

> ಕೆಲಸದ ಸ್ಥಳದಲ್ಲಿ ಮಹಿಳೆಯರು ಜಾಗೃತರಾಗಿರಬೇಕು ಕಚೇರಿಯ ಸಿಬ್ಬಂದಿಗಳು ಮಹಿಳೆಯರ ಜೊತೆ ಮನೋಭಾವನೆಯಿಂದ ಇರಬೇಕು ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರಿಗೆ ಬಡ್ತಿ ಅಥವಾ ಇತರ ಆಮಿಷಗಳನ್ನು ಒಡ್ಡಿ ಅವರನ್ನು ದುರುಪಯೋಗಪಡಿಸಿಕೊಳ್ಳುವುದು ಕಾನೂನಿನ ಅಡಿಯಲ್ಲಿ ಗಂಭೀರ ಅಪರಾಧ ಎಂದು ಎಚ್ಚರಿಸಿದರು ಯಾವುದೇ ತಪ್ಪು ಮಾಡದಿದ್ದಲ್ಲಿ ಮಹಿಳೆಯರು ಭಯಪಡುವ ಅಗತ್ಯವಿಲ್ಲ . -ಸಿ ಎಸ್. ಶಿವನಗೌಡರ

# 80ರ ದಶಕದ ದುಬಾರಿ ಹೀರೋಯಿನ್!


ಈ ನಟಿಯ ಕಣ್ಣಲ್ಲಿ ಮಾಂತ್ರಿಕತೆ ಇತ್ತು. ಆಕೆಯ ಕಣ್ಣಿನ ಕಾಂತಿಗೆ ಬೆಳ್ಳಿತೆರೆ ಮಿನುಗುತ್ತಿತ್ತು. ಹೀರೋಗಳನ್ನು ಮೀರಿಸಿ ಭರ್ಜರಿ ಪೇಮೆಂಟ್ ತಗೊಳ್ತಿದ್ರು ಈ ಬೆಡಗಿ. 80ರ ದಶಕದಲ್ಲಿ ಬಾಲಿವುಡ್ ಅನ್ನು ಆಳುತ್ತಿದ್ದ ಸುಂದರಿಯೆಂದರೆ ಅವರ ಸೌಂದರ್ಯ, ಲಾವಣ್ಯ ಮತ್ತು ಅವರ ಸ್ಕ್ರೀನ್ ಪ್ರಸೆನ್ಸ್ ಉಳಿದ ದೊಡ್ಡ ತಾರೆಯರನ್ನು ಸಹ ಡಲ್ ಮಾಡುತ್ತಿತ್ತು.



ಹೀರೋಗಳೇ ಸಿನಿಮಾದ ಕೇಂದ್ರ ಬಿಂದು ಎಂದು ಪರಿಗಣಿಸಲಾಗಿದ್ದ ಸಮಯದಲ್ಲಿ, ಈ ಸುಂದರಿ, ತನ್ನ ಪ್ರಭಾವಶಾಲಿ ಸ್ಕ್ರೀನ್ ಪ್ರಸೆನ್ಸ್‌ನಿಂದ ಹೀರೋಯಿನ್ ಕೂಡಾ ಬಾಕ್ಸ್ ಆಫೀಸ್ ಸಕ್ಸಸ್ ನಿರ್ಧರಿಸಬಹುದು ಎಂದು ಸಾಬೀತುಪಡಿಸಿದರು. ನಿರ್ಮಾಪಕರು ಮತ್ತು ನಿರ್ದೇಶಕರು ಅವರ ಡೇಟ್‌ಗಳಿಗಾಗಿ ತಿಂಗಳುಗಟ್ಟಲೆ ಕಾಯುತ್ತಿದ್ದರು. ಅವರು ಅವರ ಕಾಲದ ಅತ್ಯಂತ ದುಬಾರಿ ನಟಿಯರಲ್ಲಿ ಒಬ್ಬರಾಗಿದ್ದರು. ಕುತೂಹಲಕಾರಿಯಾಗಿ, ಅವರು ಇತಿಹಾಸ ಸೃಷ್ಟಿಸಿದ ಹಿಂದಿ ಚಿತ್ರರಂಗದ ಇಬ್ಬರು ದೊಡ್ಡ ಸೂಪರ್‌ಸ್ಟಾರ್‌ಗಳೊಂದಿಗೆ ಜೋಡಿ ಆದರು. ಅಮಿತಾಬ್ ಬಚ್ಚನ್ ಅವರೊಂದಿಗಿನ ಅವರ ತೆರೆಯ ಮೇಲಿನ ಕೆಮೆಸ್ಟ್ರಿ ಜನಪ್ರಿಯ ಆಗಿದ್ದರೂ, ಜೀತೇಂದ್ರ ಅವರೊಂದಿಗಿನ ಅವರ ಜೋಡಿಯು ಬಾಕ್ಸ್ ಆಫೀಸ್ ದಾಖಲೆಗಳನ್ನು ಸ್ಥಾಪಿಸಿತು.

**ಒಂದೇ ಹೀರೋ ಜೊತೆ 26 ಮೂವಿ**

ಈ ಸುಂದರಿಯ ಕಣ್ಣುಗಳು ಮಾಂತ್ರಿಕವಾಗಿದ್ದವು. ಅವರ ನಗು ಬೆಳ್ಳಿತೆರೆಯನ್ನು ಬೆಳಗಿಸಿತು, 70 ಮತ್ತು 80 ರ ದಶಕಗಳಲ್ಲಿ ಹೀರೋಗಳಿಗೆ ಜೋಡಿಯಾಗಿ, ಬಾಲಿವುಡ್‌ನ ಹಾರ್ಟ್ ಬೀಟ್ ಆದರು. ಈ ನಟಿ ರೇಖಾ ಹೊರತು ಬೇರೆ ಯಾರೂ ಅಲ್ಲ. ಬಾಲಿವುಡ್‌ನ ಮಿಸ್ಟರಿ ಕ್ವೀನ್ ರೇಖಾ ಅವರ ವೃತ್ತಿಜೀವನವು ಹಿಂದಿ ಚಿತ್ರರಂಗದಲ್ಲಿ ಅತ್ಯಂತ ಪ್ರಸಿದ್ಧ ಮತ್ತು ವಿವಾದಾತ್ಮಕ ಪ್ರಯಾಣಗಳಲ್ಲಿ ಒಂದಾಗಿದೆ. 1970 ರ ದಶಕದಲ್ಲಿ ದಕ್ಷಿಣ ಭಾರತದಲ್ಲಿ ಜನಿಸಿದ ಈ ನಟಿ ತಮ್ಮ ನಟನೆ ಮತ್ತು ನೋಟವನ್ನು ಸುಧಾರಿಸಿಕೊಂಡಿದ್ದು ಮಾತ್ರವಲ್ಲದೆ ವಾಣಿಜ್ಯ ಚಿತ್ರರಂಗದಲ್ಲಿ ತಮ್ಮನ್ನು ತಾವು ಉನ್ನತ ಸ್ಥಾನದಲ್ಲಿ ಸ್ಥಾಪಿಸಿಕೊಂಡರು. ರೇಖಾ ಅಮಿತಾಬ್ ಬಚ್ಚನ್ ಅವರೊಂದಿಗೆ ಐಕಾನಿಕ್ ಸ್ಕ್ರೀನ್ ಜೋಡಿಯಾದರು. ಜೀತೇಂದ್ರ ಅವರೊಂದಿಗೆ ಅತ್ಯಂತ ಪ್ರಣಯ ಸಂಗಾತಿಗಳಲ್ಲಿ ಒಬ್ಬರಾದರು. ಅವರ ಸಂಭಾವನೆ ಮತ್ತು ಜನಪ್ರಿಯತೆಯು ಆ ಕಾಲದ ಅನೇಕ ಹೀರೋಗಳಿಗಿಂತ ಕಡಿಮೆಯಿಲ್ಲ. ಬಾಲಿವುಡ್ ಸೂಪರ್‌ಸ್ಟಾರ್ ಅಮಿತಾಬ್ ಬಚ್ಚನ್ ಅವರೊಂದಿಗೆ ರೇಖಾ ಅವರ ಐಕಾನಿಕ್ ಜೋಡಿಯನ್ನು ಬಾಲಿವುಡ್‌ನ ಅತ್ಯಂತ ಸ್ಮರಣೀಯ ಮತ್ತು ಭಾವನಾತ್ಮಕ ಜೋಡಿಗಳಲ್ಲಿ ಒಂದೆಂದು ಪರಿಗಣಿಸಲಾಗಿದೆ.



# ಕೊಂಕು ತೆಗೆಯುವವರ ಬಾಯಿ ಮುಚ್ಚಿಸಿದ ಕೆಡಿ

ಕೆಡಿ ತಂಡ ಆನ್‌ಲೈನ್ ನೆಗೆಟಿವ್ ವಿಮರ್ಶೆಗಳನ್ನು ತಡೆಯಲು 'ಡೆವಿಲ್' ಸಿನಿಮಾ ಮಾರ್ಗ ಅನುಸರಿಸಿದೆ. ಬುಕ್ ಮೈ ಶೋನಲ್ಲಿ ಸಿನಿಮಾಗಳ ರೇಟಿಂಗ್ ಆಯ್ಕೆಯನ್ನು ನಿಷ್ಕ್ರಿಯಗೊಳಿಸಿವೆ. ಈ ತಂತ್ರದಿಂದ ಅನಗತ್ಯ ಫ್ಯಾನ್ ವಾರ್, ಸುಳ್ಳು ವಿಮರ್ಶೆಗಳನ್ನು ತಡೆಗಟ್ಟಲು ಸಾಧ್ಯವಾಗಿದೆ. ಹಲವು ಕನ್ನಡ ಹಾಗೂ ತೆಲುಗು ಸಿನಿಮಾಗಳು ಈಗ ಇದೇ ಮಾದರಿ ಅನುಸರಿಸುತ್ತಿವೆ. ಯಾವುದೇ ಬಿಗ್ ಬಜೆಟ್ ಚಿತ್ರ ರಿಲೀಸ್ ಆಗುತ್ತದೆ ಎಂದರೆ ಅದಕ್ಕೆ ಕೊಂಕು ತೆಗೆಯುವವರು ಸಂಖ್ಯೆ ದೊಡ್ಡದಿರುತ್ತದೆ. ಈಗಿನ ಸೋಶಿಯಲ್ ಮೀಡಿಯಾ ಯುಗದಲ್ಲಿ ಇದನ್ನು ತಡೆಯುವುದು ಅಸಾಧ್ಯ. ನಾನಾ ರೀತಿಯ ಪ್ರಯತ್ನಗಳು ನಡೆದು ಕೊನೆಗೆ ಅದು ಸಾಧ್ಯವಾಗದೆ ಕೈ ಬಿಟ್ಟ ಅನೇಕ ಸಿನಿಮಾಗಳಿವೆ. ಆದರೆ, 'ಡೆವಿಲ್' ಸಿನಿಮಾ ಈ ಪ್ರಕ್ರಿಯೆಯಲ್ಲಿ ಯಶಸ್ಸು ಕಂಡಿತು. ಈಗ 'ಕೆಡಿ' ಸಿನಿಮಾ ಕೂಡ ಇದೇ ಮಾರ್ಗ ಅನುಸರಿಸಿದೆ.



'ಕೆಡಿ' ಸಿನಿಮಾ ಏಪ್ರಿಲ್ 30ರಂದು ರಿಲೀಸ್ ಆಯಿತು. ಸಿನಿಮಾ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಪಾಸಿಟಿವ್ ವಿಮರ್ಶೆಗಳು ಸಿಗುತ್ತಿವೆ. ಈ ಮಧ್ಯೆ ಬುಕ್ ಮೈ ಶೋನಲ್ಲಿ ಸಿನಿಮಾಗೆ ರೇಟಿಂಗ್ ಕೊಡುವ ಆಯ್ಕೆಯನ್ನೇ ತೆಗೆಯಲಾಗಿದೆ. ಈ ಮೂಲಕ 'ಕೆಡಿ' ಬಗ್ಗೆ ಉದ್ದೇಶಪೂರ್ವಕವಾಗಿ ಕೆಟ್ಟ ವಿಮರ್ಶೆ ಕೊಡಲು ಪ್ಲ್ಯಾನ್ ಮಾಡಿದವರು ಸಂಚು ವಿಫಲವಾಗಿದೆ.

ದರ್ಶನ್ ಅವರು ಜೈಲಿನಲ್ಲಿರುವ ಸಂದರ್ಭದಲ್ಲಿ 'ಡೆವಿಲ್' ಚಿತ್ರ ರಿಲೀಸ್ ಆಯಿತು. ಈ ಸಂದರ್ಭದಲ್ಲಿ ಚಿತ್ರಕ್ಕೆ ಕೆಲವರು ಕೆಟ್ಟದನ್ನು ಮಾಡುವ ಭಯ ತಂಡವನ್ನು ಕಾಡಿತ್ತು. ಹೀಗಾಗಿ, 'ಡೆವಿಲ್' ಟೀಂ ಕನ್ನಡದ 'ಐಪ್ಲೆಕ್ಸ್' ಮೂಲಕ ಕೋರ್ಟ್‌ಗೆ ತೆರಳಿ ಬುಕ್ ಮೈ ಶೋ ರೇಟಿಂಗ್ ಕೊಡದಂತೆ ಆದೇಶ ತಂದಿತ್ತು. 'ಡೆವಿಲ್' ಸಿನಿಮಾ ಈ ಪ್ರಯೋಗದಲ್ಲಿ ಯಶಸ್ಸು ಕಾಣುತ್ತಿದ್ದಂತೆ ಅನೇಕರು ಇದೇ ಮಾರ್ಗ ಅನುಸರಿಸಿದರು. ಸುದೀಪ್ ಅಭಿನಯದ 'ಮಾರ್ಕ್', ಅರ್ಜುನ್ ಜನ್ಯ ನಿರ್ದೇಶನದ '45', ಧನ್ವೀರ್ ನಟನೆಯ 'ಹಯಗ್ರೀವ' ಸಿನಿಮಾಗಳು ಇದೇ ತಂತ್ರ ಫಾಲೋ ಮಾಡಿದವು.

# ಸ್ಟಾರ್ ನಟಿಯರ ಜೊತೆ ತುಂಬಾಡ್ 2

ಬಹುನಿರೀಕ್ಷಿತ 'ತುಂಬಾಡ್ 2' ಸಿನಿಮಾಗಾಗಿ ಸ್ಟಾರ್ ನಟಿಯರ ಆಯ್ಕೆ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಇದು ಚಿತ್ರದ ಮೇಲಿನ ಕುತೂಹಲವನ್ನು ಮತ್ತಷ್ಟು ಹೆಚ್ಚಿಸಿದೆ. 2027ರ ಡಿಸೆಂಬರ್ 3ರಂದು ಈ ಸಿನಿಮಾ ತೆರೆಗೆ ಬರಲಿದೆ. ಚಿತ್ರದ ಮುಖ್ಯ ಭೂಮಿಕೆಯಲ್ಲಿ ನಟ ನವಾಜುದ್ದೀನ್ ಸಿದ್ಧಿಕಿ ಅವರು ನಟಿಸುತ್ತಿದ್ದಾರೆ. 2018ರಲ್ಲಿ ಬಿಡುಗಡೆಯಾದ 'ತುಂಬಾಡ್' ಸಿನಿಮಾ ಬಾಲಿವುಡ್ ಚಿತ್ರರಂಗದಲ್ಲೇ ಒಂದು ವಿಶಿಷ್ಟ ಪ್ರಯೋಗವಾಗಿತ್ತು. ರಾಹಿ ಅನಿಲ್ ಬಾರ್ವೆ ಮತ್ತು ಆನಂದ್ ಗಾಂಧಿ ನಿರ್ದೇಶನದ ಈ ಜಾನಪದ ಹಿನ್ನೆಲೆಯ ಹಾರರ್ ಥ್ರಿಲ್ಲರ್ ಸಿನಿಮಾ ಮೊದಲು ಬಿಡುಗಡೆಯಾದಾಗ ಬಾಕ್ಸ್ ಆಫೀಸ್‌ನಲ್ಲಿ ಅಷ್ಟಾಗಿ ಸದ್ದು ಮಾಡಿರಲಿಲ್ಲ. ಆದರೆ, 2024ರಲ್ಲಿ ಮರು ಬಿಡುಗಡೆ ಆದಾಗ ಈ ಸಿನಿಮಾ ದಾಖಲೆ ಮಟ್ಟದ ಕಲೆಕ್ಷನ್ ಮಾಡಿ ಎಲ್ಲರನ್ನೂ ಅಚ್ಚರಿಗೊಳಿಸಿತು. ಈ ಭರ್ಜರಿ ಯಶಸ್ಸಿನ ಬೆನ್ನಲ್ಲೇ ಈಗ ಚಿತ್ರತಂಡ ಸೀಕ್ವೆಲ್ ತಯಾರಿಗೆ ಸಜ್ಜಾಗಿದೆ. 'ತುಂಬಾಡ್' ಮೊದಲ ಭಾಗದಲ್ಲಿ ಬಹುತೇಕ ಹೊಸ ಮುಖಗಳೇ ಕಾಣಿಸಿಕೊಂಡಿದ್ದವು. ಆದರೆ ಎರಡನೇ ಭಾಗದ ಮೇಲೆ ನಿರೀಕ್ಷೆಗಳು ಹೆಚ್ಚಿರುವುದರಿಂದ, ಈ ಬಾರಿ ದೊಡ್ಡ ತಾರಾಗಣವನ್ನು ಕರೆತರಲು ನಿರ್ಮಾಪಕರು ನಿರ್ಧರಿಸಿದ್ದಾರೆ. ಇತ್ತೀಚಿನ ವರದಿಗಳ ಪ್ರಕಾರ, ಚಿತ್ರದ ಪ್ರಮುಖ ಪಾತ್ರಕ್ಕಾಗಿ ಬಾಲಿವುಡ್‌ನ ಟಾಪ್ ನಟಿಯರಾದ ಪ್ರಿಯಾಂಕಾ ಚೋಪ್ರಾ, ಕತ್ರಿನಾ ಕೈಫ್, ಆಲಿಯಾ ಭಟ್ ಅಥವಾ ದಕ್ಷಿಣದ ಲೇಡಿ ಸೂಪರ್ ಸ್ಟಾರ್ ನಯನತಾರಾ ಅವರ ಹೆಸರುಗಳನ್ನು ಪರಿಗಣಿಸಲಾಗುತ್ತಿದೆ ಎನ್ನಲಾಗಿದೆ. ಈ ಸ್ಟಾರ್ ನಟಿಯರಲ್ಲಿ ಯಾರಾದರೂ ಒಬ್ಬರು ಚಿತ್ರತಂಡಕ್ಕೆ ಸೇರಿದರೆ, ಸಿನಿಮಾ ಪ್ಯಾನ್ ಇಂಡಿಯಾ ಮಟ್ಟದಲ್ಲಿ ದೊಡ್ಡ ಕ್ರೇಜ್ ಸೃಷ್ಟಿಸುವುದರಲ್ಲಿ ಸಂಶಯವಿಲ್ಲ. ಆದರೆ ಈ ನಾಲ್ವರಲ್ಲಿ ಯಾರು ಈ ಚಾನ್ಸ್ ಗಿಟ್ಟಿಸಿಕೊಳ್ಳಲಿದ್ದಾರೆ ಎಂಬುದು ಇನ್ನು ಕುತೂಹಲವಾಗಿಯೇ ಉಳಿದಿದೆ.

# ಪೂಜಾ ಹೆಗ್ಡೆ ಇಷ್ಟದ ಕನ್ನಡ ನಟ ಯಾರು



ಮಂಗಳೂರಿನ ಮೂಲದ ಈ ಚೆಲುವೆ ಪೂಜಾ ಹೆಗ್ಡೆ ಸ್ಟಾರ್ ಪ್ಯಾನ್ ಇಂಡಿಯಾ ನಟಿ. ಬೆಳೆದಿದ್ದೆಲ್ಲ ಮುಂಬೈನಲ್ಲಿ ಆದರೆ ತಮ್ಮ ಮೂಲವನ್ನು ಮರೆತಿಲ್ಲ. ಇತ್ತೀಚೆಗಷ್ಟೆ ಮಂಗಳೂರಿಗೆ ಬಂದಿದ್ದ ಪೂಜಾ ಹೆಗ್ಡೆ, ದೈವ ಕಾರ್ಯದಲ್ಲಿ ಭಾಗಿ ಆಗಿದ್ದರು. ಈ ವೇಳೆ ಕನ್ನಡ ಚಿತ್ರರಂಗ, ಕನ್ನಡದ ತಮ್ಮ ಮೆಚ್ಚಿನ ನಟ, ಕರ್ನಾಟಕದೊಟ್ಟಿಗಿನ ತಮ್ಮ ನಂಟಿನ ಬಗ್ಗೆ ಮಾತನಾಡಿದ್ದಾರೆ. ಪೂಜಾ ಹೆಗ್ಡೆ ಸ್ಟಾರ್ ಪ್ಯಾನ್ ಇಂಡಿಯಾ ನಟಿ. ಬಾಲಿವುಡ್, ತೆಲುಗು, ತಮಿಳು ಸಿನಿಮಾಗಳಲ್ಲಿ ಬಲು ಬೇಡಿಕೆಯ ನಟಿಯಾಗಿರುವ ಪೂಜಾ ಹೆಗ್ಡೆ ಕನ್ನಡದ ಸಿನಿಮಾನಲ್ಲಿ ನಟಿಸಿಲ್ಲ ಆದರೆ ಅವರ ಮೂಲ ಕರ್ನಾಟಕವೇ. ಮಂಗಳೂರಿನ ಮೂಲದ ಈ ಚೆಲುವೆ ಬೆಳೆದಿದ್ದೆಲ್ಲ ಮುಂಬೈನಲ್ಲಿ ಆದರೆ ತಮ್ಮ ಮೂಲವನ್ನು ಮರೆತಿಲ್ಲ. ಇತ್ತೀಚೆಗಷ್ಟೆ ಮಂಗಳೂರಿಗೆ ಬಂದಿದ್ದ ಪೂಜಾ ಹೆಗ್ಡೆ, ದೈವ ಕಾರ್ಯದಲ್ಲಿ ಭಾಗಿ ಆಗಿದ್ದರು. ಜೊತೆಗೆ ತುಳು ನಾಡಿನ ಹಲವು ದೇವಾಲಯಗಳಿಗೆ ಸಹ ಭೇಟಿ ಕೊಟ್ಟು ದರ್ಶನ ಪಡೆದುಕೊಂಡರು. ತುಳುವನ್ನು ಸುಲಲಿತವಾಗಿ ಮಾತನಾಡಬಲ್ಲ ಪೂಜಾ ಹೆಗ್ಡೆ, ತಮ್ಮ ಈ ಭೇಟಿಯ ಸಂದರ್ಭ ಸ್ಥಳೀಯ ಯೂಟ್ಯೂಬ್ ಚಾನೆಲ್ ಒಂದಕ್ಕೆ ಚುಟುಕು ಸಂದರ್ಶನ ನೀಡಿರುವ ನಟಿ ಪೂಜಾ ಹೆಗ್ಡೆ, ಕರ್ನಾಟಕದ ಬಗ್ಗೆ, ಕನ್ನಡ ಚಿತ್ರರಂಗದ ಬಗ್ಗೆ, ತಮ್ಮ ಹಾಗೂ ಕರ್ನಾಟಕದ ಸಂಬಂಧದ ಬಗ್ಗೆ ಮಾತನಾಡಿದ್ದಾರೆ. ಈ ವೇಳೆ ಕನ್ನಡ ಚಿತ್ರರಂಗದಲ್ಲಿ ಮೆಚ್ಚಿನ ಯಾರು ಎಂಬುದನ್ನು ಸಹ ನಟಿ ಪೂಜಾ ಹೆಗ್ಡೆ ಹೇಳಿಕೊಂಡಿದ್ದಾರೆ. ಮೊದಲಿಗೆ 'ಕಾಂತಾರ' ಸಿನಿಮಾದ ಬಗ್ಗೆ ಮಾತನಾಡಿರುವ ನಟಿ ಪೂಜಾ ಹೆಗ್ಡೆ, 'ಬಾಲ್ಯದಿಂದಲೂ ಭೂತ, ದೈವಗಳನ್ನು, ಆಚರಣೆಗಳನ್ನು ನೋಡುತ್ತಾ ಬೆಳೆದ ನನಗೆ ಅವುಗಳ ಮಹತ್ವ ಎಲ್ಲವೂ ತಿಳಿದಿತ್ತು. ಆದರೆ 'ಕಾಂತಾರ' ಸಿನಿಮಾ ಅದನ್ನು ಇಡೀ ದೇಶಕ್ಕೆ ಪರಿಚಯಿಸಿತು. ಉತ್ತರ ಭಾರತದ ಜನ ಸಹ ಆ ಕತೆಯೊಂದಿಗೆ ಕನೆಕ್ಟ್ ಆದರು. ಅಲ್ಲಿ ಹಲವಾರು ಮಂದಿ ನನ್ನನ್ನು ದೈವದ ಬಗ್ಗೆ ಭೂತದ ಬಗ್ಗೆ ಕೇಳಲು ಆರಂಭಿಸಿದ್ದರು' ಎಂದಿದ್ದಾರೆ ಪೂಜಾ.

# ಪೊಲೀಸ್ ಠಾಣೆ ಮೆಟ್ಟಿಲೇರಿದ 'ವಸುದೇವ ಕುಟುಂಬ'

ಸಂಭಾವನೆ ಪಾವತಿಯಾಗದಿರುವ ವಿಚಾರವಾಗಿ ಸ್ಟಾರ್ ಸುವರ್ಣದ 'ವಸುದೇವ ಕುಟುಂಬ' ಧಾರಾವಾಹಿ ಕಲಾವಿದರು ನಿರ್ಮಾಪಕರ ವಿರುದ್ಧ ಪೊಲೀಸರಿಗೆ ದೂರು ನೀಡಿದ್ದಾರೆ. ಡಿಸೆಂಬರ್‌ನಿಂದಲೇ ಸಂಭಾವನೆ ಬಾಕಿ ಉಳಿದಿದೆ ಎಂದು ಕಲಾವಿದರು ಹೇಳಿದ್ದು, ಇದನ್ನು ಪ್ರಶ್ನಿಸಿದ್ದಕ್ಕೆ ನಿರ್ಮಾಪಕರು ತಮ್ಮ ಮೇಲೆ ಸುಳ್ಳು ದೂರು ನೀಡಿರುವುದಾಗಿ ಆರೋಪಿಸಿದ್ದಾರೆ. ಬಾಕಿ ಹಣ ನೀಡುವಂತೆ ಮತ್ತು ಕಿರುಕುಳದಿಂದ ರಕ್ಷಣೆ ನೀಡುವಂತೆ ದೂರಿನಲ್ಲಿ ಮನವಿ ಮಾಡಲಾಗಿದೆ. ಸ್ಟಾರ್ ಸುವರ್ಣ ಚಾನೆಲ್‌ನಲ್ಲಿ ಪ್ರಸಾರ ಕಾಣುತ್ತಿರುವ 'ವಸುದೇವ ಕುಟುಂಬ' ಧಾರಾವಾಹಿಯ ಕಲಾವಿದರು, ತಂತ್ರಜ್ಞರು ಮತ್ತು ನಿರ್ಮಾಪಕರ ನಡುವಿನ ಸಮರ ತೀವ್ರ ಸ್ವರೂಪ ಪಡೆದುಕೊಂಡಿದೆ. ಕೆಲವು ತಿಂಗಳುಗಳಿಂದಲೂ ಧಾರಾವಾಹಿಯ ನಿರ್ಮಾಪಕರು ಕಲಾವಿದರಿಗೆ ಸಂಭಾವನೆ ನೀಡಿಲ್ಲ. ಮಾತ್ರವಲ್ಲದೆ, ಆಹಾರ, ಇನ್ನಿತರೆಗಳನ್ನು ಸರಿಯಾಗಿ ನೀಡಿಲ್ಲ ಎಂಬ ಆರೋಪ ಕೇಳಿಬಂದಿದ್ದ ಬೆನ್ನಲ್ಲೇ ಈ ಬಗ್ಗೆ ಬ್ಯಾಟರಾಯನಪುರ ಪೊಲೀಸರಿಗೆ ಧಾರವಾಹಿಯ ಕಲಾವಿದರು ದೂರು ಸಲ್ಲಿಕೆ ಮಾಡಿದ್ದಾರೆ. ದೂರಿನಲ್ಲಿ ತಮಗಾದ ಅನ್ಯಾಯದ ಬಗ್ಗೆ ನಟಿ ಚೈತ್ರಾ ಉಲ್ಲೇಖಿಸಿದ್ದು, 'ವಸುದೇವ ಕುಟುಂಬ' ಧಾರಾವಾಹಿಯಲ್ಲಿ ಕಲಾವಿದೆಯಾಗಿ ಕೆಲಸ ಮಾಡುತ್ತಿದ್ದು, ನಾವು ಕಲಾವಿದರು ಕೋರಮಂಗಲ ಟಾಕೀಸ್ ಎಂಬ ನಿರ್ಮಾಣ ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಂಡಿದ್ದೇವೆ. ಆ ಒಪ್ಪಂದದ ಪ್ರಕಾರ, ನಾವು ಮಾಡಿದ ಕೆಲಸಕ್ಕೆ 30 ದಿನಗಳೊಳಗೆ ಪಾವತಿ ನೀಡಬೇಕು ಎಂದು ಉಲ್ಲೇಖಿಸಲಾಗಿದೆ.



**ಕಲಾವಿದರಿಗೆ ಸಂಭಾವನೆ ನೀಡಿಲ್ಲ**

# ಅಂದು ನಾಟ್ ಔಟ್, ಇಂದು ಔಟ್; ಇದೆಂತಹ ನ್ಯಾಯ

ಗುಜರಾತ್ ಟೈಟನ್ಸ್ v/s ಆರ್‌ಸಿಬಿ ಪಂದ್ಯದಲ್ಲಿ ರಜತ್ ಪಟಿದಾರ್ ಅವರ ವಿವಾದಿತ ಕ್ಯಾಚ್ ಚರ್ಚೆಯ ಕೇಂದ್ರಬಿಂದುವಾಗಿದೆ. ಇದೇ ರೀತಿಯ ಮಿಚೆಲ್ ಸ್ಟಾರ್ಕ್ ಕ್ಯಾಚ್ ಅನ್ನು ಹಿಂದೆ ನಾಟೌಟ್ ಎಂದು ಘೋಷಿಸಲಾಗಿತ್ತು. ಆದರೆ, ಈಗ ಪಟಿದಾರ್‌ಗೆ ಔಟ್ ತೀರ್ಪು ನೀಡಲಾಗಿದೆ. ಕ್ರಿಕೆಟ್ ನಿಯಮ 33.2.1 ಅನ್ವಯ, ಚೆಂಡು ಮತ್ತು ದೇಹದ ಮೇಲೆ ಸಂಪೂರ್ಣ ನಿಯಂತ್ರಣ ಹೊಂದಿದ್ದರೆ ಅದು ಔಟ್. ಅಂಪೈರ್‌ಗಳ ವಿಭಿನ್ನ ತೀರ್ಪುಗಳು ಗೊಂದಲ ಮೂಡಿಸಿವೆ. ಗುಜರಾತ್ ಟೈಟನ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ನಡುವಿನ ಪಂದ್ಯದಲ್ಲಿ ಆರ್‌ಸಿಬಿ ಕ್ಯಾಪ್ಟನ್ ರಜತ್ ಪಟಿದಾರ್ ಅವರ ಕ್ಯಾಚ್ ಈಗ ಚರ್ಚೆಯ ಕೇಂದ್ರ ಬಿಂದು ಆಗಿದೆ. ಕೆಲವರು ಇದನ್ನು ನಾಟೌಟ್ ಎಂದರೆ ಇನ್ನೂ ಕೆಲವರು ಔಟ್ ಎನ್ನುತ್ತಿದ್ದಾರೆ. ಹೀಗಿರುವಾಗಲೇ ಈ ಮೊದಲು ಮಿಚೆಲ್ ಸ್ಟಾರ್ಕ್ ಅವರು ಅಂತಾರಾಷ್ಟ್ರೀಯ ಪಂದ್ಯದಲ್ಲಿ ಇದೇ ಮಾದರಿಯ ಕ್ಯಾಚ್ ಹಿಡಿದಿದ್ದರು. ಇದನ್ನು ನಾಟೌಟ್ ಎಂದು ಕೊಡಲಾಗಿತ್ತು. ಆದರೆ, ಇದೇ ಮಾದರಿಯ ಕ್ಯಾಚ್ ಅನ್ನು ಔಟ್ ಎಂದು ಕೊಡಲಾಗಿದೆ. ರಜತ್ ಪಟಿದಾರ್ ಅವರು ಸಿಕ್ಸ್ ಹೊಡೆಯುವ ಪ್ರಯತ್ನ ಮಾಡಿದರು. ಆದರೆ, ಬಾಲ್ ಬೌಂಡರಿ ಗಡಿ ದಾಟಲು ವಿಫಲವಾಯಿತು. ಈ ವೇಳೆ ಓಡೋಡಿ ಬಂದ ಹೋಲ್ಡರ್ ಅವರು, ಕ್ಯಾಚ್ ಅನ್ನು ಹಿಡಿದೇ ಬಿಟ್ಟರು. ಬಾಲ್ ಅವರ ಕೈಯಲ್ಲಿ ಕುಳಿತಿತ್ತು ನಿಜ, ಆದರೆ, ನಂತರ ಬಾಲ್ ನೆಲಕ್ಕೆ ತಿಕ್ಕಿತ್ತು. ಆದಾಗ್ಯೂ, ಥರ್ಡ್ ಅಂಪೈರ್ ಔಟ್ ಎಂದರು ಕೊಟ್ಟರು. ಮಿಚೆಲ್ ಸ್ಟಾರ್ಕ್ 2023ರ ಆಶಸ್ ಸರಣಿಯಲ್ಲಿ ಬೆನ್ ಡಕೆಟ್ ಅವರ ಕ್ಯಾಚ್ ಹಿಡಿದಿದ್ದರು.

ಅಲ್ಲಿ ಸ್ಟಾರ್ಕ್ ಚೆಂಡನ್ನು ಹಿಡಿದ ನಂತರ ನೆಲಕ್ಕೆ ಉಜ್ಜುತ್ತಾ ಹೋದರು. ಆದರೆ ಅವರು ಚೆಂಡಿನ ಮೇಲೆ 'ಸಂಪೂರ್ಣ ನಿಯಂತ್ರಣ' ಹೊಂದಿಲ್ಲ ಎಂದು ನಿರ್ಧರಿಸಿ ಅಂಪೈರ್ ಅದನ್ನು 'ನಾಟ್ ಔಟ್' ನೀಡಿದ್ದರು.



# ಕೊಹ್ಲಿ ಪ್ರದರ್ಶನದ ಮೇಲೆ ನಿಂತಿದೆ ಆರ್‌ಸಿಬಿ ಗೆಲುವು

ಗುಜರಾತ್ ಟೈಟಾನ್ಸ್ ವಿರುದ್ಧದ ಆರ್‌ಸಿಬಿ ಸೋಲು, ವಿರಾಟ್ ಕೊಹ್ಲಿ ಮೇಲೆ ತಂಡದ ಅತಿಯಾದ ಅವಲಂಬನೆಯನ್ನು ಎತ್ತಿ ತೋರಿಸಿದೆ. ಕೊಹ್ಲಿ ಬೇಗ ಔಟಾದಾಗಲೆಲ್ಲಾ ಆರ್‌ಸಿಬಿ ಸೋಲುವ ಸಾಧ್ಯತೆ ಹೆಚ್ಚು ಎಂದು ಅಂಕಿಅಂಶಗಳು ಸ್ಪಷ್ಟಪಡಿಸುತ್ತವೆ. ಕೊಹ್ಲಿ ಕ್ರೀಸ್‌ನಲ್ಲಿ ದೀರ್ಘಕಾಲ ಉಳಿದಾಗ ತಂಡದ ಗೆಲುವಿನ ಶೇಕಡಾವಾರು 90% ಕ್ಕಿಂತ ಹೆಚ್ಚಿರುತ್ತದೆ. ಇತರ ಆಟಗಾರರು ಜವಾಬ್ದಾರಿ ತೆಗೆದುಕೊಳ್ಳುವುದು ಈಗ ಅನಿವಾರ್ಯವಾಗಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ 2026ರ 42 ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಗುಜರಾತ್ ಟೈಟಾನ್ಸ್ ವಿರುದ್ಧ 4 ವಿಕೆಟ್‌ಗಳ ಹೀನಾಯ ಸೋಲು ಕಂಡಿತು. ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿಗೆ ಉತ್ತಮ ಆರಂಭ ಸಿಕ್ಕಿತು. ಆದರೆ ಅನುಭವಿ ವಿರಾಟ್ ಕೊಹ್ಲಿ 13 ಎಸೆತಗಳಲ್ಲಿ 28 ರನ್‌ಗಳಿಸಿ ಔಟಾದ ಬಳಿಕ ತಂಡದ ಬ್ಯಾಟಿಂಗ್ ಸಂಪೂರ್ಣವಾಗಿ ಕುಸಿಯಿತು. ಇದರ ಪರಿಣಾಮವಾಗಿ ತಂಡವು 19.2 ಓವರ್‌ಗಳಲ್ಲಿ 155 ರನ್‌ಗಳಿಗೆ ಆಲೌಟ್ ಆಯಿತು. ಈ ಗುರಿ ಬೆನ್ನಟ್ಟಿದ ಗುಜರಾತ್ ಟೈಟಾನ್ಸ್ ಸುಲಭವಾಗಿ ಜಯ ಸಾಧಿಸಿತು. ವಿರಾಟ್ ಕೊಹ್ಲಿ ಬೇಗನೇ ಔಟಾದಗಲೇ ಆರ್‌ಸಿಬಿ ಸೋಲು ಖಚಿತವಾಗಿತ್ತು. ಏಕೆಂದರೆ ಅಂಕಿ ಅಂಶಗಳು ಕೂಡ ಇದನ್ನೇ ಹೇಳಿದ್ದವು. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಆರಂಭದಿಂದಲೂ ವಿರಾಟ್ ಕೊಹ್ಲಿಯ ಮೇಲೆ ಅವಲಂಬಿತವಾಗಿದೆ. ಆದರೆ ಕಳೆದ ಎರಡು ಆವೃತ್ತಿಗಳಿಂದ ತಂಡದ ಸೋಲು, ಗೆಲುವು ನಿಶ್ಚಯವಾಗುವುದು ಕೊಹ್ಲಿಯ ಪ್ರದರ್ಶನದ ಮೇಲೆ ಎಂಬಂತ್ತಾಗಿದೆ. ಅಂಕಿ ಅಂಶಗಳು ಕೂಡ ಇದನ್ನೇ ಹೇಳುತ್ತಿದ್ದು, ಕೊಹ್ಲಿ ಕ್ರೀಸ್‌ನಲ್ಲಿ ಉಳಿದು ದೀರ್ಘ ಇನ್ನಿಂಗ್ಸ್ ಆಡಿದಾಗ, ತಂಡವು ಹೆಚ್ಚಿನ ಪಂದ್ಯಗಳನ್ನು ಗೆದ್ದಿದೆ. ಆದರೆ ಕೊಹ್ಲಿ ಬೇಗನೆ ಔಟಾದಾಗ, ಆರ್‌ಸಿಬಿ ಹೆಚ್ಚು ಪಂದ್ಯಗಳನ್ನು ಸೋತಿದೆ. ಕಳೆದ ಆವೃತ್ತಿಯಿಂದ ವಿರಾಟ್ ಕೊಹ್ಲಿ 40 ರನ್‌ಗಳಿಗಿಂತ ಕಡಿಮೆ ರನ್‌ಗಳಿಗೆ ಔಟಾದಾಗಲೆಲ್ಲಾ, ಆರ್‌ಸಿಬಿಯ ಗೆಲುವಿನ ಶೇಕಡಾವಾರು ಕೇವಲ 33.33% ರಷ್ಟಿದೆ.



# ಸಿಕ್ಸರ್ ಬಾರಿಸಿದ ಸೂರ್ಯವಂಶಿಗೆ ವಾರ್ನಿಂಗ್!

ರಾಜಸ್ಥಾನ್ ಪಂದ್ಯವೆಂದರೆ ಮೊದಲಿಗೆ ಗುರುತಿಗೆ ಬರೋದು ವೈಭವ್ ಸೂರ್ಯವಂಶಿ. 15ರ ಪೋರ ರಾಜಸ್ಥಾನ್ ರಾಯಲ್ಸ್ ಪರ ಅದ್ಭುತ ಪ್ರದರ್ಶನ ತೋರುತ್ತಿದ್ದಾರೆ. ಈ ಯುವ ಆಟಗಾರ ಇಂದು ಯಾವ ಸಾಧನೆ ಮಾಡುಬಹುದು ಎಲ್ಲರೂ ಕಾತುರದಿಂದ ನೋಡುತ್ತಿದ್ದಾರೆ. ಏಕೆಂದರೆ ಆತ ಪ್ರತೀ ಪಂದ್ಯದಲ್ಲಿ ಏನಾದರೂ ಒಂದು ಹೊಸ ದಾಖಲೆ ಮಾಡುತ್ತಿದ್ದಾರೆ.

ಶುಕ್ರವಾರ ಐಪಿಎಲ್‌ನ 43ನೇ ಪಂದ್ಯ ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ನಡೆಯಲಿದ್ದು, ರಾಜಸ್ಥಾನ ರಾಯಲ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿಯಾಗಲಿವೆ.ರಾಜಸ್ಥಾನ ರಾಯಲ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ನಡುವಿನ ಪಂದ್ಯ ಸಂಜೆ 7.30 ಕ್ಕೆ ಆರಂಭವಾಗಲಿದೆ. ಈ ಪಂದ್ಯ ಗೆದ್ದರೆ ರಾಜಸ್ಥಾನ್ ರಾಯಲ್ಸ್ ಆರ್‌ಸಿಬಿ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳನ್ನ ಹಿಂದಿಕ್ಕಿ ಅಗ್ರಸ್ಥಾನಕ್ಕೇರಲಿದೆ. ಒಂದು ವೇಳೆ ಡೆಲ್ಲಿ ಗೆದ್ದರೆ ಪ್ಲೇ ಆಫ್ ರೇಸ್‌ಗೆ ಮರಳಲಿದೆ. ಹಾಗಾಗಿ ಈ ಪಂದ್ಯವನ್ನ ಡೆಲ್ಲಿ ಗೆಲ್ಲಲೇಬೇಕಾದ ಒತ್ತಡದಲ್ಲಿದೆ. ರಾಜಸ್ಥಾನ್ ಪಂದ್ಯವೆಂದರೆ ಮೊದಲಿಗೆ ಗುರುತಿಗೆ ಬರೋದು ವೈಭವ್ ಸೂರ್ಯವಂಶಿ. 15ರ ಪೋರ ರಾಜಸ್ಥಾನ್ ರಾಯಲ್ಸ್ ಪರ ಅದ್ಭುತ ಪ್ರದರ್ಶನ ತೋರುತ್ತಿದ್ದಾರೆ. ಈ ಯುವ ಆಟಗಾರ ಇಂದು ಯಾವ ಸಾಧನೆ ಮಾಡುಬಹುದು ಎಲ್ಲರೂ ಕಾತುರದಿಂದ ನೋಡುತ್ತಿದ್ದಾರೆ. ಏಕೆಂದರೆ ಆತ ಪ್ರತೀ ಪಂದ್ಯದಲ್ಲಿ ಏನಾದರೂ ಒಂದು ಹೊಸ ದಾಖಲೆ ಮಾಡುತ್ತಿದ್ದಾರೆ.

ಹಾಗಾಗಿ ಪಂದ್ಯಕ್ಕೆ ಕೆಲವೇ ಗಂಟೆಗಳು ಬಾಕಿ ಇರುವಾಗ, 15 ವರ್ಷದ ವೈಭವ್ ಸೂರ್ಯವಂಶಿಗೆ ಒಂದು ದೊಡ್ಡ ಎಚ್ಚರಿಕೆ ಬಂದಿದೆ. ಲೆಜೆಂಡರಿ ಬೌಲರ್ ಇಯಾನ್ ಬಿಷಪ್ ವೈಭವ್‌ಗೆ ಈ ಎಚ್ಚರಿಕೆ ನೀಡಿದ್ದಾರೆ. ಐಪಿಎಲ್‌ನಲ್ಲಿ ವೈಭವ್ ಸೂರ್ಯವಂಶಿ ಅನುಭವಿ ಬೌಲರ್‌ಗಳನ್ನು ಮೊದಲ ಎಸೆತದಲ್ಲೇ ಸಿಕ್ಸರ್‌ಗಳಿಗೆ ಗುರಿಪಡಿಸುವುದನ್ನು ನೋಡಿದ್ದೇವೆ. ಮುಂಬೈ ವಿರುದ್ಧ ಆಡುವಾಗ, ವೈಭವ್ ಸೂರ್ಯವಂಶಿ ಜಸ್ಪ್ರಿತ್ ಬುಮ್ರಾ ಅವರ ಬೌಲಿಂಗ್‌ಗೆ ಸಿಕ್ಸರ್ ಬಾರಿಸಿದ್ದರು. ಅದಾದ ನಂತರ, ಆರ್‌ಸಿಬಿ ವಿರುದ್ಧ ಆಡುವಾಗ, ವೈಭವ್ ಸೂರ್ಯವಂಶಿ ಕೂಡ ಟೀಮ್ ಇಂಡಿಯಾದ ಅನುಭವಿ ಬೌಲರ್‌ಗಳಾದ ಭುವನೇಶ್ವರ್ ಕುಮಾರ್ ಮತ್ತು ಜೋಶ್ ಹ್ಯಾಜಲ್‌ವುಡ್ ಅವರ ಮೊದಲ ಎಸೆತದಲ್ಲಿ ಒಂದು ಸಿಕ್ಸರ್ ಮತ್ತು ಒಂದು ಬೌಂಡರಿ ಬಾರಿಸಿದ್ದರು. ಇಂದು ಆಸ್ಟ್ರೇಲಿಯದ ಮಿಚೆಲ್ ಸ್ಟಾರ್ಕ್ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಸೇರಿಕೊಂಡಿದ್ದಾರೆ. ಹಾಗಾಗಿ, ಅವರು ಡೆಲ್ಲಿ ಪರ ತಮ್ಮ ಮೊದಲ ಪಂದ್ಯವನ್ನು ಆಡುವ ಸಾಧ್ಯತೆಯಿದೆ. ಹಾಗೊಂದು ವೇಳೆ ಸಂಭವಿಸಿದರೆ, ಸ್ಟಾರ್ಕ್ ಇಂದು ವೈಭವ್ ಸೂರ್ಯವಂಶಿಯನ್ನ ಎದುರಿಸಲಿದ್ದಾರೆ. ಈಗ, ಬುಮ್ರಾ, ಭುವಿ ಮತ್ತು ಜೋಶ್ ಹ್ಯಾಜಲ್‌ವುಡ್ ಅವರ ಮೊದಲ ಎಸೆತದಲ್ಲಿ ವೈಭವ್ ಸಿಕ್ಸರ್ ಮತ್ತು ಬೌಂಡರಿ ಬಾರಿಸಿದಂತೆ, ಮಿಚೆಲ್ ಸ್ಟಾರ್ಕ್ ವಿರುದ್ಧವೂ ಅವರು ಅದೇ ಸಾಧನೆ ಮಾಡಲು ಸಾಧ್ಯವಾಗುತ್ತದೆಯೇ ಎಂದು ವೆಸ್ಟ್ ಇಂಡೀಸ್‌ನ ಮಾಜಿ ವೇಗಿ ಇಯಾನ್ ಬಿಷಪ್ ಅವರನ್ನು ಪ್ರಶ್ನಿಸಲಾಗಿದ್ದು, ಈ ಬಾರಿ ಅವರು ನಕಾರಾತ್ಮಕವಾಗಿ ಉತ್ತರಿಸಿದ್ದಾರೆ.



**ಲೆಜೆಂಡರಿ ಬೌಲರ್ ಶಾಕಿಂಗ್ ಹೇಳಿಕೆ!**

# ಕಮ್‌ಬ್ಯಾಕ್ ಭವಿಷ್ಯ ನುಡಿದ ಸೆಹ್ವಾಗ್

ಭಾರತದ ಮಾಜಿ ಆರಂಭಿಕ ಬ್ಯಾಟರ್ ವೀರೇಂದ್ರ ಸೆಹ್ವಾಗ್, 4 ವರ್ಷಗಳಿಂದ ಟೀಮ್ ಇಂಡಿಯಾ ಸೇರಲು ಕಾಯುತ್ತಿರುವ ಅನುಭವಿ ಬೌಲರ್ ಪರ ಧ್ವನಿ ಎತ್ತಿದ್ದಾರೆ. ಈ ಆಟಗಾರನಿಗೆ ಮತ್ತೆ ಟೀಮ್ ಇಂಡಿಯಾದಲ್ಲಿ ಅವಕಾಶ ನೀಡುವಂತೆ ಬಿಸಿಸಿಐ ಆಯ್ಕೆದಾರರಿಗೆ ಮನವಿ ಮಾಡಿದ್ದಾರೆ. ಟಿ20 ಮಾದರಿಯನ್ನು ಯಾವಾಗಲೂ ಯುವ ಆಟಗಾರರಿಗೆ ಸೀಮಿತವಾದ ಆಟವೆಂದು ಹೇಳಲಾಗುತ್ತದೆ. ಆದರೆ, 36 ವರ್ಷದ ಭಾರತೀಯ ಆಟಗಾರ ಐಪಿಎಲ್ 2026 ರಲ್ಲಿ ಎಲ್ಲರನ್ನೂ ಮೀರಿಸಿದ್ದಾರೆ.

ಈ ಆಟಗಾರನ ಹೆಸರು ಭುವನೇಶ್ವರ್ ಕುಮಾರ್. ಐಪಿಎಲ್ 2026ರಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ಭುವನೇಶ್ವರ್ ಅದ್ಭುತ ಬೌಲಿಂಗ್ ಪ್ರದರ್ಶನ ನೀಡುತ್ತಿದ್ದಾರೆ. ಸತತ ವಿಕೆಟ್‌ಗಳನ್ನು ಕಬಳಿಸುವ ಮೂಲಕ ಅವರು ಪರ್ಪಲ್ ಕ್ಯಾಪ್‌ಗಾಗಿ ರೇಸ್‌ನಲ್ಲಿ ಮುಂಚೂಣಿಯಲ್ಲಿದ್ದಾರೆ.

ಭುವನೇಶ್ವರ್ ಕುಮಾರ್ ಕಳೆದ ನಾಲ್ಕು ವರ್ಷಗಳಲ್ಲಿ ಅವರು ಟೀಮ್ ಇಂಡಿಯಾ ಪರ ಒಂದೇ ಒಂದು ಪಂದ್ಯವನ್ನು ಆಡಿಲ್ಲ. ಇಂತಹ ಪರಿಸ್ಥಿತಿಯಲ್ಲಿ ಭಾರತದ ಮಾಜಿ ಆರಂಭಿಕ ಬ್ಯಾಟರ್ ವೀರೇಂದ್ರ ಸೆಹ್ವಾಗ್, ಭುವನೇಶ್ವರ ಕುಮಾರ್ ಅವರಿಗೆ ಟಿ20 ಸ್ವರೂಪಕ್ಕೆ ಮರಳಲು ಅವಕಾಶ ನೀಡುವಂತೆ ಬಿಸಿಸಿಐ ಆಯ್ಕೆದಾರರಿಗೆ ಮನವಿ ಮಾಡಿದ್ದಾರೆ.

ಐಪಿಎಲ್ 2026 ರಲ್ಲಿ ಭುವನೇಶ್ವರ್ ಕುಮಾರ್ ಅವರ ಅದ್ಭುತ ಪ್ರದರ್ಶನವನ್ನು ಸೆಹ್ವಾಗ್ ಶ್ಲಾಘಿಸಿದ್ದಾರೆ. ಅವರನ್ನು ವಿಂಟೇಜ್ ಭುವಿ ಎಂದು ಕರೆದಿದ್ದಾರೆ. ಭುವನೇಶ್ವರ್ ಇನ್ನೂ ತಮ್ಮ ಹಳೆಯ ಪ್ರತಿಭೆ ಮತ್ತು ಕೌಶಲ್ಯವನ್ನು ಪ್ರದರ್ಶಿಸುತ್ತಿದ್ದಾರೆ ಎಂದು ಅವರು ಹೇಳಿದ್ದಾರೆ. ಮುಖ್ಯ ವಿಷಯವೆಂದರೆ ಅವರು ಬಲಿಷ್ಠ ತಂಡಗಳ ಅಗ್ರ ಬ್ಯಾಟರ್‌ಗಳ ವಿರುದ್ಧ ನಿರಂತರವಾಗಿ ಉತ್ತಮ ಪ್ರದರ್ಶನ ನೀಡುತ್ತಿದ್ದಾರೆ ಎಂದು ಹೊಗಳಿದಿದ್ದಾರೆ.

ಕ್ರಿಕ್‌ಬಜ್‌ಗೆ ನೀಡಿದ ಸಂದರ್ಶನದಲ್ಲಿ, ಸೆಹ್ವಾಗ್, ಭುವನೇಶ್ವರ್ ಕುಮಾರ್ ಅದ್ಭುತವಾಗಿ ಬೌಲಿಂಗ್ ಮಾಡುತ್ತಿದ್ದಾರೆ. ಅವರು ಪ್ರತಿ ಪಂದ್ಯದಲ್ಲೂ ಎರಡರಿಂದ ಮೂರು ವಿಕೆಟ್‌ಗಳನ್ನು ಪಡೆಯುತ್ತಿದ್ದಾರೆ. ಇಂದು ಅವರು ಮೂರು ವಿಕೆಟ್‌ಗಳನ್ನು ಕಬಳಿಸಿದ್ದಾರೆ.

ಕೆಲವೊಮ್ಮೆ ಅವರು 35 ಅಥವಾ 36 ವರ್ಷ ವಯಸ್ಸಿನವರಾಗಿದ್ದರೆ, ಅದು ಏನು ವ್ಯತ್ಯಾಸವನ್ನುಂಟು ಮಾಡುತ್ತದೆ ಎಂದು ನಾನು ಆಶ್ಚರ್ಯ ಪಡುತ್ತೇನೆ ಅವರು ಅಷ್ಟು ಚೆನ್ನಾಗಿ ಬೌಲಿಂಗ್ ಮಾಡುತ್ತಿದ್ದರೆ, ಅವರಿಗೆ ಖಂಡಿತವಾಗಿಯೂ ಟಿ20 ಕ್ರಿಕೆಟ್‌ಗೆ ಮರಳಲು ಅವಕಾಶ ನೀಡಬೇಕು. ಆಯ್ಕೆದಾರರು ಅವರನ್ನು ಟೀಮ್ ಇಂಡಿಯಾಗೆ ಪರಿಗಣಿಸಬೇಕು ಎಂದು ಹೇಳಿದ್ದಾರೆ. ಜಸ್ಪ್ರೀತ್ ಬುಮ್ರಾ ಮತ್ತು ಭುವನೇಶ್ವರ ಕುಮಾರ್ ಜೋಡಿ ಮತ್ತೊಮ್ಮೆ ಅದ್ಭುತಗಳನ್ನು ಸೃಷ್ಟಿಸಬಹುದು. ಈ ಇಬ್ಬರು ದಿಗ್ಗಜ ಬೌಲರ್‌ಗಳು ಹೊಸ ಮತ್ತು ಹಳೆಯ ಚೆಂಡುಗಳೊಂದಿಗೆ ಬೌಲಿಂಗ್ ಮಾಡುತ್ತಾರೆ.



ಭುವನೇಶ್ವರ್ ಕುಮಾರ್ ವಿಂಟೇಜ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದು, ಅವರ ಬೌಲಿಂಗ್ ನೋಡುವುದು ನಿಜಕ್ಕೂ ಸಂತೋಷದ ಸಂಗತಿ. ಅವರು ಒಂದು ಅಥವಾ ಎರಡು ತಂಡಗಳ ವಿರುದ್ಧ ಮಾತ್ರವಲ್ಲ, ಅಗ್ರ ಶ್ರೇಯಾಂಕದ ಬ್ಯಾಟರ್‌ಗಳ ವಿರುದ್ಧವೂ ಬೌಲಿಂಗ್ ಮಾಡುತ್ತಾರೆ. ಇಲ್ಲಿಯವರೆಗೆ ಅವರು ಬೌಲಿಂಗ್ ಮಾಡಿದ ಪ್ರತಿಯೊಂದು ತಂಡದ ವಿರುದ್ಧವೂ ಅವರು ಅತ್ಯುತ್ತಮ ಪ್ರದರ್ಶನ ನೀಡಿದ್ದಾರೆ ಎಂದು ಸೆಹ್ವಾಗ್ ಹೇಳಿದ್ದಾರೆ. ಐಪಿಎಲ್ 2026 ರಲ್ಲಿ ಭುವನೇಶ್ವರ್ ಕುಮಾರ್ ಪರ್ಪಲ್ ಕ್ಯಾಪ್ ರೇಸ್‌ನಲ್ಲಿ ಮುಂಚೂಣಿಯಲ್ಲಿದ್ದಾರೆ. ಅವರು 9 ಪಂದ್ಯಗಳಲ್ಲಿ 7.54 ರ ಎಕಾನಮಿ ರೇಟ್‌ನೊಂದಿಗೆ 17 ವಿಕೆಟ್‌ಗಳನ್ನು ಪಡೆದಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966